ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೬೬

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತಾರನೆಯ ಅಧಿವೇಶನ**

**ಸೋಮವಾರ, ದಿನಾಂಕ : ೧೮ನೇ ಆಗಸ್ಟ್, ೨೦೨೫**

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

# ಮಾವುತರ ಕಾವಾಡಿಗರು ಮತ್ತು ಜಮಾದಾರರ ಸೇವೆ ಹಾಗೂ ಸೌಲಭ್ಯದ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೨ (೭೭೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮಂದಿ ಮಾವುತರು, ಕಾವಾಡಿಗರು ಹಾಗೂ ಜಮಾದಾರರು ಸೇವೆಯಲ್ಲಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವಿಭಾಗದಲ್ಲಿ ಒಟ್ಟು ರಾಜ್ಯದಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಮುಂದಿನ ದಿನಗಳಲ್ಲಿ ಮಾವುತರು, ಕಾವಾಡಿಗರು ಮತ್ತು ಜಮಾದಾರರ ನೇಮಕಾತಿಗೆ ಸರ್ಕಾರದಿಂದ ಹೊಸದಾಗಿ ಪ್ರಕ್ರಿಯೆ ಕೈಗೊಳ್ಳಾಗುವುದೆ ; (ಕೈಗೊಂಡಿದ್ದಲ್ಲಿ ವಿವರ ಒದಗಿಸುವುದು)

(ಇ) ಇವರುಗಳಿಗೆ ೭ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ನೀಡಲಾಗುತ್ತಿದೆಯೇ ; ನೀಡಲಾಗುತ್ತಿಲ್ಲವೆಂದರೆ ಕಾರಣಗಳೇನು ;

(ಈ) ಹೊಸ ಜಿಲ್ಲೆ, ತಾಲ್ಲೂಕು, ಪಾಲಿಕೆ, ವ್ಯಾಪ್ತಿಗಳಲ್ಲಿ ಮಾವುತರಿಗೆ ಶಿಬಿರಗಳ ಸ್ಥಾಪನೆಯು ಸರ್ಕಾರದಿಂದ ಆಗುತ್ತಿದೆಯೇ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ಒದಗಿಸುವುದು)

(ಉ) ಇವರುಗಳ ಮಕ್ಕಳಿಗೆ ಮೂಲಭೂತ ಸೌಕರ್ಯಗಳಾದ ಆರೋಗ್ಯ ಸೇವೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಜನೌಷಧಿ ಕೇಂದ್ರಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೩ (೭೮೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕರಿಗೆ ಅಗ್ಗದ ದರದಲ್ಲಿ ಔಷಧಿಗಳು ಲಭ್ಯವಾಗುವ ಉದ್ದೇಶದಿಂದ ಸ್ಥಾಪಿಸಲಾಗಿದ್ದ ಜನೌಷಧಿ ಕೇಂದ್ರಗಳನ್ನು ರಾಜ್ಯ ಸರ್ಕಾರವು ಸ್ಥಗಿತಗೊಳಿಸಲು ಕಾರಣಗಳೇನು ; ಈ ನಿರ್ಧಾರದಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿರ್ಧಾರವನ್ನು ಪುನರ್ ಪರಿಶೀಲನೆ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ ;

(ಇ) ಜನೌಷಧಿ ಕೇಂದ್ರಗಳನ್ನು ಪುನರ್ ಪ್ರಾರಂಭಿಸುವ ಕುರಿತು ಸರ್ಕಾರದ ಯೋಜನೆಯೇನು ?

## ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೪ (೭೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಗ್ರಾಮೀಣ ಪ್ರದೇಶಗಳಲ್ಲಿ (ಪಿ.ಹೆಚ್.ಸಿ) ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಇವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಅನೇಕ ಗ್ರಾಮೀಣ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಕೊರತೆ ಇದೆ ಎಂಬ ಮಾಹಿತಿ ಸರ್ಕಾರದ ಬಳಿ ಇದೆಯೇ ;

(ಇ) ಈ ಕೊರತೆಯನ್ನು ನಿವಾರಿಸಲು ಹೊಸದಾಗಿ ಈ ಕೇಂದ್ರಗಳನ್ನು ಸ್ಥಾಪನೆ ಮಾಡುವ ಕುರಿತು ಸರ್ಕಾರದ ಸ್ಪಷ್ಟ ಯೋಜನೆಗಳೇನು ; (ವಿವರ ಒದಗಿಸುವುದು)

(ಈ) ಈ ಕೇಂದ್ರಗಳಿಗೆ ಸಿಬ್ಬಂದಿ ನೇಮಕಾತಿ ಮತ್ತು ಮೂಲಸೌಕರ್ಯ ನಿರ್ಮಾಣದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉದ್ಯೋಗ ಮೇಳಗಳಲ್ಲಿ ಉದ್ಯೋಗ ಸೃಷ್ಟಿ ಆಗಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೫ (೭೮೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯಾದ್ಯಂತ ನಡೆಸಲಾದ ಉದ್ಯೋಗ ಮೇಳಗಳ ಸಂಖ್ಯೆ ಎಷ್ಟು ಹಾಗೂ ಎಷ್ಟು ಉದ್ಯೋಗಗಳನ್ನು ಸೃಷ್ಟಿ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೌಶಲ್ಯಾಭಿವೃದ್ಧಿಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಪಡೆಯಲು ಸರ್ಕಾರದ ಮುಂದಿರುವ ಯೋಜನೆಗಳಾವುವು ;

(ಇ) ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸ್ವಂತ ಗುಡಿ ಕೈಗಾರಿಕೆಗಳನ್ನು ಉದ್ಯೋಗ ಕೈಗೊಳ್ಳಲು ಸರ್ಕಾರ ಯಾವ ರೀತಿ ಸಹಾಯ ಮಾಡಲಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂ ಮಾಡುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೬ (೬೬೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನ ಇಲಾಖೆಯ ವ್ಯಾಪ್ತಿಗೆ ಒಳಪಡುವ ನಿಗಮ–ಮಂಡಳಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಯಾವ ಯಾವ ಗ್ರೂಪ್ ಹಂತದ ಅಧಿಕಾರಿ/ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ; (ನಿಗಮವಾರು ಮಾಹಿತಿ ಒದಗಿಸುವುದು)

(ಆ) ಈಗಾಗಲೇ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಕಳೆದ ೧೫ ವರ್ಷದಲ್ಲಿ ಎಷ್ಟು ಸಿಬ್ಬಂದಿಗಳನ್ನು ಖಾಯಂ ಮಾಡಲಾಗಿದೆ ;

(ಇ) ಗುತ್ತಿಗೆ ನೌಕರರನ್ನು ತೆಗೆದು ಹಾಕುವ ಹಾಗೂ ಮರು ನೇಮಕ ಮಾಡುವ ನಿಯಮ ನಿಗಮದಲ್ಲಿ ಇದೆಯೇ ? (ವಿವರ ನೀಡುವುದು)

# ಸರ್ಕಾರಿ ಶಾಲೆಗಳ ಶೌಚಾಲಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೭ (೬೬೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಣ್ಣು ಮಕ್ಕಳ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯವಿಲ್ಲದೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹೆಣ್ಣು ಮಕ್ಕಳ ಸರ್ಕಾರಿ ಶಾಲೆಗಳಲ್ಲಿ ದುರಸ್ತಿ ಪಡಿಸಬೇಕಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ ಮಾಡಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಸರ್ಕಾರಿ ಉರ್ದು ಶಾಲೆಗಳ ಶೌಚಾಲಯಗಳ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೮ (೬೬೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಉರ್ದು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಉರ್ದು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದುರಸ್ತಿ ಪಡಿಸಬೇಕಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಸರ್ಕಾರಿ ಉರ್ದು ಶಾಲೆಗಳಲ್ಲಿ ಶೌಚಾಲಯ ನಿರ್ಮಾಣ ಮಾಡಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪದವಿ ಪೂರ್ವ ಕಾಲೇಜು ಬೋಧಕ–ಬೋಧಕೇತರ ಸಿಬ್ಬಂದಿಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೯ (೬೨೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳು ಮುಚ್ಚಲ್ಪಟ್ಟಿರುವುದು ನಿಜವೇ ; ಇದ್ದಲ್ಲಿ, ಯಾವ ನಿಯಮಗಳಡಿ ಮುಚ್ಚಲ್ಪಟ್ಟಿವೆ ? (ತಾಲ್ಲೂಕುವಾರು ವಿವರ ನೀಡುವುದು)

## ಬಿಪಿಎಲ್ ಪಡಿತರ ಚೀಟಿ, ಎಪಿಎಲ್ ಕಾರ್ಡ್ ಆಗಿ ಬದಲಾವಣೆಯಾಗಿರುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೦ (೬೭೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಬಿಪಿಎಲ್ ಪಡಿತರ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗಳಾಗಿ ವರ್ಗಾಯಿಸಿರುವುದು ನಿಜವೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರಿಂದ ಕೂಲಿ ಕಾರ್ಮಿಕರು, ಆಟೋ ಚಾಲಕರಿಗೆ, ಬೀದಿ ಬದಿ ವ್ಯಾಪಾರಿಗಳು ಮತ್ತು ಇತರೆ ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿಯವರಿಗೆ ಮತ್ತೆ ಬಿಪಿಎಲ್ ಪಡಿತರ ಚೀಟಿಗಳನ್ನಾಗಿ ವರ್ಗಾಯಿಸಲು ಎಷ್ಟು ಸಮಯಾವಕಾಶ ಬೇಕಾಗುತ್ತದೆ ; (ವಿವರ ನೀಡುವುದು)

(ಈ) ಈ ಎಪಿಎಲ್ ಕಾರ್ಡ್‌ಗಳಿಂದ ಭಾಗ್ಯಲಕ್ಷ್ಮಿ ಸೌಲಭ್ಯ ಪಡೆಯಲು ಕ್ಯಾನ್ಸರ್, ಹೃದಯ ಚಿಕಿತ್ಸೆ, ಕಿಡ್ನಿ ಸಮಸ್ಯೆ ಮುಂತಾದ ಮಾರಣಾಂತಿಕ ಕಾಯಿಲೆಗಳಿಗೆ ಉಚಿತ ಅಥವಾ ರಿಯಾಯಿತಿ ಚಿಕಿತ್ಸೆ ಪಡೆಯಲು ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಬಡವರ ಅನುಕೂಲಕ್ಕಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಸಿಂಧನೂರು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೧ (೭೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿಗೆ ಕಳೆದ ಎರಡು ವರ್ಷಗಳಿಂದ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು ;

(ಆ) ಯಾವ ಯಾವ ಕಾಮಗಾರಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಯಾಗಿದೆ ;

(ಇ) ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಉಳಿದ ಅನುದಾನ ಎಷ್ಟು ;

(ಈ) ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಸಮರ್ಪಕವಾದ ಔಷಧಿಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಔಷಧಿಗಳ ಅಸಮರ್ಪಕ ಪೂರೈಕೆಯಿಂದ ರೋಗಿಗಳು ಖಾಸಗಿ ಔಷಧಾಲಯಗಳಿಂದ ಔಷಧಿಗಳನ್ನು ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ?

# ಪಡಿತರ ಚೀಟಿದಾರರಿಗೆ ಆಹಾರ ಧಾನ್ಯಗಳನ್ನು ಸಮರ್ಪಕವಾಗಿ ವಿತರಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೨ (೭೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಮತ್ತು ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ಎ.ಪಿ.ಎಲ್. ಬಿ.ಪಿ.ಎಲ್)

(ಆ) ಯಾವ ಯಾವ ನ್ಯಾಯಬೆಲೆ ಅಂಗಡಿಗಳಿಗೆ ಎಷ್ಟೆಷ್ಟು ಪ್ರಮಾಣದಲ್ಲಿ ಆಹಾರ ಧಾನ್ಯಗಳನ್ನು ಸರ್ಕಾರದಿಂದ ವಿತರಿಸಲಾಗುತ್ತಿದೆ ;

(ಇ) ಪಡಿತರ ಚೀಟಿ ಮತ್ತು ನ್ಯಾಯಬೆಲೆ ಅಂಗಡಿಗಳ ಮೇಲಿರುವ ದೂರುಗಳು ಸರ್ಕಾರದ ಗಮನಕ್ಕೆ ಇದೆಯೇ ; ಇದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಪಡಿತರ ಚೀಟಿದಾರರ ಹಕ್ಕಿನಂತೆ ವಿತರಿಸಬೇಕಾದ ಪಡಿತರ ವಸ್ತುಗಳ ಗುಣಮಟ್ಟ, ದರ ಮತ್ತು ವಿತರಣಾ ಪ್ರಮಾಣಗಳನ್ನು ಕುರಿತ ದೂರುಗಳು ಸರ್ಕಾರದ ಗಮನಕ್ಕೆ ಇದೆಯೇ ;

(ಉ) ನ್ಯಾಯಬೆಲೆ ಅಂಗಡಿಗಳು ನಿಗದಿತ ವೇಳೆಯಲ್ಲಿ ಕಾರ್ಯನಿರ್ವಹಿಸದಿರುವ ಬಗೆಗಿನ ದೂರುಗಳು ಮತ್ತು ಅನರ್ಹ/ ನಕಲಿ ಪಡಿತರ ಚೀಟಿಗಳು ಮತ್ತು ಪಡಿತರ ವಸ್ತುಗಳ ದುರ್ಬಳಕೆ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸಿಂಧನೂರು ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೩ (೭೦೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ಸಿಂಧನೂರು ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಯಾಗಿದೆ ;

(ಇ) ಪ್ರಗತಿಯಲ್ಲಿರುವ ಯೋಜನೆಗಳಾವುವು ;

(ಈ) ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಹೆಚ್ಚಾಗಿ ದಾಖಲಾತಿ ಮಾಡಿಕೊಳ್ಳಲು ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ?

## ಸಿಂಧನೂರು ತಾಲ್ಲೂಕಿನ ಬಂಜರು ಭೂಮಿಯನ್ನು ಅರಣ್ಯೀಕರಣಗೊಳಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೪ (೭೦೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿಗೆ ಬಂಜರು ಭೂಮಿಯನ್ನು ಅರಣೀಕರಣಗೊಳಿಸಲು ಸರ್ಕಾರವು ಮಂಜೂರು ಮಾಡಿರುವ ಯೋಜನೆಗಳಾವುವು ;

(ಆ) ಯೋಜನೆಗಳಿಗೆ ಅರಣ್ಯೀಕರಣ ಹಾಗೂ ಸಾಮಾಜಿಕ ಅರಣ್ಯ ಬೆಳೆಸಲು ಮಂಜೂರು ಮಾಡಿರುವ ಅನುದಾನವೆಷ್ಟು ;

(ಇ) ಯಾವ-ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಯಾಗಿದೆ ?

## ರಾಜ್ಯದಲ್ಲಿ ಶಾಲಾ ಶಿಕ್ಷಣದ ಪರಿಸ್ಥಿತಿಯ ಅಧ್ಯಯನ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೫೬೫ (೭೩೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಾಲಾ ಶಿಕ್ಷಣದ ಗುಣಮಟ್ಟವನ್ನು ಅಧ್ಯಯನ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; (ವಿವರ ಒದಗಿಸುವುದು)

(ಆ) ೧೦ನೇ ತರಗತಿಯ ಪರೀಕ್ಷೆಗಳನ್ನು ಕಟ್ಟುನಿಟ್ಟಾಗಿ ನಡೆಸಿದ್ದರಿಂದ ಫಲಿತಾಂಶದ ಮೇಲೆ ಯಾವ ರೀತಿಯ ಪರಿಣಾಮಗಳು ಉಂಟಾಗಿರುತ್ತದೆ ; ಇದನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಟ್ಟುನಿಟ್ಟಾದ ಪರೀಕ್ಷಾ ವ್ಯವಸ್ಥೆ ಹೊಂದಿದಾಗ ಫಲಿತಾಂಶದ ಪ್ರಮಾಣ ಕುಸಿಯದಂತೆ ಮಾಡಲು ೧ನೇ ತರಗತಿಯಿಂದ ಶಿಕ್ಷಣ ಪದ್ಧತಿಯನ್ನು ಯಾವ ಯಾವ ಹಂತದಲ್ಲಿ ಯಾವ ಯಾವ ಕ್ರಮಗಳಿಂದ ಸುಧಾರಣಾತ್ಮಕ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಚಿಂತಿಸಿದೆ ? (ವಿವರ ಒದಗಿಸುವುದು)

## ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಕಾರ್ಯಭಾರದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೬೬ (೬೩೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೦೨೪, ೨೦೨೪-೨೦೨೫, ೨೦೨೫-೨೦೨೬ ಶೈಕ್ಷಣಿಕ ಸಾಲಿನಲ್ಲಿ ನಿರ್ದೇಶನಾಯಲದ ಮಾರ್ಗಸೂಚಿಯಂತೆ

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಕೊರತೆಯಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ; ಸದರಿ ಉಪನ್ಯಾಸಕರನ್ನು ಕಾರ್ಯಭಾರವಿರುವ ಪದವಿ ಪೂರ್ವ ಕಾಲೇಜಿಗೆ ವರ್ಗಾವಣೆ ಮಾಡಲಾಗಿದೆಯೇ ;

(ಆ) ಈ ಉಪನ್ಯಾಸಕರನ್ನು ವಾರದಲ್ಲಿ ಮೂರು ದಿನ ಇನ್ನೊಂದು ಕಾಲೇಜಿಗೆ ನಿಯೋಜನೆ ಮಾಡಲಾಗಿದೆಯೇ ಹಾಗೂ ಈ ರೀತಿ ನಿಯೋಜನೆ ಮಾಡಿದ ಉಪನ್ಯಾಸಕರ ಸಂಖ್ಯೆ ಎಷ್ಟು ; ಕಾರ್ಯಭಾರ ಕೊರತೆ ಇರುವ ಎಲ್ಲಾ ಉಪನ್ಯಾಸಕರನ್ನು ಯಾವ ಕಾರಣದಿಂದ, ವಾರದಿಂದ ಮೂರು ದಿನಗಳಿಗೆ ಯೋಜನೆ ಮಾಡಿರುವುದಿಲ್ಲ ; (ಜಿಲ್ಲಾವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಈ ಬಗ್ಗೆ ಯಾವುದೇ ಸ್ಪಷ್ಟ ಆದೇಶ ಅಥವಾ ಮಾರ್ಗಸೂಚಿಗಳಿವೆಯೇ ; ನಿರ್ದೇಶನಾಲಯದ ಮಾರ್ಗಸೂಚಿಯಂತೆ ನಿಯೋಜನೆ ಮಾಡಲು ಸೂಕ್ತ ಮಾನದಂಡವಿದೆಯೇ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಈ ರೀತಿಯ ನಿಯೋಜನೆಯಿಂದ ವೈಜ್ಞಾನಿಕವಾಗಿ ವೇಳಾಪಟ್ಟಿ ತಯಾರಿಸಿ ಗುಣಾತ್ಮಕ ಶಿಕ್ಷಣವನ್ನು ನೀಡಲು ಸಾಧ್ಯವೆ ; ಈ ಬಗ್ಗೆ ಶಿಕ್ಷಣ ತಜ್ಞರ ಅಥವಾ ಮಾನಸಿಕ ತಜ್ಞರ ಅಭಿಪ್ರಾಯವನ್ನು ಪಡೆಯಲಾಗಿದೆಯೇ ; (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

(ಉ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಕೇವಲ ಪಠ್ಯ ಬೋಧನೆಯ ಕರ್ತವ್ಯ ನಿರ್ವಹಿಸುತ್ತೀದ್ದಾರೆಯೇ ; ಅಥವಾ ಇತರ ಪಠ್ಯೇತರ ಚಟುವಟಿಕೆಗಳನ್ನು ಒಳಗೊಂಡ ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ; ನಿರ್ದೇಶನಾಲಯ ನಿಗದಿಪಡಿಸಿಲು ಕಾರ್ಯಭಾರದ ಬೋಧನೆಯನ್ನು ಮುಗಿಸಿದ ನಂತರ

ಉಪನ್ಯಾಸಕರು ಕರ್ತವ್ಯದಿಂದ ತೆರಳಬಹುದೇ ; ವಿದ್ಯಾರ್ಥಿಗಳಿಗೆ ಒಂದು ವಾರದಲ್ಲಿ ಮಾಡಬೇಕಾದ ಬೋಧನೆಯನ್ನು ಮೂರು ದಿನಗಳಲ್ಲಿ ಬೋಧನೆ ಮಾಡಲು ಯಾವ ಶೈಕ್ಷಣಿಕ ಮಾನದಂಡಗಳಲ್ಲಿ ಅವಕಾಶವಿದೆ ? (ಜಿಲ್ಲಾವಾರು ಹಾಗೂ ಕಳೆದ 5 ಶೈಕ್ಷಣಿಕ ವರ್ಷಗಳ ಅಂಕಿ ಅಂಶಗಳನ್ನು ಪ್ರತ್ಯೇಕವಾಗಿ ನೀಡುವುದು)

## ಸರ್ಕಾರಿ ಶಾಲೆಯ ಗುಣಮಟ್ಟ ಮತ್ತು ಶಿಕ್ಷಕರ ಸಮಸ್ಯೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೬೭ (೬೯೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; ಈ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಕೊರತೆ ಎದ್ದು ಕಾಣುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟ ಹೆಚ್ಚಿಸಲು ಸರ್ಕಾರವು ಕೈಗೊಂಡ ಕಾರ್ಯಕ್ರಮಗಳೇನು ; ವಿಶೇಷವಾಗಿ ಹಳ್ಳಿಗಳಲ್ಲಿ ಮತ್ತು ಪಟ್ಟಣಗಳಲ್ಲಿ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟವನ್ನು ಹೆಚ್ಚಿಸಿ, ಸರ್ಕಾರಿ ಶಾಲೆಯನ್ನು ಮಾದರಿ ಶಾಲೆಯನ್ನಾಗಿಮಾಡುವಲ್ಲಿ ಸರ್ಕಾರವು ಕೈಗೊಳ್ಳಲಿರುವ ಕ್ರಮಗಳಾವುವು ;

(ಇ) ಸರ್ಕಾರಿ ಶಾಲೆಗಳಲ್ಲಿನ ಶೌಚಾಲಯಗಳು ಶುಚಿತ್ವದಿಂದ ಕೂಡಿರದೇ, ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ತೊಂದರೆಯಾಗುತ್ತಿರುವುದು ಮತ್ತು ದುರ್ವಾಸನೆಯ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರಿ ಶಾಲೆಗಳು ಹಳೇ ಕಟ್ಟಡಗಳಿಂದ ಕೂಡಿದ್ದು, ಅಭಿವೃದ್ಧಿಗಾಗಿ ಸರ್ಕಾರವು ಕೊಡುವ ಒತ್ತುಗಳೇನು ಹಾಗೂ ಯಾವ ಕಾಲಮಿತಿ ಒಳಗೆ ಅಭಿವೃದ್ಧಿಗೊಳಿಸಲು ಕ್ರಮವಹಿಸಲಾಗುವುದು ;

(ಉ) ರಾಜ್ಯದಲ್ಲಿ ಅನುದಾನಿತ/ಅನುದಾನರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ಎಷ್ಟು ; ಈ ಶಿಕ್ಷಕರುಗಳಿಗೆ ಇರುವ ಸೌಲಭ್ಯಗಳೇನು ; (ಪೂರ್ಣ ವಿವರ ನೀಡುವುದು)

(ಊ) ಅನುದಾನಿತ/ಅನುದಾನರಹಿತ ಶಾಲೆಗಳಲ್ಲಿನ ಶಿಕ್ಷಕರುಗಳು ಹಲವು ರೀತಿಯ ಬೇಡಿಕೆ ಮತ್ತು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಮಸ್ಯೆಗಳನ್ನು ಈಡೇರಿಸುವಲ್ಲಿ ಸರ್ಕಾರದ ಕ್ರಮವೇನು ;

(ಋ) ಸರ್ಕಾರಿ ಶಾಲೆಗಳಲ್ಲಿನ ಶಿಕ್ಷಕರುಗಳಿಗೆ ಕಾಲಕಾಲಕ್ಕೆ ಮುಂಬಡ್ತಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಕೊರತೆಯಿಂದ ಉಪನ್ಯಾಸಕರಿಗೆ ಕಾರ್ಯಭಾರ ಸರಿಪಡಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೬೮ (೭೦೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಕೊರತೆಯಿರುವ ಉಪನ್ಯಾಸಕರಿಗೆ ಕಾರ್ಯಭಾರ ಸರಿಪಡಿಸಲು ಯಾವುದೇ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳು ಲಭ್ಯವಿಲ್ಲದಿದ್ದಲ್ಲಿ, ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ ;

(ಆ) ಈಗಾಗಲೇ ಸದನದಲ್ಲಿ ಸರ್ಕಾರವು ಭರವಸೆ ನೀಡಿದಂತೆ, ಶೂನ್ಯ ಕಾರ್ಯಭಾರದ ಕಾರಣ ನೀಡಿ ಸೇವೆಯಿಂದ ವಿಮುಕ್ತಿಗೊಳಿಸಿರುವ ಉಪನ್ಯಾಸಕರಿಗೆ ಪರ್ಯಾಯ ವ್ಯವಸ್ಥೆ ಮಾಡಿ ಸೇವಾ ಭದ್ರತೆ ನೀಡಲಾಗಿದೆಯೇ ;

(ಇ) ಸರ್ಕಾರಿ ಆದೇಶ ಸಂಖ್ಯೆ: ಇಪಿ/೦೯/ಟಿಪಿಯು/೨೦೨೪, ದಿನಾಂಕ: ೧೨.೦೯.೨೦೨೪ ರಲ್ಲಿ ಶೂನ್ಯ ಕಾರ್ಯವಿರುವ ಉಪನ್ಯಾಸಕರನ್ನು ನಿಯೋಜನೆ ಮಾಡಲು ಯಾವುದೇ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆ ಇಲ್ಲದಿದ್ದಾಗ ಸೇವೆಯಿಂದ ವಿಮುಕ್ತಿಗೊಳಿಸದೆ ಪರ್ಯಾಯ ವ್ಯವಸ್ಥೆ ಮಾಡಿಕೊಂಡು ಸೇವಾ ಭದ್ರತೆಯನ್ನು ನೀಡಲು ಆದೇಶದಲ್ಲಿ ತಿದ್ದುಪಡಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಾನಾ ಕಾರಣಗಳಿಂದ ತೆರವಾದ ಹುದ್ದೆಗಳಿಗೆ ಸರ್ಕಾರ ತುಂಬಲು ಅವಕಾಶ ನೀಡುವವರೆಗೆ, ಪಠ್ಯ ಬೋಧನೆ ಮಾಡಲು ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದೆ ; ಸರ್ಕಾರದಿಂದ ಭರ್ತಿಗೆ ಅವಕಾಶ ನೀಡುವವರೆಗೆ ಪಠ್ಯಬೋಧನೆಗೆ ಉಪನ್ಯಾಸಕರ ನೇಮಕಾತಿಗೆ ಯಾವ ಮಾನದಂಡದಡಿಯಲ್ಲಿ ಯಾರು, ಯಾವ ರೀತಿಯಲ್ಲಿ ನೇಮಕ ಮಾಡಲಾಗುವುದು ;

(ಉ) ಹೊಸ ಆದೇಶದಂತೆ ಕಾರ್ಯಭಾರ ಸರಿದೂಗಿಸಲು ಮತ್ತೊಂದು ಪದವಿ ಪೂರ್ವ ಕಾಲೇಜಿನ ಖಾಲಿ ಹುದ್ದೆಗೆ ನಿಯೋಜನೆ ಮಾಡಿದಾಗ ಈಗಾಗಲೇ ಆಡಳಿತ ಮಂಡಳಿಯಿಂದ ನೇಮಕವಾಗಿ ಕರ್ತವ್ಯ ನಿರ್ವಹಿಸಿರುವ ಉಪನ್ಯಾಸಕರಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ ಅಥವಾ ಪೂರ್ಣಕಾಲಿಕವಾಗಿ ನೇಮಕ ಮಾಡಲು ಅವಕಾಶ ಹಾಗೂ ಸ್ಪಷ್ಟ ಮಾರ್ಗಸೂಚಿಗಳಿವೆಯೇ ; ಸರ್ಕಾರ ಹುದ್ದೆ ತುಂಬಲು ಅವಕಾಶ ನೀಡಿದಾಗ ಅವರನ್ನೇ ಅನುದಾನಕ್ಕೆ ಒಳಪಡಿಸಲು ಅವಕಾಶವಿದೆಯೇ ; ಹೊಸ ನೇಮಕ ಮಾಡಿದ್ದಲ್ಲಿ, ಈ ಉಪನ್ಯಾಸಕರಿಗೆ ಪರ್ಯಾಯ ವ್ಯವಸ್ಥೆ ಮಾಡಲು ಅವಕಾಶವಿದೆಯೇ ತಿಳಿಸುವುದು ;

(ಊ) ೨೦೨೪ರ ಆದೇಶದ ಪೂರ್ವದಲ್ಲಿ ಹುದ್ದೆಯನ್ನು ವೇತನಾನುದಾನಕ್ಕೆ ಒಳಪಡಿಸುವಾಗ ಕಾರ್ಯಭಾರದ ಆಧಾರದಲ್ಲಿ ಅಥವಾ ಒಂದು ವಿಷಯಕ್ಕೆ ಒಂದು ಉಪನ್ಯಾಸಕರ ನೆಲೆಯಲ್ಲಿ ಅನುದಾನ ನೀಡಲಾಗಿದೆಯೇ ; ಕಾರ್ಯಭಾರ ಕೊರತೆಯಿರುವ ಉಪನ್ಯಾಸಕರಿಗೆ, ಕಾರ್ಯಭಾರವನ್ನು ಸರಿದೂಗಿಸಲು ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಸರಿ ಸಮಾನವಾದ ಖಾಲಿ ಹುದ್ದೆಗಳಿವೆಯೇ ; ಇದ್ದಲ್ಲಿ, ಈ ಬಗ್ಗೆ ಸಾಧಕ–ಬಾಧಕಗಳನ್ನು, ತಜ್ಞರ ಅಭಿಪ್ರಾಯ ಪಡೆದುಕೊಂಡು ಸರ್ಕಾರದ ಸಾಮಾಜಿಕ ಬದ್ಧತೆ ಹಾಗೂ ಉದ್ಯೋಗಿಗೆ ಸೇವಾ ಭದ್ರತೆ ನೀಡುವ ನಿಟ್ಟಿನಲ್ಲಿ ಹೊಸ ಆದೇಶವನ್ನು ಹೊರಡಿಸಲಾಗಿದೆಯೇ ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೫೬೯ (೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಈ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ವಿವಿಧ ದರ್ಜೆಯ ಹುದ್ದೆಗಳನ್ನು ತ್ವರಿತಗತಿಯಲ್ಲಿ ನೇಮಕಾತಿಗೊಳಿಸಲು ಇರುವ ಸರ್ಕಾರದ ಸಕಾಲಿಕ ಕ್ರಮಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಸರ್ಕಾರಿ ವ್ಯಾಪ್ತಿಯ ಆರೋಗ್ಯ ಸೇವೆಯನ್ನು ಗ್ರಾಮೀಣರು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿರುವುದರಿಂದ ಸರ್ಕಾರದ ಆದ್ಯತೆಯ

ಮೇರೆಗೆ ಸಿಬ್ಬಂದಿ ವರ್ಗ ಮತ್ತು ಮೂಲಸೌಕರ್ಯ ಸೌಲಭ್ಯಗಳನ್ನು ಒದಗಿಸಿಕೊಟ್ಟು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಈ) ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಆಸ್ಪತ್ರೆಗಳನ್ನೇ ಅವಲಂಬಿಸಿದ್ದು, ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವಾ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಮತ್ತು ಕ್ರಮಗಳು ಯಾವುವು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೃದಯಾಘಾತ ಪ್ರಕರಣಗಳನ್ನು ಸರ್ಕಾರ ನಿಭಾಯಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೫೭೦ (೬೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೃದಯಾಘಾತದಿಂದ ಕಳೆದ 5 ವರ್ಷಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ 2025ರಲ್ಲಿ ಎಷ್ಟು ಜನರಿಗೆ ಹೃದಯಾಘಾತವಾಗಿದೆ ; ಎಷ್ಟು ಜನ ಮರಣ ಹೊಂದಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲಾಮಟ್ಟದ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಹೃದಯಾಘಾತಕ್ಕೆ ಚಿಕಿತ್ಸೆ ನೀಡಲು ಯಾವ ರೀತಿಯಲ್ಲಿ ಸಜ್ಜುಗೊಳಿಸಲಾಗಿದೆ ;

(ಈ) ತುಮಕೂರು ಜಿಲ್ಲೆಯ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ಸ್ಟೆಮಿ ಯೋಜನೆ ಜಾರಿಗೊಳಿಸಲಾಗಿದೆ ; ಅವು ಯಾವುವು ; ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಸ್ಟೆಮಿ ಯೋಜನೆ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳವುದೇ ; ಕೈಗೊಳ್ಳದಿದಲ್ಲಿ, ಯಾವ ಕಾಲಮಿತಿಯಲ್ಲಿ ಕೈಗೊಳ್ಳುವುದು ;

(ಉ) ರಾಜ್ಯದಲ್ಲಿ ಇತ್ತೀಚೆಗೆ ಹೃದಯಾಘಾತ ಪ್ರಕರಣಗಳು ಹೆಚ್ಚಾಗುತ್ತಿದ್ದು ಸದರಿ ಪ್ರಕರಣಗಳನ್ನು ಸಮರ್ಥವಾಗಿ ನಿಭಾಯಿಸಲು ಆರೋಗ್ಯ ಇಲಾಖೆಯನ್ನು ಸರ್ಕಾರ ಯಾವ ರೀತಿಯಲ್ಲಿ ಸಜ್ಜುಗೊಳಿಸಲಾಗಿದೆ ?

## ಬೆಂಗಳೂರಿನಲ್ಲಿ ವಾಯು ಗುಣಮಟ್ಟ ಕುಸಿತದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೫೭೧ (೬೫೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ಬೆಂಗಳೂರಿನ ವಾಯು ಗುಣಮಟ್ಟ ಸೂಚ್ಯಾಂಕದ ಸರಾಸರಿ ಎಷ್ಟು ; (ವರ್ಷವಾರು ನೀಡುವುದು)

(ಆ) ಮಾರ್ಗಸೂಚಿಗಳ ಪ್ರಕಾರ ಉತ್ತಮ ಗಾಳಿಯು ಎಷ್ಟು ವಾಯುಗುಣಮಟ್ಟ ಸುಚ್ಯಾಂಕವನ್ನು ಹೊಂದಿರಬೇಕು ;

(ಇ) ನಗರದ ಹಲವು ಪ್ರದೇಶಗಳಲ್ಲಿ ವಾಯುಗುಣಮಟ್ಟ ತೀವ್ರವಾಗಿ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಗಾಳಿಯ ಗುಣಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ನಗರದಲ್ಲಿ ಬಡಾವಣೆ ನಿರ್ಮಾಣ ಮಾಡಲು, ಹಲವೆಡೆ ಸರ್ಕಾರಿ ಇಲಾಖೆಗಳೇ ಅರಣ್ಯ ಇಲಾಖೆಯ ಅನುಮತಿಯನ್ನೂ ಕೇಳದೆ ಸಾವಿರಾರು ಮರಗಳನ್ನು ಕಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಉ) ಬೆಂಗಳೂರು ನಗರದಲ್ಲಿ ಅರಣ್ಯೀಕರಣ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಊ) ಯಲಹಂಕ ಬಳ ಶ್ವಾಸತಾಣ ಉದ್ಯಾನ ನಿರ್ಮಾಣ ಮಾಡಲಾಗುವುದೇ ; ನಿರ್ಮಾಣ ಮಾಡುವುದಿದ್ದರೆ ಎಷ್ಟು ಎಕರೆ ಭೂ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗುವುದು ಮತ್ತು ಯಾವ ಕಾಲಮಿತಿಯಲ್ಲಿ ನಿರ್ಮಾಣ ಮಾಡಲಾಗುವುದು ; ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ನಾಯಿ ಕಡಿತ ಪ್ರಕರಣಗಳನ್ನು ತಡೆಗಟ್ಟುವ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೫೭೨ (೯೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಸಂಭವಿಸಿರುವ ನಾಯಿ ಕಡಿತ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ವಿವರಗಳನ್ನು ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ನಾಯಿ ದಾಳಿಯಿಂದ ಗಂಭೀರ ಗಾಯಗೊಂಡು ಮೃತಪಟ್ಟ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಕಳೆದ ೨ ವರ್ಷಗಳಲ್ಲಿ ದಾಖಲಾದ ರೇಬಿಸ್ ಪ್ರಕರಣಗಳೆಷ್ಟು ; ರೇಬಿಸ್‌ನಿಂದ ಮೃತಪಟ್ಟ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ರೇಬಿಸ್ ಕುರಿತು ಜಾಗೃತಿ ಮೂಡಿಸಲು ಮತ್ತು ರೇಬಿಸ್ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ನಾಯಿ ಕಡಿತ ಮತ್ತು ರೇಬಿಸ್ ಪ್ರಕರಣಗಳನ್ನು ನಿಯಂತ್ರಿಸಲು ಮತ್ತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಅನುದಾನಿತ ಶಾಲಾ ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೫೭೩ (೬೯೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ೨೦೧೫ ರಿಂದ ೨೦೨೦ರವರೆಗೆ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಅನುಮತಿ ನೀಡಲಾಗಿದೆ ; ನೀಡಿದ್ದಲ್ಲಿ, ಆದೇಶದ ಪ್ರತಿ ನೀಡುವುದು ;

(ಆ) ಈ ಆದೇಶದ ಅನ್ವಯ ನೇಮಕಾತಿ ಪ್ರಕ್ರಿಯೆ ನಡೆಸಲಾಗುತ್ತಿದೆಯೇ ; ನಡೆಸುತ್ತಿದ್ದಲ್ಲಿ, ಯಾವ ತಂತ್ರಾಂಶದ ಮೂಲಕ ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ ; ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಂಡಿದ್ದಲ್ಲಿ, ಕಾರಣಗಳನ್ನು ನೀಡುವುದು ;

(ಇ) ಈಗಾಗಲೇ ಈ ತಂತ್ರಾಂಶದ ಮೂಲಕ ಖಾಲಿಯಿರುವ ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳ ನೇಮಕಾತಿಗೆ ಅರ್ಜಿಗಳು ಅಥವಾ ಪ್ರಸ್ತಾವನೆಗಳು ಸ್ವೀಕೃತಗೊಂಡಿವೆ ; ಸ್ವೀಕೃತಗೊಂಡಿರುವ ಪ್ರಸ್ತಾವನೆಗಳಲ್ಲಿ ಎಷ್ಟು ಆದೇಶ ನೀಡಲಾಗಿದೆ ;

(ಈ) ಈ ತಂತ್ರಾಂಶದ ಮೂಲಕ ಪ್ರಸ್ತಾವನೆಗಳನ್ನು ಸಲ್ಲಿಸಲು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ತೊಂದರೆಯಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಳೀಕರಣಗೊಳಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು ?

# ರಾಜ್ಯದಲ್ಲಿನ ಪಡಿತರ ಚೀಟಿ ರಹಿತ ಜನರಿಗೆ ಪಡಿತರ ಚೀಟಿ ನೀಡುವ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೫೭೪ (೬೯೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಡಿತರ ಚೀಟಿ ಇಲ್ಲದೆ ಇರುವ ಕುಟುಂಬಗಳೆಷ್ಟು ;

(ಆ) ಸರ್ಕಾರದ ಗ್ಯಾರಂಟಿ ಯೋಜನೆಯೂ ಸೇರಿದಂತೆ, ಸರ್ಕಾರದ ವಿವಿಧ ಯೋಜನೆ ಮತ್ತು ಕೆಲಸ ಕಾರ್ಯಗಳಿಗೆ ಪಡಿತರ ಚೀಟಿ ಕಡ್ಡಾಯವಿರುವುದರಿಂದ ಪಡಿತರ ಚೀಟಿ ಇಲ್ಲದೆ ಜನರು ಸಂಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ಎಲ್ಲಾ ಕುಟುಂಬಗಳಿಗೆ ಪಡಿತರ ಚೀಟಿ ಒದಗಿಸಲು ಇರುವ ತೊಡಕುಗಳೇನು ;

(ಈ) ಎ.ಪಿ.ಎಲ್. ಪಡಿತರ ಚೀಟಿ ಒದಗಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ, ವಿತರಿಸಲು ಇರುವ ತೊಂದರೆಗಳೇನು ;

(ಉ) ರಾಜ್ಯದಲ್ಲಿರುವ ಒಟ್ಟು ಕುಟುಂಬಗಳೆಷ್ಟು ; ಪ್ರಸ್ತುತ ವಿತರಿಸಿರುವ ಪಡಿತರ ಚೀಟಿಗಳು (ಎ.ಪಿ.ಎಲ್/ಬಿ.ಪಿ.ಎಲ್) ಎಷ್ಟು ; ಕಳೆದ ೨ ವರ್ಷಗಳಲ್ಲಿ ರದ್ದಾದ ಪಡಿತರ ಚೀಟಿಗಳೆಷ್ಟು ;

(ಊ) ಅರ್ಹರಿಗೆ ಪಡಿತರ ಚೀಟಿ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಕನಿಷ್ಠ ಎ.ಪಿ.ಎಲ್. ಪಡಿತರ ಚೀಟಿ ಒದಗಿಸುವ ಕುರಿತು ಸರ್ಕಾರ ಕೈಗೊಳ್ಳಲಿರುವ ಕ್ರಮಗಳಾವುವು ?

# ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್ ಅಂಕಪಟ್ಟಿ ಮುದ್ರಣದಲ್ಲಿನ ಅಕ್ರಮ ಕುರಿತು

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೫೭೫ (೬೯೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನರ್ಸಿಂಗ್ ಮತ್ತು ಪ್ಯಾರ ಮೆಡಿಕಲ್ ಎಜುಕೇಶನ್ ಬೋರ್ಡ್‌ನಲ್ಲಿ ವಿದ್ಯಾರ್ಥಿಗಳ ಬೋರ್ಡ್‌ನಲ್ಲಿ, ವಿದ್ಯಾರ್ಥಿಗಳ ಅಂಕಪಟ್ಟಿ, ಇಂಟರ್ನ್‌ಷಿಪ್ ಮತ್ತು ಡಿಪ್ಲೋಮ ಕೋರ್ಸ್ ಸರ್ಟಿಫಿಕೇಟ್‌ಗಳನ್ನು ಮುದ್ರಿಸಲು ತಗಲುವ ವೆಚ್ಚವೆಷ್ಟು ;

(ಆ) ೨೦೨೧ ರಿಂದ ಪ್ರಸಕ್ತ ವರ್ಷದವರೆಗೆ ಅಂಕಪಟ್ಟಿ, ಇಂಟರ್ನ್‌ಷಿಪ್ ಮತ್ತು ಡಿಪ್ಲೋಮ ಕೋರ್ಸ್ ಸರ್ಟಿಫಿಕೇಟ್‌ಗಳನ್ನು ಮುದ್ರಿಸಲು ಆಗಿರುವ ವೆಚ್ಚವೆಷ್ಟು ; (ಪ್ರತಿ ಒಂದು ಸರ್ಟಿಫಿಕೇಟ್ ಅನ್ನು ಮುದ್ರಿಸಲು ತಗಲುತ್ತಿರುವ ವೆಚ್ಚದ ಸಹಿತ ಮಾಹಿತಿ ನೀಡುವುದು)

(ಇ) ಕರ್ನಾಟಕ ನರ್ಸಿಂಗ್ ಮತ್ತು ಪ್ಯಾರ ಮೆಡಿಕಲ್ ಎಜುಕೇಶನ್ ಬೋರ್ಡ್‌ನಡಿ ಬರುವ ಎಲ್ಲಾ ಕೋರ್ಸ್‌ಗಳ ಸರ್ಟಿಫಿಕೇಟ್‌ಗಳನ್ನು ಮುದ್ರಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ;

(ಈ) ೨೦೨೪–೨೫ನೇ ಸಾಲಿನಲ್ಲಿ ಕರ್ನಾಟಕ ನರ್ಸಿಂಗ್ ಮತ್ತು ಪ್ಯಾರ ಮೆಡಿಕಲ್ ಎಜುಕೇಶನ್ ಬೋರ್ಡ್‌ನಲ್ಲಿ ವಿದ್ಯಾರ್ಥಿಗಳ ಅಂಕಪಟ್ಟಿ, ಇಂಟರ್ನ್‌ಷಿಪ್ ಮತ್ತು ಡಿಪ್ಲೋಮ ಕೋರ್ಸ್ ಸರ್ಟಿಫಿಕೇಟ್‌ಗಳನ್ನು ಮುದ್ರಿಸಲು ಯಾವಾಗ ಟೆಂಡರ್ ಕರೆಯಲಾಗಿದೆ ; ಟೆಂಡರ್ ಯಾವ ಕಂಪನಿಗೆ ನೀಡಲಾಗಿದೆ ಹಾಗೂ ಪ್ರತಿ ಒಂದು ಸರ್ಟಿಫಿಕೇಟ್ ಮುದ್ರಣಕ್ಕೆ ಎಷ್ಟು ದರ ನಿಗದಿ ಮಾಡಲಾಗಿದೆ ; (ಟೆಂಡರ್‌ಗೆ ಸಂಬಂಧಪಟ್ಟ ವಿವರವಾದ ಮಾಹಿತಿ ನೀಡುವುದು)

(ಉ) ಕರ್ನಾಟಕ ನರ್ಸಿಂಗ್ ಮತ್ತು ಪ್ಯಾರ ಮೆಡಿಕಲ್ ಎಜುಕೇಶನ್ ಬೋರ್ಡ್‌ನಡಿ ಬರುವ ಎಲ್ಲಾ ಕೋರ್ಸ್‌ಗಳ ಸರ್ಟಿಫಿಕೇಟ್‌ಗಳನ್ನು

ಮುದ್ರಣ ಸಂಬಂಧ ನಡೆದಿರುವ ಅಕ್ರಮಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಮೈಸೂರು ಜಿಲ್ಲೆಯ ಗಂಗೂಬಾಯಿ ಹಾನಗಲ್ ವಿಶ್ವವಿದ್ಯಾಲಯದ ಸಿಬ್ಬಂದಿಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೬ (೭೫೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ಗಂಗೂಬಾಯಿ ಹಾನಗಲ್ ವಿಶ್ವವಿದ್ಯಾಲಯದ ಸಂಗೀತ ಕಲಾ ಪ್ರದರ್ಶಕಗಳ ವಿಶ್ವವಿದ್ಯಾಲಯಕ್ಕೆ ಮತ್ತು ಕರ್ನಾಟಕದ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿನ ಖಾಯಂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಎಷ್ಟು ಮತ್ತು ಇಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಆ) ವಿಶ್ವವಿದ್ಯಾಲಯವು ಪ್ರಸಿದ್ಧ ಕಲಾವಿದರಿಂದ ವಿಶೇಷ ತರಬೇತಿ ಮತ್ತು ಕಾರ್ಯಾಗಾರಗಳನ್ನು ನಡೆಸುತ್ತದೆಯೇ ; ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಅಥವಾ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶಗಳಿವೆಯೇ ;

(ಇ) ರಾಜ್ಯದಾದ್ಯಂತ ಸರ್ಕಾರಿ ಕಾಲೇಜುಗಳಲ್ಲಿ ಮೂಲ ಸೌಕರ್ಯವನ್ನು ನವೀಕರಿಸಲು ಸ್ಮಾರ್ಟ್ ತರಗತಿ ಕೊಠಡಿಗಳು, ಡಿಜಿಟಲ್ ಗ್ರಂಥಾಲಯಗಳು ಮತ್ತು ಹೈಸ್ಪೀಡ್ ಇಂಟರ್ನೆಟ್ ಸಂಪರ್ಕವನ್ನು ಸ್ಥಾಪಿಸಲು ನಿರ್ದಿಷ್ಟ ಯೋಜನೆಗಳು ಮತ್ತು ಹಣಕಾಸು ಹಂಚಿಕೆಗಳಾವುವು ? (ವಿವರ ನೀಡುವುದು)

## ಗ್ರಾಮೀಣ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೭ (೭೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗದ ಜನರ ಆರೋಗ್ಯಾಭಿವೃದ್ಧಿಗೆ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ;

(ಆ) ಸ್ಥಳೀಯ ಮಟ್ಟದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ ;

(ಇ) ಸರ್ಕಾರವು 5 ವರ್ಷದ ಅವಧಿಯಲ್ಲಿ ಒಟ್ಟಾರೆ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಹಾಕಿಕೊಂಡಿದೆ ? (ವರ್ಷಾವಾರು ವಿವರ ನೀಡುವುದು)

## ಉದ್ಯೋಗ ಸಲುವಾಗಿ ಕೌಶಲ್ಯಾಭಿವೃದ್ಧಿ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೮ (೭೫೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉದ್ಯೋಗ ಪಡೆಯಲು ಬೇಕಾದ ಕೌಶಲ್ಯ ಹೊಂದಿರುವ ಯುವಜನರ ಸಂಖ್ಯೆ ಎಷ್ಟು ;

(ಆ) ಬೆಂಗಳೂರು ನಗರ ಉದ್ಯೋಗ ಒದಗಿಸುವಲ್ಲಿ ಮುಂಚೂಣಿಯಲ್ಲಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯುವ ಜನರು ಉದ್ಯೋಗಕ್ಕೆ ನೇಮಕಗೊಂಡಿದ್ದಾರೆ ;

(ಇ) ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಸಂಖ್ಯಾ ಕೌಶಲ್ಯ ವಿಮರ್ಶಾತ್ಮಕ ಚಿಂತನ (critical thinking) ಕೌಶಲ್ಯಗಳಲ್ಲಿ ರಾಜ್ಯ ಇತರೆ ರಾಜ್ಯಗಳಿಗಿಂತ ಹಿಂದುಳಿಯಲು ಕಾರಣಗಳೇನು ;

(ಈ) ಕೌಶಲ್ಯಗಳನ್ನು ಸುಧಾರಿಸಲು ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಔಷಧಿ ಖರೀದಿಯಲ್ಲಿ ಭ್ರಷ್ಟಾಚಾರ ನಡೆದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೯ (೬೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯಲ್ಲಿ ಕಳೆದ 03 ವರ್ಷಗಳಿಂದ ಇಲ್ಲಿಯವರೆಗೂ ಔಷಧ ಖರೀದಿಗಾಗಿ ಸರ್ಕಾರ ವೆಚ್ಚ ಮಾಡಿರುವ ಹಣವೆಷ್ಟು ;

(ಆ) ಆಯುಷ್ ಇಲಾಖೆಯ ಔಷಧ ಖರೀದಿಯಲ್ಲಿ ಭಾರಿ ಭ್ರಷ್ಟಾಚಾರದ ದೂರು ಕೇಳಿ ಬಂದ ಹಿನ್ನಲೆಯಲ್ಲಿ ಸರ್ಕಾರದಿಂದ ಪ್ರಾಥಮಿಕ ತನಿಖೆ ನಡೆಸಲಾಯಿತೆ ; ಹಾಗಿದ್ದಲ್ಲಿ, ತನಿಖೆಯಿಂದ ಕಂಡು ಬಂದ ಅಂಶವೇನು ; ಭ್ರಷ್ಟಾಚಾರ ನಡೆದಿರುವುದು ನಿಜವೇ ;

(ಇ) ಇಂಡೆಂಟ್ ಮತ್ತು ಅಗತ್ಯ ಮೌಲ್ಯಮಾಪನ ಕಾರ್ಯವಿಧಾನ ಇಲ್ಲದೇ ಔಷಧ ಖರೀದಿಯಾಗಿದ್ದು, ಹೊಸಪೇಟೆಯಲ್ಲಿ ರೂ. ೫ ಲಕ್ಷ ಆರ್ಥಿಕ ಅಧಿಕಾರ ಮೀರಿ ರೂ. ೩೯ ಲಕ್ಷ ಪಾವತಿ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ಇಂತಹ ಪ್ರಕರಣಗಳು ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ನಡೆದಿದೆ ಹಾಗೂ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮವೇನು ;

(ಈ) ರಾಜ್ಯದಲ್ಲಿ ಆಯುಷ್ ಇಲಾಖೆ ಆಸ್ಪತ್ರೆ ಮತ್ತು ಚಿಕಿತ್ಸಾಲಯಗಳಲ್ಲಿ ಕಳೆದ 05 ವರ್ಷದಿಂದ ಇಲ್ಲಿಯವರೆಗೂ ಎಷ್ಟು ಸಾರ್ವಜನಿಕರು ಇದರ ಪ್ರಯೋಜನವನ್ನು ಬಳಸಿಕೊಂಡಿರುತ್ತಾರೆ ?

# ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರಿಗೆ ಪರಿಹಾರ ನೀಡದೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೦ (೬೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರೋನಾ ಎರಡನೇ ಅಲೆಯಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಸಂಖ್ಯೆಯೆಷ್ಟು ; ಇದರ ನಿರ್ಲಕ್ಷ್ಯಕ್ಕೆ ಕಾರಣವಾದ ಅಧಿಕಾರಿಗಳು ಯಾರು ; (ಹುದ್ದೆಯ ಸಮೇತ ವಿವರ ಒದಗಿಸುವುದು) ಹಾಗೂ ಅಧಿಕಾರಿಗಳ ಮೇಲೆ ಸರ್ಕಾರವು ಯಾವ ಕ್ರಮ ತೆಗೆದುಕೊಂಡಿದೆ ;

(ಆ) ಮೃತಪಟ್ಟ ಕುಟುಂಬಕ್ಕೆ ಪರಿಹಾರವನ್ನು ನೀಡಲಾಗಿದೆಯೇ ; ಎಷ್ಟು ಹಣವನ್ನು ಪರಿಹಾರವಾಗಿ ನೀಡಲಾಗಿದೆ (ಪ್ರತ್ಯೇಕವಾಗಿ ಹೆಸರು, ಊರುಗಳ ವಿವರ ಒದಗಿಸುವುದು)

(ಇ) ಮೃತಪಟ್ಟ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾಗಿರುವ ಭರವಸೆಗಳು ಯಾವುವು ಹಾಗೂ ನೀಡಲಾಗಿರುವ ಭರವಸೆಗಳನ್ನು ಈಡೇರಿಸಲಾಗಿದೆಯೇ ;

(ಈ) ಸರ್ಕಾರ ನೀಡಿರುವ ಭರವಸೆಗಳನ್ನು ಇದುವರೆವಿಗೂ ಈಡೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರ್ಕಾರ ಘೋಷಣೆ ಮಾಡಿರುವ ಪರಿಹಾರದ ಮೊತ್ತವೆಷ್ಟು ; ಹಾಗೂ ಮೃತಪಟ್ಟ ಕುಟುಂಬಕ್ಕೆ ಉದ್ಯೋಗ ನೀಡುವ ಭರವಸೆ ನೀಡಲಾಗಿತ್ತೆ ; ಹಾಗಿದ್ದಲ್ಲಿ ಎಷ್ಟು ಉದ್ಯೋಗವನ್ನು ನೀಡಲಾಗಿದೆ ? (ಪೂರ್ಣ ವಿವರ ನೀಡುವುದು)

# ಸರ್ಕಾರಿ ಶಾಲೆಗಳಲ್ಲಿ ಸುಮಾರು ೧೧,೭೫೫ ಶಿಕ್ಷಕರ ಹುದ್ದೆ ಖಾಲಿ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೧ (೬೪೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆಯೆಷ್ಟು ; ಹಾಗೂ ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು ; (ವಿಷಯವಾರು ಶಿಕ್ಷಕರ ಮಾಹಿತಿ ಒದಗಿಸುವುದು)

(ಆ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಸುಮಾರು ೧೧,೭೫೫ ಶಿಕ್ಷಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಇದನ್ನು ಸರಿದೂಗಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಶಿಕ್ಷಕರ ಕೊರತೆಯಿರುವುದರಿಂದ ಗುಣಮಟ್ಟದ ಶಿಕ್ಷಣಕ್ಕೆ ತೊಂದರೆಯಾಗಿ ಎಸ್.ಎಸ್.ಎಲ್.ಸಿ. ಫಲಿತಾಂಶ ಕುಸಿತಗೊಳ್ಳುವುದಿಲ್ಲವೇ ;

(ಈ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರಸ್ತುತ ಎಷ್ಟು ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ: ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಮಾಡುವ ಸಂಬಂಧವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಉ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಗಣಿತ ಮತ್ತು ವಿಜ್ಞಾನ ಬೋಧಿಸುವ ಶಿಕ್ಷಕರ ಹುದ್ದೆಗಳ ಶೇ.೬೫ ರಷ್ಟು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

# ಗ್ರಾಹಕರ ನ್ಯಾಯಾಲಯಗಳ ಆದೇಶ ಜಾರಿಯಾಗಿಲ್ಲದರ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೬೪೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷಗಳಿಂದ ಇಲ್ಲಿಯುವರೆಗೂ ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆಯೆಷ್ಟು ; ಇದರಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥವಾಗಿದೆ ; ಎಷ್ಟು ಬಾಕಿ ಉಳಿದಿದೆ ;

(ಆ) ಗ್ರಾಹಕರ ನ್ಯಾಯಾಲಯಗಳಿಂದ ಗ್ರಾಹಕರ ಪರವಾಗಿ ಆದೇಶ ಮಾಡಿರುವ ಎಲ್ಲಾ ಪ್ರಕರಣಗಳು ಜಾರಿಯಾಗಿವೆಯೇ ; (ದಾಖಲಾಗಿರುವ ಪ್ರಕರಣಗಳ ವಿವರಗಳನ್ನು ಒದಗಿಸುವುದು)

(ಇ) ಶೇ.೧೦ಕ್ಕೂ ಅಧಿಕ ಪ್ರಕರಣಗಳಲ್ಲಿ ಗ್ರಾಹಕರ ನ್ಯಾಯಾಲಯಗಳ ಆದೇಶ ಜಾರಿಯಾಗದ ಹಿನ್ನಲೆಯಲ್ಲಿ ಗ್ರಾಹಕರು ಆ ಆದೇಶಗಳ ಜಾರಿಗೆ ಪೋಲೀಸರ ಮೊರೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಸತಿ ನಿವೇಶನದ ಹಾಗೆ ಫ್ಲ್ಯಾಟ್ ನೀಡುವಂತೆ ಅಮಿಷವೊಡ್ಡುವ ಗೃಹ ನಿರ್ಮಾಣ ಸಹಕಾರ ಸಂಘಗಳು, ದೋಷಪೂರಿತ ಉತ್ಪನ್ನಗಳನ್ನು ನೀಡಿರುವ ಪ್ರಮುಖ ಕಾರ್ಪೊರೇಟ್ ಸಂಸ್ಥೆಗಳ ವಿರುದ್ಧದ ಪ್ರಕರಣಗಳು ಹೆಚ್ಚಾಗಿರುವುದು ನಿಜವೇ ? (ಪೂರ್ಣ ಮಾಹಿತಿಯನ್ನು ಒದಗಿಸುವುದು)

# ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಟೀಚಿಂಗ್ ಹಾಗೂ ನಾನ್–ಟೀಚಿಂಗ್ ಸಿಬ್ಬಂದಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೩ (೭೨೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಈವರೆಗೆ ಮಂಜೂರಾದ ಟೀಚಿಂಗ್ ಹಾಗೂ ನಾನ್–ಟೀಚಿಂಗ್ ಸಿಬ್ಬಂದಿಗಳ ಒಟ್ಟು ಸಂಖ್ಯೆ ಎಷ್ಟು; ಈ ಪೈಕಿ ಪ್ರಸ್ತುತ ಅನ್ಯ ಜಿಲ್ಲೆಗೆ ನಿಯೋಜನೆಯಾಗಿರುವವರನ್ನು ಹೊರತುಪಡಿಸಿ, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಕೊಪ್ಪಳ ಜಿಲ್ಲೆಯ ಶಾಲೆಗಳಲ್ಲಿ ಶಾಲಾ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿಯನ್ನು ಒದಗಿಸುವುದು)

(ಇ) ಬೋಧಕ ಮತ್ತು ಬೋಧಕೇತರ ವಿಭಾಗದೊಳಗಿನ ಖಾಲಿ ಹುದ್ದೆಗಳ ಸಂಖ್ಯೆಗಳನ್ನು ಪ್ರತ್ಯೇಕವಾಗಿ ನೀಡುವುದು ; (ಮಾಹಿತಿಯನ್ನು ಒದಗಿಸುವುದು)

(ಈ) ಕೊಪ್ಪಳ ಜಿಲ್ಲೆಯಲ್ಲಿ ಸುಮಾರು ೫೦% ಸಿಬ್ಬಂದಿ ಕೊರತೆ ಎದುರಿಸುತ್ತಿರುವುದರಿಂದ ವಿದ್ಯಾರ್ಥಿಗಳ ಉತ್ತೀರ್ಣ ಪ್ರಮಾಣ ವರ್ಷದಿಂದ ವರ್ಷಕ್ಕೆ ಇಳಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿಯನ್ನು ಒದಗಿಸುವುದು)

(ಉ) ಸಿಬ್ಬಂದಿ ಕೊರತೆಯಿಂದಾಗಿ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತಿರುವ ಹಿನ್ನೆಲೆಯಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಸರ್ಕಾರವು ಯಾವ ಕಾರ್ಯಯೋಜನೆ ರೂಪಿಸಿದೆ ; ನಿಯೋಜನೆಗಾಗಿ ಯಾವುದೇ ಗಡುವು ದಿನಾಂಕವಿದೆಯೇ ? (ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿ ವಿದ್ಯಾರ್ಥಿಗಳಿಗೆ ವಾರದಲ್ಲಿ ೬ ದಿನ ಮೊಟ್ಟೆ ವಿತರಣೆ ಯೋಜನೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೪ (೭೨೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧ ರಿಂದ ೧೦ ನೇ ತರಗತಿ ವಿದ್ಯಾರ್ಥಿಗಳಿಗೆ ವಾರದಲ್ಲಿ ೬ ದಿನ ಮೊಟ್ಟೆ ವಿತರಣೆ ಮಾಡುವ ಸರ್ಕಾರದ ಆದೇಶವನ್ನು ಎಲ್ಲಾ ಶಾಲೆಗಳಲ್ಲಿ ಸರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದ ಕೆಲವೊಂದು ಜಿಲ್ಲೆಗಳಲ್ಲಿ ಸರ್ಕಾರದ ಆದೇಶದನ್ವಯ ೬ ದಿನ ಮೊಟ್ಟೆ ವಿತರಣೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ಯಾವ ಯಾವ ಜಿಲ್ಲೆಗಳಲ್ಲಿ ಆರು ದಿನಗಳ ಕಾಲ ಮೊಟ್ಟೆ ವಿತರಣೆ ಮಾಡುತ್ತಿಲ್ಲ ; (ಜಿಲ್ಲೆಯ ಮಾಹಿತಿ ಒದಗಿಸುವುದು)

(ಇ) ಎಸ್.ಡಿ.ಎಂ.ಸಿ. ಸೂಚನೆ ಮೇರೆಗೆ ಕೆಲವೆಡೆ ೩ ದಿನ ಮೊಟ್ಟೆ ಮೂರು ದಿನ ಬಾಳೆಹಣ್ಣು ನೀಡಲಾಗುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೊಪ್ಪಳ ಜಿಲ್ಲೆಯ ಎಷ್ಟು ಶಾಲೆಗಳಲ್ಲಿ ೬ ದಿನಗಳ ಕಾಲ ಮೊಟ್ಟೆ ವಿತರಣೆ ಮಾಡಲಾಗುತ್ತಿದೆ ; ಎಷ್ಟು ಶಾಲೆಗಳಲ್ಲಿ ೩ ದಿನ ಮೊಟ್ಟೆ

೩ ದಿನ ಬಾಳೆಹಣ್ಣು ವಿತರಣೆ ಮಾಡಲಾಗುತ್ತಿದೆ ; (ಮಾಹಿತಿಯನ್ನು ಒದಗಿಸುವುದು)

(ಉ) ಸರ್ಕಾರದ ಆದೇಶ ಉಲ್ಲಂಘಿಸಿ ಮೊಟ್ಟೆ ವಿತರಣೆ ಮಾಡದೇ ಇರುವ ಶಾಲೆಗಳ ವಿರುದ್ಧ ಯಾವ ರೀತಿಯ ಶಿಸ್ತು ಕ್ರಮ ಜರುಗಿಸಲಾಗಿದೆ ; ಈ ರೀತಿ ಉಲ್ಲಂಘನೆಯಾಗದಂತೆ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ? (ಮಾಹಿತಿ ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕಿನ ಬಿ.ಇ.ಓ ಕಛೇರಿಗಳ ಪ್ರಾರಂಭದ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೫ (೭೨೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ಎಷ್ಟು ತಾಲ್ಲೂಕಿನಲ್ಲಿ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳು ಪ್ರಾರಂಭ ಮಾಡಲಾಗಿದೆ ; (ಮಾಹಿತಿಯನ್ನು ಒದಗಿಸುವುದು)

(ಆ) ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ಪ್ರಾರಂಭಿಸಲಾಗಿದೆಯೇ ;

(ಇ) ಹೊಸ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳು ಪ್ರಾರಂಭವಾಗದೇ ಇರುವ ಕಡೆಗಳಲ್ಲಿ ಹಳೆ ತಾಲ್ಲೂಕು ಹಾಗೂ ಹೊಸ ತಾಲ್ಲೂಕು ಸೇರಿ ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಇರುವುದರಿಂದ ಹೆಚ್ಚಿನ ಕಾರ್ಯಭಾರವಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ; ಹೆಚ್ಚಿನ ಕಾರ್ಯಭಾರ ತಗ್ಗಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ ; (ಮಾಹಿತಿಯನ್ನು ಒದಗಿಸುವುದು)

(ಈ) ನೂತನ ತಾಲ್ಲೂಕಿನಲ್ಲಿ ಬಿ.ಇ.ಓ. ಕಛೇರಿಗಳು ಪ್ರಾರಂಭವಾಗದ ಕಾರಣ ಶಾಲೆಗಳ ಸಮರ್ಪಕ ವೀಕ್ಷಣೆ, ಸಾರ್ವಜನಿಕರಿಗೆ ಸೂಕ್ತ ಸ್ಪಂದನೆ, ಮಕ್ಕಳ ಶಿಕ್ಷಣ ಗುಣಮಟ್ಟ ಹಾಗೂ ಜಿಲ್ಲಾ ಮಟ್ಟದ ಶೈಕ್ಷಣಿಕ ಬೆಳವಣಿಗೆಯಲ್ಲಿ ಕುಂಠಿತವಾಗುತ್ತಿರುವುದನ್ನು ಸರ್ಕಾರ ಒಪ್ಪುವುದೇ ; ಒಪ್ಪಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿಯನ್ನು ಒದಗಿಸುವುದು)

(ಉ) ಈ ಎಲ್ಲಾ ಅಂಶಗಳು ಪರೋಕ್ಷವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕುಸಿತವಾಗಲು ಕಾರಣವಲ್ಲವೇ ; ಶೈಕ್ಷಣಿಕ ಗುಣಮಟ್ಟ ಬಲಪಡಿಸಲು ಹೊಸ ತಾಲ್ಲೂಕುಗಳಲ್ಲಿ ಬಿ.ಇ.ಓ. ಕಛೇರಿಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ ವರ್ಷದಲ್ಲಿ ಪ್ರಾರಂಭಿಸಲಾಗುವುದು ? (ವಿವರವಾದ ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ಇರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಪ್ರಯೋಗಾಲಯಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೬ (೭೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಪ್ರಯೋಗಾಲಯಗಳ ಸಂಖ್ಯೆ ಎಷ್ಟು ; (ಕಲ್ಯಾಣ ಕರ್ನಾಟಕ ಭಾಗದ ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ಈ ಲ್ಯಾಬ್‌ಗಳಲ್ಲಿ ಮಂಜೂರಾದ ಲ್ಯಾಬ್ ಟೆಕ್ನಿಷಿಯನ್‌ಗಳ ಹುದ್ದೆಗಳೆಷ್ಟು ; ಅವುಗಳ ಪೈಕಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಮಾಹಿತಿಯನ್ನು ಒದಗಿಸುವುದು)

(ಇ) ಆಸ್ಪತ್ರೆಗಳಲ್ಲಿರುವ ಪ್ರಯೋಗಾಲಯಗಳಲ್ಲಿ ಲ್ಯಾಬ್ ಟೆಕ್ನಿಷಿಯನ್‌ಗಳು ಇಲ್ಲದಿರುವ ಕಾರಣ ಗ್ರಾಮೀಣ ಭಾಗದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ರಾಜ್ಯಾದ್ಯಂತ ಅಕ್ರಮವಾಗಿ ಪಿಡಿಎಸ್ ಅಕ್ಕಿ ಸಾಗಾಣಿಕೆ ಹಾಗೂ ಅಕ್ರಮ ಸಂಗ್ರಹಣೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೭ (೭೩೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಸಾರ್ವಜನಿಕ ವಿತರಣಾ ವ್ಯವಸ್ಥೆಯ (ಪಿಡಿಎಸ್) ಅಡಿಯಲ್ಲಿ ಅಕ್ರಮವಾಗಿ ಅಕ್ಕಿ ಸಾಗಣೆ ಹಾಗೂ ಅಕ್ರಮ ಸಂಗ್ರಹಣೆಗೆ ಸಂಬಂಧಿಸಿದಂತೆ ಕಳೆದು ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಮಾಹಿತಿಯನ್ನು ಒದಗಿಸುವುದು)

(ಆ) ಕೊಪ್ಪಳ ಜಿಲ್ಲೆಯಲ್ಲಿ ಅಕ್ರಮವಾಗಿ ಪಿಡಿಎಸ್ ಅಕ್ಕಿ ಸಾಗಣೆ ಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಅದರಲ್ಲಿ ಎಷ್ಟು ಪ್ರಕರಣಗಳಿಗೆ ಎಫ್‌ಐಆರ್ ದಾಖಲಾಗಿದೆ ; ಈ ಪ್ರಕರಣಗಳಲ್ಲಿ ಎಷ್ಟು ಜನ ಆರೋಪಿಗಳನ್ನು ಬಂಧಿಸಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯದ ಮೂಲಕ ಶಿಕ್ಷೆ ವಿಧಿಸಲಾಗಿದೆ ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಈ ಅವಧಿಯಲ್ಲಿ ಪೊಲೀಸರು ಅಥವಾ ಆಹಾರ ಇಲಾಖಾಧಿಕಾರಿಗಳು ಜಪ್ತಿ ಮಾಡಿರುವ ಅಕ್ಕಿಯ ಪ್ರಮಾಣ ಎಷ್ಟು ಕ್ವಿಂಟಲ್ ಅಥವಾ ಮೆಟ್ರಿಕ್ ಟನ್‌ನ ಮೌಲ್ಯ ಎಷ್ಟು ; (ಮಾಹಿತಿಯನ್ನು ಒದಗಿಸುವುದು)

(ಈ) ಪಿಡಿಎಸ್ ಅಡಿಯಲ್ಲಿ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಸರ್ಕಾರ ಯಾವ ನಿಗಾ ಕ್ರಮಗಳನ್ನು ತೆಗೆದುಕೊಂಡಿದೆಯೇ ; ಭವಿಷ್ಯದಲ್ಲಿ ಇದು ಪುನರಾವರ್ತನೆಯಾಗದಂತೆ ಏನೆಲ್ಲಾ ನವೀನ ತಂತ್ರಜ್ಞಾನ ಅಥವಾ ಕ್ರಮಗಳನ್ನು ಜಾರಿಗೆ ತರಲಾಗುವುದು ? (ಮಾಹಿತಿಯನ್ನು ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಯ ನಗರದಲ್ಲಿ ಸ್ಯಾಟಲೈಟ್ ಸೆಂಟರ್ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೮ (೬೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ನಗರದ ಸರ್ಕಾರಿ ವೆನ್‌ಲಾಕ್ ಆಸ್ಪತ್ರೆ ಅಧೀನದಲ್ಲಿರುವ ೨ ಎಕರೆ ೭ ಗುಂಟೆ ಜಾಗದಲ್ಲಿ ನರ್ಸಿಂಗ್ ಕಾಲೇಜು, ಅರೆ ವೈದ್ಯಕೀಯ ಕಾಲೇಜುಗಳನ್ನು ನಿರ್ಮಾಣ ಮಾಡಿ ಪ್ರತ್ಯೇಕವಾದ ಕಾಲೇಜು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ವೆನ್‌ಲಾಕ್ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳಿಗೆ ಮತ್ತು ಇತರೆ ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದಿರುವುದರಿಂದ ಗುಣಮಟ್ಟದ ಸೇವೆ ನೀಡಲು ಇದೇ ಸ್ಥಳದಲ್ಲಿ ವಸತಿ ಗೃಹ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಇ) ಈ ಆಸ್ಪತ್ರೆ ಅಧೀನದಲ್ಲಿ ೮ ಎಕರೆ ಜಾಗವಿದ್ದು, ಕ್ಷಯ ಮತ್ತು ಎದೆ ರೋಗಗಳ ಆಸ್ಪತ್ರೆ ಮೂಡುಶೆಡ್ಡೆಯಲ್ಲಿ ಲಭ್ಯವಿದ್ದು, ಈ

ಸ್ಥಳದಲ್ಲಿ ಹೃದ್ರೋಗ ಮತ್ತು ಕ್ಯಾನ್ಸರ್‌ಗೆ ಸಂಬಂಧಪಟ್ಟ ಜಯದೇವ ಹೃದ್ರೋಗ ಸಂಸ್ಥೆಯ ಒಂದು ಸ್ಯಾಟಲೈಟ್ ಸೆಂಟರ್ ಮತ್ತು ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್ ತೆರೆಯಲು ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆ ಇದ್ದು, ರಾಜ್ಯದ ಅರ್ಹ ಬಡ ರೋಗಿಗಳಿಗೆ ಸಹಾಯವಾಗಲು ಈ ಎರಡು ಸಂಸ್ಥೆಗಳ ಸೆಂಟರ್‌ಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್ ಕಲಬುರಗಿ ಮೈಸೂರು, ಶಿವಮೊಗ್ಗ ಜಿಲ್ಲೆಗಳಲ್ಲಿರುವ ಸೆಂಟರ್‌ಗಳ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಹಾಗೂ ಬೆಳಗಾವಿಯಲ್ಲಿ ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುವುದರಿಂದ ದಕ್ಷಿಣ ಕನ್ನಡ ಜಿಲ್ಲೆ ವೆನ್‌ಲಾಕ್ ಆಸ್ಪತ್ರೆಯಲ್ಲಿ ೧೦–೧೫ ಜಿಲ್ಲೆಗಳಿಗೆ ಸೇವೆ ನೀಡುತ್ತಿದ್ದು ಮತ್ತು ವಿಭಾಗಿ ಆಸ್ಪತ್ರೆಯಾಗಿ ಗುರುತಿಸಿಕೊಂಡಿದ್ದು, ಈ ಭಾಗದಲ್ಲಿ ಮೇಲಿನ ಸ್ಯಾಟಲೈಟ್ ಸೆಂಟರ್ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತು ೧೫ ಜಿಲ್ಲೆಗಳ ಗ್ರಾಮಾಂತರ ಭಾಗದ ರೋಗಿಗಳು ಹೃದ್ರೋಗ ಮತ್ತು ಕ್ಯಾನ್ಸರ್ ರೋಗದಿಂದ ಮೃತಪಡುವುದು ಹೆಚ್ಚಾಗುತ್ತಿದ್ದು ಸರಿಯಾದ ಮಾಹಿತಿ ಮತ್ತು ಪರೀಕ್ಷೆ ಕೊರತೆ ನೀಗಿಸಲು ಸ್ಯಾಟಲೈಟ್ ಸೆಂಟರ್ ತೆರೆಯಲು ಇಲಾಖೆ ತುರ್ತು ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಈಗಾಗಲೇ ಜಿಲ್ಲೆಯ ಬಡರೋಗಿಗಳ ಪರವಾಗಿ ನಿರ್ಧಾರ ಕೈಗೊಳ್ಳಲು ಸೂಕ್ತವಲ್ಲವೇ ? (ವಿವರ ನೀಡುವುದು)

## ರಾಜ್ಯದಲ್ಲಿ ಅರಣ್ಯ ಇಲಾಖೆಯಿಂದ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೯ (೬೭೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಅರಣ್ಯ ಇಲಾಖೆಯಿಂದ ನೀಡಿದ ಭೂಮಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಯಾವ ಯೋಜನೆಗಳಿಗೆ ಅರಣ್ಯ ಭೂಮಿ ನೀಡಲಾಗಿದೆ ; ಯಾವ ಮಾನದಂಡದಲ್ಲಿ ನೀಡಲಾಗಿದೆ ; (ವಿವರ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ಆನೆ ಮತ್ತಿತರ ಪ್ರಾಣಿಗಳ ದಾಳಿಯಿಂದ ಮೃತಪಟ್ಟ ಜನರ ಸಂಖ್ಯೆ ಎಷ್ಟು ; ಅವರಿಗೆ ನೀಡಿದ ಪರಿಹಾರ ಎಷ್ಟು ; ಕೃಷಿ ಮತ್ತು ಮನುಷ್ಯರಿಗೆ ಉಂಟಾದ ನಷ್ಟಕ್ಕೆ ನೀಡಿದ ಪರಿಹಾರ ಎಷ್ಟು ; (ವಿವರ ನೀಡುವುದು)

(ಇ) ಅರಣ್ಯ ಪ್ರದೇಶದ ಸ್ಥಳವನ್ನು ಅಭಿವೃದ್ಧಿ ಕಾರ್ಯಕ್ಕಾಗಿ ನೀಡಿದಾಗ, ಇಲಾಖೆ ವಿಧಿಸಿರುವ ಷರತ್ತುಗಳೇನು ; ಇದರಿಂದ ಇಲಾಖೆಗೆ ಉಂಟಾಗುವ ನಷ್ಟವೇನು ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನಲ್ಲಿ ಆನೆಗಳ ಹಾವಳಿ ಜಾಸ್ತಿಯಾಗಲು ಕಾರಣವೇನು ; ಈ ಪ್ರದೇಶದಲ್ಲಿ ಪ್ರಸ್ತುತ ಇರುವ ಆನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಆನೆಗಳು ಮತ್ತು ಇತರ ಪ್ರಾಣಿಗಳು ಅರಣ್ಯದಿಂದ ಹೊರಬರಲು ಕಾರಣಗಳೇನು ? (ವಿವರ ನೀಡುವುದು)

## ಮಂಗಳೂರು ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಬೇಡಿಕೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೦ (೬೭೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಬಹುಕಾಲದ ಬೇಡಿಕೆಯನ್ನು ಈಡೇರಿಸಲು ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಸರ್ಕಾರದ ಮುಂದಿರುವ ಪ್ರಸ್ತಾವನೆ ಏನು ; (ವಿವರ ನೀಡುವುದು)

(ಆ) ಮಂಗಳೂರಿನಲ್ಲಿ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಬಹು ಬೇಡಿಕೆ ಇದ್ದು, ಪ್ರತಿಷ್ಠಿತ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಇರುವುದರಿಂದ ಅದರಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಂಡಲ್ಲಿ ಸಾವಿರಾರು ಬಡ ಮಕ್ಕಳಿಗೆ ಅನುಕೂಲವಾಗುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಮಂಗಳೂರು ನಗರದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಈ ಪಾಲಿಟೆಕ್ನಿಕ್ ಕಾಲೇಜಿನ ವಿದ್ಯಾರ್ಥಿಗಳಿಗೆ ವಸತಿ ನಿಲಯವನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಪ್ರಸ್ತುತ ಎಷ್ಟು ವಿದ್ಯಾರ್ಥಿಗಳಿಗೆ ವಸತಿ ನಿಲಯುದಲ್ಲಿ ಅವಕಾಶ ನೀಡಲಾಗಿದೆ ? (ವಿವರ ನೀಡುವುದು)

## ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ಕಲಿಯುತ್ತಿರುವ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೧ (೬೭೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಯಾವ ಕೋರ್ಸ್‌ಗಳನ್ನು ನಡೆಸಲಾಗುತ್ತಿದೆ ; ಪ್ರತಿ ಕೋರ್ಸ್‌ಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಉದ್ಯೋಗಕ್ಕೆ ಅನುಕೂಲವಾಗುವ ಮತ್ತು ಬೇಡಿಕೆ ಇರುವ ಯಾವ ಕೋರ್ಸ್‌ಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ ; ಬೇಡಿಕೆಗೆ ಅನುಗುಣವಾಗಿ ಕೋರ್ಸ್‌ಗಳನ್ನು ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಪ್ರಾರಂಭಿಸಿದರೆ ಮಕ್ಕಳ ಸಂಖ್ಯೆಯನ್ನು ಹೆಚ್ಚಿಸಲು ಸಾಧ್ಯವಾಗುವುದರಿಂದ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಮಂಗಳೂರು ವಿಶ್ವವಿದ್ಯಾನಿಲಯದ ಪ್ರಸ್ತುತ ಆರ್ಥಿಕ ಪರಿಸ್ಥಿತಿಯು ಯಾವ ಮಟ್ಟದಲ್ಲಿ ಇದೆ ; ಹೊಸ ಯೋಜನೆಗಳಾವುವು ? (ವಿವರ ನೀಡುವುದು)

## IMCK ಮೂಲಕ ಹೊರದೇಶದ ಉದ್ಯೋಗಾವಕಾಶ ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೨ (೬೭೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ಅಂತರರಾಷ್ಟ್ರೀಯ ವಲಸಿಗರ ಕೇಂದ್ರ ಕರ್ನಾಟಕ (International Migration Center Karnataka IMCK) ಮೂಲಕ ಹೊರದೇಶದ ಉದ್ಯೋಗಾವಕಾಶಗಳನ್ನು ಒದಗಿಸಿಕೊಡುವ ಕಾರ್ಯಯೋಜನೆ ಸರ್ಕಾರದ ಮುಂದಿದೆಯೇ ; (ಮಾಹಿತಿ ನೀಡುವುದು)

(ಆ) ರಾಜ್ಯದ ಯಾವ ಜಿಲ್ಲೆಗಳಲ್ಲಿ IMCK ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; ಜಿಲ್ಲಾ ಕೇಂದ್ರಗಳಲ್ಲಿ ಪ್ರಸ್ತುತ ಒದಗಿಸಲಾಗಿರುವ ಸೌಲಭ್ಯ ಹಾಗೂ ಸಿಬ್ಬಂದಿಗಳ ವಿವರ ನೀಡುವುದು ;

(ಇ) ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಹಮ್ಮಿಕೊಳ್ಳಲಾಗುವ ಯೋಜನೆಗಳಾವುವು ? (ಯೋಜನೆವಾರು/ಜಿಲ್ಲಾವಾರು ಅನುದಾನದ ವಿವರ ನೀಡುವುದು)

## ಆರೋಗ್ಯ ಇಲಾಖೆಯ ಅನುದಾನದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೩ (೭೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಆರ್ಥಿಕ ವರ್ಷದಲ್ಲಿ ಆರೋಗ್ಯ ಇಲಾಖೆಯ ಒಟ್ಟು ಅನುದಾನ ಎಷ್ಟು; (ಸಂಪೂರ್ಣ ವಿವರ ಒದಗಿಸುವುದು)

(ಆ) ಹಂಚಿಕೆಯಾದ ಅನುದಾನದಲ್ಲಿ ಬಿಡುಗಡೆಯಾದ ಹಾಗೂ ವೆಚ್ಚ ಮಾಡಿದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಇಲಾಖೆಯಲ್ಲಿ ಅನುದಾನದ ಕೊರತೆ ಕಂಡುಬಂದಿದೆಯೇ; ಕೊರತೆಯಿಲ್ಲದಿದ್ದಲ್ಲಿ, ಪೂರ್ಣ ಪ್ರಮಾಣದಲ್ಲಿ ಉಪಯೋಗಿಸದಿದ್ದರೆ ಕಾರಣವೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೪ (೭೨೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಇಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಮತ್ತು ತಾತ್ಕಾಲಿಕ, ಗುತ್ತಿಗೆ ಆಧಾರದ ಹಾಗೂ ಹೊರಗುತ್ತಿಗೆ ಆಧಾರದ ಭೋಧಕ, ಶಿಕ್ಷಕ ಮತ್ತು ಭೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆಡಳಿತಾತ್ಮಕ ವಿವರಗಳನ್ನು ಪ್ರತ್ಯೇಕವಾಗಿ, ಹುದ್ದೆವಾರು ಅಂಕಿ ಅಂಶಗಳನ್ನು ನೀಡುವುದು)

(ಆ) ವಿಶ್ವವಿದ್ಯಾನಿಲಯದಲ್ಲಿ ಹಾಲಿ ಸಿಬ್ಬಂದಿಗಳಿಗೆ ಪಾವತಿಯಾಗುತ್ತಿರುವ ವಾರ್ಷಿಕ ವೇತನದ ಮೊತ್ತವೆಷ್ಟು; (ಬೋಧಕ ಬೋಧಕೇತರ ಗುತ್ತಿಗೆ, ಹೊರಗುತ್ತಿಗೆ ಪಿಂಚಣಿದಾರರಿಗೆ ಪಾವತಿಸಲಾಗುತ್ತಿರುವ ವೇತನ ಮೊತ್ತದ ವಿವರವನ್ನು ಹುದ್ದೆವಾರು ಪ್ರತ್ಯೇಕವಾಗಿ ನೀಡುವುದು)

(ಇ) ಈ ವಿಶ್ವವಿದ್ಯಾನಿಲಯದ ಸಿಬ್ಬಂದಿಗಳ ವೇತನ ಹಾಗೂ ಪಿಂಚಣಿ ಪಾವತಿಗೆ ಸರ್ಕಾರದಿಂದ ಅನುದಾನ ಮಂಜೂರಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಆನೆ ಮತ್ತು ಮಾನವ ಸಂಘರ್ಷದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೫ (೭೬೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಆನೆ ದಾಳಿಯಿಂದಾಗಿ ಮೃತ ಪಟ್ಟವರ ಸಂಖ್ಯೆ ಎಷ್ಟು; ಮೃತ ಪಟ್ಟವರಿಗೆ ನೀಡಲಾಗಿರುವ ಪರಿಹಾರದ ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆನೆ ಮತ್ತು ಮಾನವ ಸಂಘರ್ಷವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ಆನೆಗಳ ದಾಳಿಯನ್ನು ತಪ್ಪಿಸಲು ಬ್ಯಾರಿಕೇಡ್‌ಗಳ ನಿರ್ಮಾಣಕ್ಕೆ ಮೀಸಲಿರಿಸುವ ಅನುದಾನ ಎಷ್ಟು; ವಿನಿಯೋಗಿಸಿರುವ ಅನುದಾನ ಎಷ್ಟು ಮತ್ತು ಒಟ್ಟು ಎಷ್ಟು ಕಿಲೋಮೀಟರ್‌ವರೆಗಿನ ಬ್ಯಾರಿಕೇಡ್‌ಗಳ ನಿರ್ಮಾಣವನ್ನು ಪೂರ್ಣಗೊಳಿಸಲಾಗಿದೆ ?

## Japanese Encephalitis ರೋಗದ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೯೬ (೭೪೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ಸೇರಿದಂತೆ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ Japanese Encephalitis (J.E) ರೋಗದ ಎಂಡೆಮಿಕ್ (endemic) ಜಿಲ್ಲೆಗಳೆಂದು ಗುರುತಿಸಲಾಗಿದೆ ; ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ೨೦೧೬ ರಿಂದ ಇದುವರೆಗೂ ಪತ್ತೆಯಾದ (J.E) ಪ್ರಕರಣಗಳ ಮತ್ತು ಸಾವಿನ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರೋಗ ಪತ್ತೆಗೆ ಲ್ಯಾಬೋರೇಟರಿಗಳನ್ನು ಯಾವ ಯಾವ ಸ್ಥಳಗಳಲ್ಲಿ ಸ್ಥಾಪಿಸಲಾಗಿದೆ ; ಈ ಕಾಯಿಲೆ ಎಷ್ಟು ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುತ್ತದೆ ಇದರ ಲಕ್ಷಣಗಳೇನು ; ಏನಾದರೂ ದೈಹಿಕ ಆರೋಗ್ಯ ಸಮಸ್ಯೆಗಳು ಕಂಡುಬರಲಿದೆಯೇ ; (ವಿವರ ನೀಡುವುದು)

(ಈ) ಮಕ್ಕಳಿಗೆ ಈ ರೋಗದ ವಿರುದ್ಧ ಲಸಿಕೆ ಹಾಕಲು ಸರ್ಕಾರ ವಿಶೇಷ ಲಸಿಕಾ ಅಭಿಯಾನ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಅಂದಾಜು ಎಷ್ಟು ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ; ಇದಕ್ಕೆ ಎಷ್ಟು ಡೋಸ್ ಲಸಿಕೆ ಅವಶ್ಯವಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ರಾಜ್ಯದಲ್ಲಿ ಯಾವ ಯಾವ ವರ್ಷದ ವೇಳೆಗೆ Japanese Encephalitis (J.E) ರೋಗವನ್ನು ಶಾಶ್ವತವಾಗಿ ನಿರ್ಮೂಲನೆ ಮಾಡುವ ಗುರಿ ಹೊಂದಲಾಗಿದೆ ?

## ರಾಜ್ಯದಲ್ಲಿನ ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೯೭ (೭೪೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ವಿಶ್ವವಿದ್ಯಾಲಯಗಳ (ವಿವಿ) ಸಂಖ್ಯೆ ಎಷ್ಟು ; ಅವು ಯಾವುವು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಟ್ಟ ವಿ.ವಿ.ಗಳು ಒಳಗೊಂಡಂತೆ ಎಲ್ಲಾ ಸಾರ್ವಜನಿಕ ವಿವಿಗಳ ಸ್ಥಿತಿ, ಶಿಕ್ಷಣದ ಗುಣಮಟ್ಟ, ಸುಧಾರಣೆ ಕುರಿತ ಸಮಗ್ರ ಅಧ್ಯಯನ ನಿಟ್ಟನಲ್ಲಿ ರಚಿಸಿದ್ದ ಸಂಪುಟ ಉಪ ಸಮಿತಿ ಈವರೆವಿಗೂ ಎಷ್ಟು ಸಭೆಗಳನ್ನು ಕರೆದಿದೆ ;

(ಇ) ವಿ.ವಿ ಗಳ ಅಧ್ಯಯನ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿವೆ ; ಅಥವಾ ಪೂರ್ಣಗೊಂಡಿದೆಯೇ ; ವಿ.ವಿಗಳ ಆದ್ಯಯನ ಪೂರ್ಣಗೊಂಡಿದ್ದಲ್ಲಿ ಸಮಿತಿಯು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ ;

(ಈ) ಸಲ್ಲಿಸಿದ್ದಲ್ಲಿ, ಸಮಿತಿ ಮಾಡಿರುವ ಪ್ರಮುಖ ಶಿಫಾರಸ್ಸುಗಳೇನು ; ವರದಿ ಆಧರಿಸಿ ಸರ್ಕಾರ ತೆಗೆದುಕೊಂಡಿರುವ ತೀರ್ಮಾನಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಇಲ್ಲದಿದ್ದಲ್ಲಿ, ಸಮಿತಿ ತನ್ನ ವರದಿಯನ್ನು ಯಾವ ಅವಧಿಯೊಳಗೆ ಸರ್ಕಾರಕ್ಕೆ ಸಲ್ಲಿಸಲು ಉದ್ದೇಶಿಸಿದೆ ? (ವಿವರ ನಿಡುವುದು)

## ಖಾಸಗಿ ಮತ್ತು ಡೀಮ್ಡ್–ಟು–ಬಿ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೯೮ (೭೪೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ, ಖಾಸಗಿ ಮತ್ತು ಡೀಮ್ಡ್–ಟು–ಬಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಯಾವುವು ;

(ಆ) ಸರ್ಕಾರಿ, ಖಾಸಗಿ ಮತ್ತು ಡೀಮ್ಡ್–ಟು–ಬಿ ವಿಶ್ವವಿದ್ಯಾಲಯಗಳ ನಡುವಿನ ವ್ಯತ್ಯಾಸವೇನು ; (ಸಂಪೂರ್ಣ ವಿವರ ನೀಡುವುದು)

(ಇ) ಖಾಸಗಿ ಮತ್ತು ಡೀಮ್ಡ್–ಟು–ಬಿ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಇರುವ ಮಾನದಂಡಗಳೇನು ; ಈ ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಸರ್ಕಾರದ ಪ್ರೋತ್ಸಾಹ/ಬೆಂಬಲ ನೀಡುತ್ತಿದೆಯೇ ; (ವಿವರ ನೀಡುವುದು)

(ಈ) ಖಾಸಗಿ ಮತ್ತು ಡೀಮ್ಡ್–ಟು–ಬಿ ವಿಶ್ವವಿದ್ಯಾಲಯಗಳ ಸ್ಥಾಪನೆಯಿಂದ ಸರ್ಕಾರದ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ತೊಂದರೆಯಾಗುವುದಿಲ್ಲವೇ ?

## ಶೂನ್ಯ ದಾಖಲಾತಿ ಇರುವ ಶಾಲೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೯೯ (೭೪೯) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ (ಪ್ರಾಥಮಿಕ ಮತ್ತು ಪ್ರೌಢಶಾಲೆ) ಸಂಖ್ಯೆ ಹಾಗೂ ಪ್ರಸಕ್ತ ವರ್ಷ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ವರ್ಷ ೧೦ಕ್ಕಿಂತ ಕಡಿಮೆ ವಿದ್ಯಾರ್ಥಿಗಳ ದಾಖಲಾತಿ ಇರುವ ಸರ್ಕಾರಿ ಶಾಲೆಗಳ (ಪ್ರಾಥಮಿಕ ಮತ್ತು ಪ್ರೌಢಶಾಲೆ) ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರಸಕ್ತ ವರ್ಷ ಮಕ್ಕಳ ದಾಖಲಾತಿ ಇಲ್ಲದ ಕಾರಣ ಬಾಗಿಲು ಮುಚ್ಚಿರುವ ಶಾಲೆಗಳ (ಸರ್ಕಾರಿ, ಅನುದಾನಿತ ಮತ್ತು ಅನುದಾನ

ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ) ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೨೦-೨೧ನೇ ಶೈಕ್ಷಣಿಕ ಸಾಲಿನಿಂದ ಇದುವರೆಗೆ ವಿದ್ಯಾರ್ಥಿಗಳ ಶೂನ್ಯ ದಾಖಲಾತಿಗೆ ಕಾರಣ, ಬಾಗಿಲು ಮುಚ್ಚಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಸಂಖ್ಯೆ ಎಷು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಮೇಲ್ಕಂಡ ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿ ನೇಮಿಸಿಕೊಂಡಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಮಂಡ್ಯದ ಮಿಮ್ಸ್ ಆವರಣದಲ್ಲಿರುವ ನರ್ಸಿಂಗ್ ಕಾಲೇಜಿಗೆ ಪ್ರತ್ಯೇಕ ಕಟ್ಟಡ ನಿರ್ಮಾಣದ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೦೦ (೭೫೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ವಿಜ್ಞಾನಿಗಳ ಸಂಸ್ಥೆಯಲ್ಲಿ (ಮಿಮ್ಸ್) ನರ್ಸಿಂಗ್ ಕಾಲೇಜು ಯಾವ ಸಾಲಿನಿಂದ ಆರಂಭಗೊಂಡಿದೆ ; ಪ್ರತಿ ವರ್ಷ ಇಲ್ಲಿ ಎಷ್ಟು ಸಂಖ್ಯೆಯ ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶವಿದೆ ; ಹಾಲಿ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ;

(ಆ) ನರ್ಸಿಂಗ್ ಕೌನ್ಸಿಲ್ ನಿಯಮಾವಳಿಗಳ ಪ್ರಕಾರ ನರ್ಸಿಂಗ್ ಕಾಲೇಜು ಆರಂಭಿಸಲು ಪ್ರತ್ಯೇಕ ಕಟ್ಟಡ ಹೊಂದುವುದು ಸೇರಿದಂತೆ ಯಾವ ಯಾವ ಮೂಲಸೌಲಭ್ಯಗಳನ್ನು ಹೊಂದುವುದು ಅವಶ್ಯಕ/ಕಡ್ಡಾಯವಾಗಿರುತ್ತದೆ ;

(ಇ) ನರ್ಸಿಂಗ್ ಕಾಲೇಜು ಆರಂಭವಾಗಿ ೪ ವರ್ಷಗಳು ಕಳೆದಿದ್ದು ಪ್ರತ್ಯೇಕ ಕಟ್ಟಡ ಇಲ್ಲದಿದ್ದರಿಂದ ಮಿಮ್ಸ್‌ನಲ್ಲಿಯೇ

ಕಾರ್ಯನಿರ್ವಹಿಸುತ್ತಿದೆ ಹಾಗಾಗಿ ನರ್ಸಿಂಗ್ ಕಾಲೇಜು ಮತ್ತು ಹಾಸ್ಟೆಲ್‌ಗಾಗಿ ಪ್ರತ್ಯೇಕ ಸ್ಥಳ ಹಾಗೂ ಕಟ್ಟಡ ನಿರ್ಮಿಸಲು ಅವಶ್ಯವಿರುವ ಅನುದಾನ ಒದಗಿಸುವ ಕುರಿತು ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೧ (೭೪೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರ ನಿಗದಿಪಡಿಸಿದ ಮಾನದಂಡಗಳನ್ವಯ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಸರಿದೂಗಿಸಲು ನೇಮಿಸಿರುವ ತಾತ್ಕಾಲಿಕ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಯಾವ ಸಮಿತಿ ಅಥವಾ ಅಧಿಕಾರಿಯ ವರದಿಯ ಆಧಾರದಲ್ಲಿ ಇಷ್ಟು ಮಕ್ಕಳಿಗೆ ಇಷ್ಟು ಶಿಕ್ಷಕರು ಅಂದರೆ ೩೦:೧ ಅಥವಾ ೪೦:೧ ಎಂದು ಅನುಪಾತವನ್ನು ನಿಗದಿಪಡಿಸಲಾಗಿದೆ ;

(ಇ) ಈ ಅನುಪಾತವನ್ನು ನಿಗದಿಪಡಿಸುವಾಗ ಸರ್ಕಾರಿ ಶಾಲೆಯಲ್ಲಿರುವ ಕನ್ನಡ ಮಾಧ್ಯಮ ಹಾಗೂ ಶಾಲಾಭಿವೃದ್ಧಿ ಸಮಿತಿಯು ತಾವೇ ಅಗತ್ಯ ಮೂಲ ಸೌಕರ್ಯಗಳನ್ನು ಹೊಂದಿಸುವ ಮುಚ್ಚಳಿಕೆಯೊಂದಿಗೆ ಪ್ರಾರಂಭವಾಗಿರುವ ಆಂಗ್ಲ ಮಾಧ್ಯಮ ತರಗತಿಯ ಮಕ್ಕಳ ಸಂಖ್ಯೆಯನ್ನು ಪರಿಗಣಿಸಿ ಶಿಕ್ಷಕರ ಅನುಪಾತವನ್ನು ನಿಗದಿಪಡಿಸಲಾಗಿದೆಯೇ ;

(ಈ) ಮಕ್ಕಳ ಮತ್ತು ಶಿಕ್ಷಕರ ಅನುಪಾತವನ್ನು ಯಾವಾಗ ನಿಗದಿಪಡಿಸಲಾಗಿತ್ತು ; ಯಾವ (ಕಟ್ ಆಫ್ ಡೇಟ್) ದಿನಾಂಕದ ಅಥವಾ ಅವಧಿಯ ಮಕ್ಕಳ ಸಂಖ್ಯೆಗನುಗುಣವಾಗಿ ಶಿಕ್ಷಕರನ್ನು ನಿಗದಿಪಡಿಸಲಾಗುತ್ತಿದೆ ;

(ಉ) ಶೈಕ್ಷಣಿಕ ವರ್ಷ ೨೦೨೫ರ ಶಿಕ್ಷಕರ ಸಂಖ್ಯೆಯನ್ನು ೨೦೨೪ರ ಮಕ್ಕಳ ಒಟ್ಟು ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರ ಮತ್ತು ಮಕ್ಕಳ ಅನುಪಾತ ನಿಗದಿಪಡಿಸಿರುವ ಔಚಿತ್ಯವೇನು ; ಈ ಕಾರಣದಿಂದಾಗಿ ಶಿಕ್ಷಣ ಗುಣಮಟ್ಟ ಕುಸಿಯುತ್ತಿರುವ ಬಗ್ಗೆ ಇಲಾಖೆಯ ಕ್ರಮಗಳೇನು ?

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪ ಕೇಂದ್ರಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೨ (೭೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಆರೋಗ್ಯ ಇಲಾಖೆಯ ಎಷ್ಟು ಉಪ ಕೇಂದ್ರಗಳಿಗೆ ಸ್ವಂತ ಕಟ್ಟಡ ಇದೆ ; ಹೊಸ ಕಟ್ಟಡಗಳ ನಿರ್ಮಾಣಕ್ಕೆ ಎಷ್ಟು ಪ್ರಸ್ತಾವನೆ ಸರ್ಕಾರದ ಮುಂದಿದೆ ; ಕಂದಾಯ ಇಲಾಖೆಗೆ ಜಾಗಕ್ಕಾಗಿ ಎಷ್ಟು ಪ್ರಸ್ತಾವನೆ ಸಲ್ಲಿಸಲಾಗಿದೆ ;

(ಆ) ಆರೋಗ್ಯ ಉಪ ಕೇಂದ್ರಗಳ ಕೊರತೆಯಿಂದ ಸಾರ್ವಜನಿಕರು ತುರ್ತು ಆರೋಗ್ಯ ಸೇವೆಗೆ ದೂರದ ನಗರ ಮತ್ತು ತಾಲ್ಲೂಕು ಕೇಂದ್ರಗಳಿಗೆ ಹೋಗಬೇಕಾಗಿರುವ ಅನಿವಾರ್ಯತೆ ಕುರಿತು ಸರ್ಕಾರ ಏನು ಕ್ರಮವಹಿಸಿದೆ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಎಷ್ಟು ಉಪ ಕೇಂದ್ರಗಳಿಗೆ ಸ್ವಂತ ಕಟ್ಟಡ ಇದೆ ; ಕಂದಾಯ ಇಲಾಖೆಯಲ್ಲಿ ಜಾಗದ ಪ್ರಸ್ತಾವನೆಗಳು ಯಾವ ಹಂತದಲ್ಲಿದೆ ;

(ಈ) ಆರೋಗ್ಯ ಉಪ ಕೇಂದ್ರಗಳಿಗೆ ಸಮುದಾಯ ಆರೋಗ್ಯ ಅಧಿಕಾರಿಗಳನ್ನು (ಸಿ.ಎಚ್.ಒ) ನೇಮಿಸಲಾಗಿದ್ದು, ಆರೋಗ್ಯ ಸೇವೆಗಳನ್ನು ನೀಡುತ್ತಿದ್ದು ಅವರಿಗೆ ಅಲ್ಲಿಯೇ ವಾಸ್ತವ್ಯ ಮಾಡಲು

ಅವಕಾಶವಾಗುವಂತೆ ವಸತಿ ಗೃಹಗಳನ್ನು ನಿರ್ಮಿಸುವ ಬಗ್ಗೆ ಸರ್ಕಾರ ಯಾವ ರೀತಿ ಕ್ರಮವಹಿಸುತ್ತಿದೆ ;

(ಉ) ರಾಜ್ಯದಲ್ಲಿ ತುರ್ತು ಆರೋಗ್ಯ ಸೇವೆಗಳನ್ನು ನೀಡುವ ಸಿಬ್ಬಂದಿಗಳು ಕೆಲಸದ ಸ್ಥಳಗಳಲ್ಲಿ ಅಥವಾ ಆರೋಗ್ಯ ಸೇವಾ ಕೇಂದ್ರಗಳಿಗೆ ಬೇಗನೆ ತಲುಪುವ ಅಂತರದಲ್ಲಿ ವಾಸ್ತವ್ಯವಿರುವ ಬಗ್ಗೆ ಖಚಿತಪಡಿಸಲಾಗುತ್ತದೆಯೇ ?

## ಕರ್ನಾಟಕ ರಾಜ್ಯದಲ್ಲಿ ಕುದ್ರುಗಳಲ್ಲಿ ಕಟ್ಟಡ ನಿರ್ಮಾಣ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೩ (೭೪೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ CRZ ೨೦೧೯ ನಿಯಮಾವಳಿಯಂತೆ ಕುದ್ರು ಪ್ರದೇಶದಲ್ಲಿ ಕರಾವಳಿ ನಿಯಂತ್ರಣ ವಲಯ ಎಷ್ಟು ಮೀಟರ್‌ವರೆಗೆ ಇರುತ್ತದೆ ; ರಾಜ್ಯದ ಕರಾವಳಿ ತೀರದಲ್ಲಿ ಕುದ್ರು (ದ್ವೀಪ) ಪ್ರದೇಶದಲ್ಲಿ ನೆಲೆಸಿರುವ ಮೂಲ ನಿವಾಸಿಗಳಿಗೆ ಮನೆ ನಿರ್ಮಾಣ ಮಾಡಲು ಅನುಸರಿಸಬೇಕಾದ ಕ್ರಮಗಳು ಯಾವುವು ;

(ಆ) ರಾಜ್ಯದ ಕರಾವಳಿ ತೀರದಲ್ಲಿ ಜನಸಾಮಾನ್ಯರು CRZ ನಿಯಮದಿಂದ ಹಲವಾರು ಸಮಸ್ಯೆಗಳನ್ನು ಅನುಭವಿಸುತ್ತಿದ್ದು, ಅದರಲ್ಲೂ ಕುದ್ರು (ದ್ವೀಪ) ಪ್ರದೇಶದಲ್ಲಿ ನೆಲೆಸಿರುವ ಮೂಲ ನಿವಾಸಿಗಳಿಗೆ ತಮ್ಮ ಊರಿನಲ್ಲಿಯೇ ಮನೆ ನಿರ್ಮಾಣ ಮಾಡುವುದು ಕಷ್ಟಸಾಧ್ಯವಾಗಿರುವ ಬಗ್ಗೆ ಸರ್ಕಾರ ಏನು ಕ್ರಮ ವಹಿಸಿದೆ ;

(ಇ) ಪರಿಸರ ಇಲಾಖೆಯಿಂದ ಈಗಾಗಲೇ (IIMP) Integrated Island Management Plan ರೂಪಿಸಿ ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ಸಲ್ಲಿಸಲು ಕ್ರಮವಹಿಸಲಾಗವುದು ;

(ಈ) ಕರ್ನಾಟಕ ರಾಜ್ಯದಲ್ಲಿ CRZ ೨೦೧೯ ನಿಯಮಾವಳಿಗಳನ್ನು ರಚಿಸಲಾಗಿದ್ದರೂ ಈವರೆಗೆ IIMP ರಚಿಸದಿರಲು ಕಾರಣವೇನು ; ಕೇಂದ್ರ ಸರ್ಕಾರದ ಪರಿಸರ ಯಂತ್ರಾಲಯಕ್ಕೆ ಈ ಕುರಿತ ನಿಯಮಗಳ ಸರಳೀಕರಣ ಮಾಡಲು ಯಾವ ರೀತಿ ಕ್ರಮವಹಿಸಲಾಗಿದೆ ;

(ಉ) IIMP ರಚಿಸುವವರೆಗೆ ಕುದ್ರುಗಳ ಮೂಲ ನಿವಾಸಿಗಳಿಗೆ ಮನೆ ನಿರ್ಮಾಣ ಮಾಡುವ ಕುರಿತು ಏನು ಪರ್ಯಾಯ ಕ್ರಮಗಳನ್ನು ಸರ್ಕಾರ ರೂಪಿಸಿದೆಯೇ ?

## ಕರ್ನಾಟಕ ರಾಜ್ಯದಲ್ಲಿ ವಿವಿಧ ವಿದ್ಯುತ್ ಪ್ರಸರಣ ನಿಗಮಗಳಲ್ಲಿ ಕುಂದು ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೪ (೭೪೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ವಿವಿಧ ವಿದ್ಯುತ್ ಪ್ರಸರಣ ನಿಗಮಗಳಲ್ಲಿ ಕುಂದು ಕೊರತೆ ಸಭೆಯಲ್ಲಿ ದಾಖಲಾಗುವ ದೂರುಗಳು ಎಷ್ಟು; ಅವುಗಳು ಯಾವುವು ; ದೂರುಗಳನ್ನು ಪರಿಹರಿಸಲು ಏನು ಕ್ರಮ ವಹಿಸಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೆಸ್ಕಾಂ ಕುಂದು ಕೊರತೆ ಸಭೆಯಲ್ಲಿ ದಾಖಲಾಗುವ ದೂರುಗಳು ಯಾವವು ; ಯಾವ ವಿಷಯಗಳಿಗೆ ಸಂಬಂಧಿಸಿದಂತೆ ಹೆಚ್ಚು ಸಂಖ್ಯೆಯ ದೂರುಗಳು ದಾಖಲಾಗುತ್ತಿವೆ ; ಅವುಗಳನ್ನು ನಿವಾರಿಸಲು ಏನು ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ದೂರುಗಳು ಪರಿಹರಿಸುವಲ್ಲಿ ಬಾಕಿ ಇರುವ ಕಾರಣಗಳೇನು ; ಹಣಕಾಸಿನ ಕೊರತೆ ಅಥವಾ ಸಿಬ್ಬಂದಿಯ ಕೊರತೆಯೇ, ಇಲಾಖೆ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ತಾತ್ಕಾಲಿಕವಾಗಿ ಮತ್ತು ದೀರ್ಘಕಾಲಿಕವಾಗಿ ಕೈಗೊಂಡ ಕ್ರಮಗಳು ಯಾವುವು ;

(ಈ) ಕರಾವಳಿ ಜಿಲ್ಲೆಗಳಲ್ಲಿ ಹೊರಜಿಲ್ಲೆಗಳ ವಿದ್ಯುತ್ ಸಿಬ್ಬಂದಿಗಳು ನೇಮಕವಾಗುತ್ತಿದ್ದು ಹೆಚ್ಚಿನವರು ಪರೀಕ್ಷಾರ್ಹ ಅವಧಿ ಘೋಷಣೆಯಾದ ಕೂಡಲೇ ತಮ್ಮ ತವರು ಜಿಲ್ಲೆಗಳಿಗೆ ವರ್ಗಾವಣೆ ಮಾಡಿಸಿಕೊಳ್ಳುತ್ತಿರುವುದು ಇಲಾಖೆ ಗಮನಿಸಿದೆಯೇ ;

(ಉ) ಈ ಸಮಸ್ಯೆಯನ್ನು ಬಗೆಹರಿಸಲು ವಿದ್ಯುತ್ ಪ್ರಸರಣ ನಿಗಮಗಳಲ್ಲಿ ತಳಹಂತದ ವಿದ್ಯುತ್ ಸಿಬ್ಬಂದಿಗಳ ನೇಮಕವನ್ನು ಆಯಾಯ ವಿಭಾಗಗಳಲ್ಲಿ ಮಾಡಲು ಸರ್ಕಾರಕ್ಕೆ ಇರುವ ತೊಡಕುಗಳೇನು ? (ಈ ಕುರಿತು ಯಾವಾಗ ಕ್ರಮ ವಹಿಸಲಾಗುವುದು)

## ಕರ್ನಾಟಕ ರಾಜ್ಯದಲ್ಲಿ ವಿವಿಧ ವಿದ್ಯುತ್ ಪ್ರಸರಣ ನಿಗಮಗಳಲ್ಲಿ ಕುಂದು ಕೊರತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೫ (೭೪೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಮತ್ತು ಸುರಕ್ಷತೆ ಅಧಿನಿಯಮ ೨೦೦೬ ರ ಅಡಿಯಲ್ಲಿ ಕರ್ತವ್ಯ ನಿರ್ವಹಿಸುವ ಸಂಸ್ಥೆಗಳು ನಿರ್ವಹಿಸಬೇಕಾದ ಜವಾಬ್ದಾರಿಗಳು ಮತ್ತು ಕರ್ತವ್ಯಗಳೇನು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇವರಿಗೆ ಪರಿಶೀಲನೆಗೆ ಒಳಪಡಿಸಲಾದ ಸಂಸ್ಥೆಗಳು ಹಾಗೂ ಅಂಗಡಿ ಮಳಿಗೆಗಳು ಯಾವುವು ; ಈವರೆಗೆ ಕಾಯ್ದೆ ಉಲ್ಲಂಘನೆಗಾಗಿ ದಾಖಲಿಸಲಾದ ಪ್ರಕರಣಗಳೆಷ್ಟು ; ಯಾವ ಕಾರಣಕ್ಕಾಗಿ ಪ್ರಕರಣವನ್ನು ದಾಖಲಿಸಲಾಗಿದೆ ; ಇವುಗಳಲ್ಲಿ ಇತ್ಯರ್ಥಪಡಿಸಿದ, ಬಾಕಿ ಇರುವ ಪ್ರಕರಣಗಳೆಷ್ಟು ; ಬಾಕಿ ಇರುವ ಪ್ರಕರಣಗಳನ್ನು ಯಾವಾಗ ಇತ್ಯರ್ಥ ಪಡಿಸಲಾಗುವುದು ;

(ಇ) ಉಭಯ ಜಿಲ್ಲೆಗಳಲ್ಲಿ ಈವರೆಗೆ ಯಾವ ಯಾವ ಸಂಸ್ಥೆಗಳಿಗೆ ಹಾಗೂ ಅಂಗಡಿ ಮಳಿಗೆಗಳಿಗೆ ನೋಟೀಸ್ ನೀಡಿ ದಂಡ ವಸೂಲಾತಿ

ಮಾಡಲಾಗಿದೆ ; ದಂಡದ ಮೊತ್ತವೆಷ್ಟು ; ದಂಡವನ್ನು ರದ್ದುಪಡಿಸಿದ ಪ್ರಕರಣಗಳು ಎಷ್ಟು ; ದಂಡ ವಿಧಿಸಲು ಕಾರಣ ಸಹಿತ ಪ್ರತಿಯೊಂದು ಸಂಸ್ಥೆಯ ವಿವರ ನೀಡುವುದು ;

(ಈ) ಉಭಯ ಜಿಲ್ಲೆಗಳಲ್ಲಿ ಹೋಟೆಲ್ ಹಾಗೂ ಆಹಾರ ತಯಾರಿಕಾ ಗುಂಡಂಗಡಿಗಳು ಕಳಪೆ ಗುಣಮಟ್ಟದ ಹಾಗೂ ನಿಷೇಧಿತ ರಾಸಾಯನಿಕ ಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸಾರ್ವಜನಿಕ ಆರೋಗ್ಯ ಕಾಪಾಡಲು ಇಂತಹ ಘಟಕಗಳ ಮೇಲೆ ದಾಳಿ ಮಾಡಿ ತಪ್ಪಿತಸ್ಥರ ವಿರುದ್ಧ ಪ್ರಕರಣವನ್ನು ದಾಖಲಿಸಲು ಎಷ್ಟು ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ಚಾರ್ಜಿಂಗ್ ಸ್ಟೇಷನ್‌ಗಳ ಬಗ್ಗೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೬ (೭೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ಚಾಲಿತ ವಾಹನಗಳ ಬಳಕೆ ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯಾದ್ಯಂತ ಈ ವಿದ್ಯುತ್ ಚಾಲಿತ ವಾಹನಗಳಿಗೆ ಅಗತ್ಯವಿರುವ ಚಾರ್ಜಿಂಗ್ ಸ್ಟೇಷನ್‌ಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಪ್ರಸ್ತುತ ಇರುವ ವಿದ್ಯುತ್ ಚಾರ್ಜಿಂಗ್ ಸ್ಟೇಷನ್‌ಗಳ ಸಂಖ್ಯೆ ಎಷ್ಟು; ಬೇಡಿಕೆ ಇರುವ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ ಸಂಖ್ಯೆಗಳನ್ನು ಒದಗಿಸುವುದು)

(ಈ) ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಚಾರ್ಜಿಂಗ್ ಸ್ಟೇಷನ್‌ಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆಯೇ ;

(ಉ) ಈ ಪ್ರಸ್ತಾವ ಪ್ರಸ್ತುತ ಯಾವ ಹಂತದಲ್ಲಿದೆ ?

## ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಸರ್ವರ್ ಡೌನ್ ಸಮಸ್ಯೆ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೭ (೭೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಸಂಭವಿಸುತ್ತಿರುವ ಹೃದಯಾಘಾತ ಸಾವುಗಳ ಕಾರಣದಿಂದಾಗಿ ನಿತ್ಯವೂ ನೂರಾರು ಯುವಕ ಯುವತಿಯರು ಹೃದಯ ತಪಾಸಣೆ ಸಲುವಾಗಿ ಮೈಸೂರಿನ ಜಯದೇವ ಆಸ್ಪತ್ರೆಗೆ ದಾವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಸ್ಪತ್ರೆಯಲ್ಲಿ ಸರ್ವರ್ ಡೌನ್ ಸಮಸ್ಯೆಯಿಂದ ಹೆಸರು ನೋಂದಾಯಿಸುವಿಕೆ ಹಾಗೂ ತಪಾಸಣೆಗೆ ಒಳಗಾಗಲು ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಉದ್ಭವವಾಗಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಸರ್ವರ್ ಡೌನ್ ಸಮಸ್ಯೆಯನ್ನು ಶಾಶ್ವತವಾಗಿ ಹೋಗಲಾಡಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಅನ್ನಭಾಗ್ಯ ಅಕ್ಕಿಗೆ 'ಡಿಜಿಟಲ್ ಕನ್ನ' ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೮ (೭೧೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋಟ್ಯಾಂತರ ಜನರ ಹಸಿವು ನೀಗಿಸುತ್ತಿರುವ 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಮತ್ತು ರಾಜ್ಯದ ಅನ್ನಭಾಗ್ಯ ಯೋಜನೆ ಅಕ್ಕಿಗೆ 'ಡಿಜಿಟಲ್ ಕನ್ನ' ಹಾಕುತ್ತಿರುವ ವಿಚಾರ ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, 'ಡಿಜಿಟಲ್ ಕನ್ನ' ಹಾಕುವುದಕ್ಕೆ ಕಡಿವಾಣ ಹಾಕಲು ಕೈಗೊಂಡಿರುವ ಭದ್ರತಾ ಕ್ರಮಗಳೇನು ;

(ಇ) ಮುಂದುವರೆದು 'ಡಿಜಿಟಲ್ ಕನ್ನ' ಮೂಲಕ ಅಕ್ರಮ ಪಡಿತರ ಮಾರಾಟ ಮತ್ತು ದಾಸ್ತಾನು ಮಾಡಿರುವವರ ಪತ್ತೆ ಹಚ್ಚಲಾಗಿದೆಯೇ ; ಪತ್ತೆ ಹಚ್ಚಿದಲ್ಲಿ ಎಷ್ಟು ದಾವೆಗಳನ್ನು ಹೂಡಲಾಗಿದೆ ಮತ್ತು ಎಷ್ಟು ಕ್ವಿಂಟಾಲ್ ಆಹಾರ ಪದಾರ್ಥಗಳನ್ನು ವಶಕ್ಕೆ ಪಡೆಯಲಾಗಿದೆ ?

## ಮೈಸೂರು ವಿಶ್ವವಿದ್ಯಾನಿಲಯ ಮತ್ತು ಮುಕ್ತ ವಿಶ್ವವಿದ್ಯಾನಿಲಯಗಳ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಬಗ್ಗೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೯ (೭೨೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು ಮತ್ತು ಮೈಸೂರು ವಿಶ್ವವಿದ್ಯಾನಿಲಯ, ಮಾನಸ ಗಂಗೋತ್ರಿ ಈ ಎರಡೂ ವಿಶ್ವವಿದ್ಯಾನಿಲಯಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರ ಸಂಖ್ಯೆ ಎಷ್ಟು ;

(ಇ) ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರ ಸಂಖ್ಯೆ ಎಷ್ಟು ಹಾಗೂ ಎಷ್ಟು ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳುವುದಕ್ಕೆ ಅವಕಾಶವಿದೆ ;

(ಈ) ಖಾಲಿ ಇರುವ, ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಅನುದಾನಿತ ಶಾಲೆಗಳಲ್ಲಿ ಬೋಧಕರ ಕೊರತೆ ಕುರಿತು

**ಡಾ. ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೦ (೭೮೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಪ್ರಾಥಮಿಕ ಹಾಗೂ ಪ್ರಾಥಮಿಕ ಅನುದಾನಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಶಾಲಾವಾರು ಮಾಹಿತಿ ನೀಡುವುದು)

(ಆ) ೩೦.೦೬.೨೦೨೫ರ ತನಕ ನಿವೃತ್ತರಾದ ಶಿಕ್ಷಕರ ಸಂಖ್ಯೆ ಎಷ್ಟು; ದಿನಾಂಕ: ೦೧.೦೭.೨೦೨೫ ರಿಂದ ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು ಹಾಗೂ ಖಾಲಿ ಇರುವ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಸದರಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶಿಕ್ಷಕರ ನೇಮಕಾತಿಗೆ ಅವಕಾಶವಿಲ್ಲದ ಕಾರಣ ಯಾವ ಯಾವ ಜಿಲ್ಲೆಗಳಲ್ಲಿ ಅನುದಾನಿತ ಶಾಲೆಗಳು ಮುಚ್ಚಲ್ಪಟ್ಟಿವೆ ಅಥವಾ ಏಕೋಪಾಧ್ಯಾಯ ಶಾಲೆಗಳಾಗಿ ಪರಿವರ್ತನೆಗೊಂಡಿದೆ ಅಥವಾ ಎರಡು ಉಪಾಧ್ಯಾಯ ಶಾಲೆಗಳಾಗಿ ಪರಿವರ್ತನೆಗೊಂಡಿದೆ ? (ವಿವರ ನೀಡುವುದು)

## ರಾಜ್ಯದ ಗ್ರಾಮೀಣ ಭಾಗಗಳಲ್ಲಿ ನಿರಂತರ ವಿದ್ಯುತ್ ಪೂರೈಕೆ ಆಗುತ್ತಿರುವ ಬಗ್ಗೆ

**ಡಾ. ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೧ (೭೮೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಪದೇ ಪದೇ ವಿದ್ಯುತ್ ನಿಲುಗಡೆಯಾಗಿ ನಿರಂತರ ವಿದ್ಯುತ್ ತೊಂದರೆಯ ಕಾರಣ ಸಾರ್ವಜನಿಕರು ಹಾಗೂ ರೈತರು ತೀವ್ರ ಅಸಮಾಧಾನ ವ್ಯಕ್ತಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ಆದಂತಹ ಪ್ರಕರಣಗಳೆಷ್ಟು ಮತ್ತು ಕ್ರಮ ಕೈಗೊಂಡ ಪ್ರಕರಣಗಳೆಷ್ಟು ;

(ಇ) ರಾಜ್ಯದಲ್ಲಿನ ರೈತರು ಅಳವಡಿಸಿರುವ ಅಕ್ರಮ ಟ್ರಾನ್ಸ್‌ಫಾರ್ಮರ್‌ಗಳನ್ನು ಸಕ್ರಮಗೊಳಿಸಲು ಸರ್ಕಾರದ ಮುಂದೆ ಯೋಜನೆ ಇದೆಯೇ ; ಇದ್ದಲ್ಲಿ, ಸಕ್ರಮಗೊಳಿಸಲು ಸ್ವೀಕರಿಸಿರುವ ಅರ್ಜಿಗಳೆಷ್ಟು ; ಅವುಗಳಲ್ಲಿ ಎಷ್ಟು ವಿಲೇವಾರಿ ಮಾಡಲಾಗಿದೆ ; ಉಳಿದ ಅರ್ಜಿಗಳನ್ನು ವಿಲೇವಾರಿ ಮಾಡದಿರಲು ಕಾರಣವೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅಕ್ರಮ ಟ್ರಾನ್ಸ್‌ಫಾರ್ಮರ್‌ಗಳನ್ನು ಪತ್ತೆ ಮಾಡಲಾಗಿದೆ ; ಅಕ್ರಮ–ಸಕ್ರಮ ಯೋಜನೆಯಲ್ಲಿ ಅರ್ಜಿ ಸಲ್ಲಿಸದಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಅಕ್ರಮ–ಸಕ್ರಮಕ್ಕೆ ನಿಗದಿಪಡಿಸಲಾದ ಮೊತ್ತ ಎಷ್ಟು ; ಎಷ್ಟು ಕಾಲಮಿತಿಯಲ್ಲಿ ಅಕ್ರಮ–ಸಕ್ರಮ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ?

## ಪ್ರಸ್ತುತ ರಾಜ್ಯದಲ್ಲಿ ಪಡಿತರ ಚೀಟಿ ಹಂಚಿಕೆಯ ಕುರಿತು

**ಡಾ. ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೨ (೭೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಮತ್ತು ಕಾನೂನು ಮಾಪನ ಶಾಸ್ತ್ರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಕುಟುಂಬಗಳಿಗೆ ಪಡಿತರ ಚೀಟಿ ವಿತರಿಸಿಲಾಗಿದೆ ; ಅವುಗಳ ಎಷ್ಟು ಕುಟುಂಬಗಳು ಅಂತ್ಯೋದಯ ಎ.ಪಿ.ಎಲ್ ಹಾಗೂ ಬಿ.ಪಿ.ಎಲ್ ವರ್ಗಕ್ಕೆ ಸೇರಿವೆ ; ಕಳೆದ ೩ ವರ್ಷಗಳಲ್ಲಿ ಹೊಸ ಪಡಿತರ ಚೀಟಿಗಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಅನ್ನಭಾಗ್ಯ ಯೋಜನೆಯಡಿ ಈಗ ಪಡಿತರದಾರರಿಗೆ ನೀಡಲಾಗುವ ಉಚಿತ ಅಕ್ಕಿ ಅಥವಾ ಧಾನ್ಯ ಪ್ರಮಾಣ ಎಷ್ಟು ; ಈ ಯೋಜನೆಗಾಗಿ

ಸರ್ಕಾರ ವಾರ್ಷಿಕ ಎಷ್ಟು ಹಣ ವೆಚ್ಚ ಮಾಡುತ್ತಿದೆ ; ಯಾವುದೇ ತಾಲ್ಲೂಕಿನಲ್ಲಿ ಧಾನ್ಯ ವಿತರಣೆಯಲ್ಲಿ ವ್ಯತ್ಯಯ ಉಂಟಾದ ಪ್ರಕರಣಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯಾದ್ಯಂತ ಆಹಾರ ಸಂಗ್ರಹಿಸಲು ಗೋದಾಮುಗಳ ಸಂಖ್ಯೆ ಎಷ್ಟು ; ಅವುಗಳ ಸಾಮರ್ಥ್ಯ ಹಾಗೂ ಶೇಕಡಾ ಎಷ್ಟು ಶೇಖರಣಾ ಸಾಮರ್ಥ್ಯ ಸರಾಸರಿ ಬಳಸಲಾಗುತ್ತಿದೆ ;

(ಈ) ಅತೀವ ಮಳೆಯಿಂದ ಅಥವಾ ಬರಪೀಡಿತ ಪ್ರದೇಶಗಳಲ್ಲಿ ಪಡಿತರ ವಿತರಣೆಯಲ್ಲಿ ವಿಳಂಬ ಅಥವಾ ಕೊರತೆಯಿರುವ ಪ್ರಕರಣಗಳು ದಾಖಲಾಗಿದೆಯೇ ; ದಾಖಲಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮಕೈಗೊಂಡಿದೆ ;

(ಉ) ರಾಜ್ಯದಲ್ಲಿ ಪಡಿತರ ವಿತರಣೆಯನ್ನು ಡಿಜಿಟಲ್ ಕಾರಣ ವ್ಯವಸ್ಥೆ ಮಾಡಿದ್ದ, ಯಶಸ್ಸು ಕಂಡಿದೆಯೇ ; KYC, OTP ತಪಾಸಣೆ ಹಾಗೂ ಪಾಸ್ವರ್ಡ್ ತೊಂದರೆಗಳಿಂದ ಸಾರ್ವಜನಿಕರಿಗೆ ಏನಾದರೂ ತೊಂದರೆ ಉಂಟಾಗಿದೆಯೇ ; ಉಂಟಾಗಿದ್ದಲ್ಲಿ, ಈ ಕುರಿತು ಸರ್ಕಾರದ ಕ್ರಮವೇನು ;

(ಊ) ಪಡಿತರ ಚೀಟಿಗೆ ಅಗತ್ಯವಿರುವ ಧಾನ್ಯಗಳು ಮತ್ತು ಬೆಳೆಗಳನ್ನು ಸರ್ಕಾರ ಯಾವ ಯಾವ ರಾಜ್ಯಗಳಿಂದ ಖರೀದಿಸುತ್ತಿದೆ ; ಇತ್ತೀಚಿನ ಮೂರು ವರ್ಷಗಳಲ್ಲಿ ಪ್ರತಿ ರಾಜ್ಯದಿಂದ ಖರೀದಿಸಿದ ಧಾನ್ಯದ ಪ್ರಮಾಣ ಎಷ್ಟು ? (ವೆಚ್ಚದ ವಿವರ ನೀಡುವುದು)

## ರಾಜ್ಯದಲ್ಲಿರುವ ಅರಣ್ಯ ಪ್ರದೇಶ ಹಾಗೂ ಯೋಜನೆಗಳ ಕುರಿತು

**ಡಾ. ಎಂ. ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೩ (೭೮೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿವೆ ;

(ಆ) ಈ ಯೋಜನೆಗಳನ್ನು ಯಾವ ಯಾವ ಸಂಸ್ಥೆಗಳ ಸಹಭಾಗಿತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ ;

(ಇ) ಈ ಯೋಜನೆಗಳನ್ನು ಸಹಭಾಗಿತ್ವದಲ್ಲಿ ಅಥವಾ ಬೇರೆ ಸಂಸ್ಥೆಗಳಿಗೆ ನೀಡುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳು ಏನು ;

(ಈ) ಅರಣ್ಯ ಇಲಾಖೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳಿಗೆ (NGO) ಗಳಿಗೆ ನೀಡುತ್ತಿರುವ ಯೋಜನೆಗಳು ಯಾವುವು ; ಅವರು ಪೂರ್ಣಗೊಳಿಸಿರುವ ಯೋಜನೆಗಳ ಬಗ್ಗೆ ಮೌಲ್ಯ ಮಾಪನ ಮಾಡಲಾಗಿದೆಯೇ ;

(ಉ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎನ್.ಜಿ.ಓ ಗಳಿಗೆ ಅರಣ್ಯ ಇಲಾಖೆಗೆ ಸರ್ಕಾರ ನೀಡಿದ ಅನುದಾನದ ಮೊತ್ತ ಎಷ್ಟು ; ಹಾಗೂ ಎನ್.ಜಿ.ಓ ಸಂಸ್ಥೆಗಳೆಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಸಂಗ್ರಹವಾಗುವ ಸಿ.ಎಸ್.ಆರ್. ನಿಧಿಯ ಬಗ್ಗೆ

**ಶ್ರೀ ಕೆ. ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೪ (೭೨೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಸಿ.ಎಸ್.ಆರ್. ನಿಧಿಯಿಂದ ಸಂಗ್ರಹವಾದ ಹಣ ಎಷ್ಟು ; (ವಿವರ ಒದಗಿಸುವುದು)

(ಆ) ಸಿ.ಎಸ್.ಆರ್. ನಿಧಿಯಿಂದ ಸಂಗ್ರಹವಾದ ಮೊತ್ತವನ್ನು ಯಾವ ಯಾವ ಶಾಲೆಗಳಿಗೆ ಎಷ್ಟೆಷ್ಟು ಬಳಕೆ ಮಾಡಲಾಗಿದೆ ? (ವಿಧಾನಸಭಾವಾರು ವಿವರ ನೀಡುವುದು)

## ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ವಿವರ ಬಗ್ಗೆ

**ಶ್ರೀ ಕೆ. ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೫ (೭೨೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಲು ಈ ಹಿಂದೆ ನಿಗದಿಪಡಿಸಿದ ಕನಿಷ್ಠ ಅಂಕವನ್ನು ಬದಲಾವಣೆ ಮಾಡಲಾಗಿದೆಯೇ ; ಮಾಡಿದ್ದರಿಂದ, ಶಿಕ್ಷಣದ ಗುಣಮಟ್ಟ ಕಡಿಮೆಯಾಗುವುದಿಲ್ಲವೇ ; ಇದು ವಿದ್ಯಾರ್ಥಿಗಳ ಭವಿಷ್ಯಕ್ಕೆ ಅಪಾಯವಿಲ್ಲವೇ ;

(ಈ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರು ಹಾಗೂ ದೈಹಿಕ ಶಿಕ್ಷಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಶಾಲಾವಾರು ಮಾಹಿತಿ ಒದಗಿಸುವುದು)

(ಉ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಸಗಟು ಡಿಪೋಗಳ ನಿರ್ವಹಣೆ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೬ (೭೩೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನ ಶಾಸ್ತ್ರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂಟ್ರೋಲರ್ ಮತು ಅಡಿಟರ್ ಜನರಲ್, ಕರ್ನಾಟಕ ರವರ ವತಿಯಿಂದ ೨೦೨೨ರ ಅಂತ್ಯಕ್ಕೆ ಸಂಬಂಧಿಸಿದಂತೆ ೨೦೨೪ರಲ್ಲಿ ಪ್ರಕಟಿಸಿದ ವರದಿಯಂತೆ ರಾಜ್ಯ ಬಹುತೇಕ ಸಗಟು ಡಿಪೋಗಳಲ್ಲಿ (wholesale Depots) ಮೂಲಸೌಕರ್ಯದಲ್ಲಿನ ಲೋಪಗಳು

ಮತ್ತು ಕಳಪೆ ಗೋದಾಮು ಪದ್ಧತಿಗಳು ತಗ್ಗು ಪ್ರದೇಶದ ಸಗಟು ಡಿಪೋಗಳು, ಕಸದ ರಾಶಿ ಹಾಕುವುದು Rodent infestation, asbestos ceiling, storege of food grainson floor ಇಂತಹ ಪದ್ಧತಿಗಳಿಂದ ಆಹಾರ ಧಾನ್ಯದ ಗುಣಮಟ್ಟ ಕ್ಷೀಣಿಸಲು ಕಾರಣವಾಗಿರುತ್ತದೆ, ಎಂದು ತಿಳಿಸಿದ್ದು, ಈಗ ರಾಜ್ಯ ಸರ್ಕಾರ ಆಹಾರ ಧಾನ್ಯದ ಗುಣಮಟ್ಟ ಕಾಪಾಡಲು ಕೈಗೊಂಡಿರುವ ಕ್ರಮಗಳೇನು ;

(ಆ) ಇದೇ ವರದಿಯ ಪ್ರಕಾರ ೨೦೨೨ರ ಅಂತ್ಯದವರೆಗೆ ೩೦೨ ಸಗಟು ಡಿಪೋಗಳ ಪೈಕಿ ೨೧೧ ಡಿಪೋಗಳನ್ನು ಕರ್ನಾಟಕ ಆಹಾರ ಮತ್ತ ನಾಗರಿಕ ಸರಬರಾಜು ನಿಯಮಿತ ವತಿಯಿಂದ ನಿರ್ವಹಿಸುತ್ತಿದ್ದು, ೧೪೯೪ ಮಂಜೂರಾದ ಹುದ್ದೆಗಳ ಪೈಕಿ ಕೇವಲ ೩೮೭ ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು, ೧೧೧೭ ಹುದ್ದೆಗಳು ಖಾಲಿ ಇದ್ದು, ಅದರಿಂದಾಗಿ ಸಗಟು ಡಿಪೋಗಳ ಕಾರ್ಯರೂಪದಲ್ಲಿ ಗಣನೀಯ ವಿಫಲತೆ ಕಂಡು ಬಂದಿರುತ್ತದೆ ಎಂದು ತಿಳಿಸಿದ್ದು, ಈಗ ಎಷ್ಟು ಸಗಟು ಡಿಪೋಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ಜಿಲ್ಲಾವಾರು ಮತ್ತು ಡಿಪೋವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಮೇ-೨೦೨೩ ರಿಂದ ಮೇ-೨೦೨೫ರವರೆಗೆ ಎಷ್ಟು ಅಕ್ರಮ ಸರಕುಗಳನ್ನು (ಅಕ್ಕಿ, ತೊಗರಿಬೆಳೆ ಇನ್ನಿತರೆ) ಯಾವ ಂಯಾವ ಜಿಲ್ಲೆಗಳಲ್ಲಿ ವಶಪಡಿಸಿಕೊಳ್ಳಲಾಗಿದೆ ; ವಶಪಡಿಸಿಕೊಂಡಿರುವ ಸರಕುಗಳನ್ನು ಎಷ್ಟು ತಿಂಗಳಿಂದ ಹಂಚಿಕೆ ಮಾಡದೆ ಹಾಗೆಯೇ ಇಡಲಾಗಿದೆ ; ಇದರಲ್ಲಿ ಎಷ್ಟು ಸರಕುಗಳು ಮಾನವ ಬಳಕೆಗೆ ಅನರ್ಹವಾಗಿದೆ ? (ಮಾಹಿತಿ ನೀಡುವುದು)

## Green Hydrogen ಉತ್ಪಾದನೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೭ (೭೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಮಿತ್ ವತಿಯಿಂದ ಪ್ರಾಯೋಜಿಕ ಮಾದರಿಯಲ್ಲಿ ಬಳ್ಳಾರಿ ಜಿಲ್ಲೆಯ ಕೆ.ಪಿ.ಸಿ.ಎಲ್ ನ ಆವರಣದಲ್ಲಿ ೩೦೦ ಕಿ.ವ್ಯಾ. ಸಾಮರ್ಥ್ಯವಾದ ಗ್ರೀನ್ ಹೈಡ್ರೋಜನ್ ಸ್ಥಾವರ ಸ್ಥಾಪನೆಗೆ ಟೆಂಡರ್ ಆಹ್ವಾನಿಸಲಾಗಿದ್ದು, ಈ ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ರಾಜ್ಯದ ವತಿಯಿಂದ ಗ್ರೀನ್ ಹೈಡ್ರೋಜನ್ ಅನುಷ್ಠಾನ ಉತ್ಪಾದನೆ ಮತ್ತು ಇನ್ನಿತರೆ ಅಂಶಗಳ ಕುರಿತು ನೀತಿಯನ್ನು ರೂಪಿಸಲಾಗಿದೆಯೇ ; (ಇದ್ದಲ್ಲಿ, ನೀತಿಯ ಪ್ರತಿಯನ್ನು ನೀಡುವುದು)

(ಇ) ಇಲ್ಲಿಯವರೆಗೆ ಈ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ಎಷ್ಟು ಖಾಸಗಿ ಕಂಪನಿಗಳು ಪ್ರಸ್ತಾವನೆಗಳನ್ನು ಸಲ್ಲಿಸಿವೆ ಮತ್ತು ಎಷ್ಟು ಮೊತ್ತದ ಹೂಡಿಕೆ ಮಾಡಲು ತಯಾರಿದ್ದಾರೆ ;

(ಈ) ಈ ಯೋಜನೆಯಿಂದ ರಾಜ್ಯದಲ್ಲಿ ಎಷ್ಟು ಉದ್ಯೋಗಗಳು ಸೃಷ್ಟಿಯಾಗಲಿವೆ ಮತ್ತು ಈ ಯೋಜನೆಯನ್ನು ಜಾರಿಗೆ ತರುವುದರಿಂದ ರಾಜ್ಯದಲ್ಲಿ ಉತ್ಪಾದನೆಯಾಗುವ ಗ್ರೀನ್ ಹೈಡ್ರೋಜನ್ ಅನ್ನು ಇತರೆ ದೇಶಗಳಿಗೆ ರಫ್ತು ಮಾಡುವುದರಿಂದ ಸಾಕಷ್ಟು ಲಾಭಪಡೆಯಬಹುದಾಗಿದ್ದು ಈ ಯೋಜನೆಯನ್ನು ತ್ವರಿತವಾಗಿ ಜಾರಿಗೊಳಿಸಲು ಆಗುತ್ತಿರುವ ಅಡಚಣೆಗಳೇನು ?

# ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ವತಿಯಿಂದ ಔಷಧಿಗಳ ಪೂರೈಕೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೮ (೭೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೯–೨೦ ರಿಂದ ೨೦೨೧–೨೨ರವರೆಗೆ ಆರೋಗ್ಯ ಸಂಸ್ಥೆಗಳಿಂದ ಸ್ವೀಕರಿಸಲಾದ ಇಂಡೆಂಟ್‌ಗಳಲ್ಲಿ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ವತಿಯಿಂದ ಪೂರೈಸಲಾದ ಔಷಧಿಗಳ ಪ್ರಮಾಣದಲ್ಲಿ ಭಾರಿ ವ್ಯತ್ಯಾಸ ಕಂಡಿದ್ದು ಇದಕ್ಕೆ ಕಾರಣಗಳೇನು ; (೨೦೧೭–೨೦ ರಲ್ಲಿ ಸ್ವೀಕರಿಸಲಾದ ಇಂಡೆಂಟ್ ೨೩.೫೮, ಪೂರೈಸಲಾದ ಇಂಡೆಂಟ್–೭.೬೩) (೨೦೨೦–೨೧ ರಲ್ಲಿ ಸ್ವೀಕರಿಸಲಾದ ಇಂಡೆಂಟ್ –೨೮.೫೩. ಪೂರೈಸಲಾದ ಇಂಡೆಂಟ್ –೧೨.೧೮) ಮತ್ತು ೨೦೧೭–೨೨ರಲ್ಲಿ ಸ್ವೀಕರಿಸಲಾದ ಇಂಡೆಂಟ್–೨೪.೭೦ ಪೂರೈಸಲಾದ ಇಂಡೆಂಟ್–೪.೧೭ ಮಾಹಿತಿ ನೀಡುವುದು)

(ಆ) ಈ ಕೊರತೆಯಿಂದಾಗಿ ಸಂಸ್ಥೆಗೆ ಸುಮಾರು ೫೦೦ ಕೋಟಿ.ಗಳ ನಷ್ಟ ಉಂಟಾಗಿದ್ದು, ಇದಕ್ಕೆ ಹೊಣೆ ಯಾರು ಮತ್ತು ಪೂರೈಕೆಯಲ್ಲಿ ಕೊರತೆ ಉಂಟಾಗಿರುವುದಕ್ಕೆ ಕಾರಣಗಳೇನು ;

(ಇ) ಕಂಟ್ರೋಲರ್ ಮತ್ತು ಆಡಿಟಲ್ ಜನರಲ್‌ರವರು ಪ್ರಕಟಿಸಿದ ೨೦೨೪ರ ತಮ್ಮ ವರದಿಯಲ್ಲಿ ಈ ಹಿಂದೆ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ವತಿಯಿಂದ ಬೆಂಗಳೂರು ನಗರ, ಮೈಸೂರು, ಬಳ್ಳಾರಿ, ಧಾರವಾಡ ಮತ್ತು ಕೋಲಾರ ಜಿಲ್ಲೆಗಳಿಗೆ ಪೂರೈಸಲಾದ ಔಷಧಿಗಳ ಪ್ರಮಾಣ

ಶೇ.೫೦ಕ್ಕಿಂತ ಕಡಿಮೆ ಇರುತ್ತದೆ ಎಂದು ಹೇಳಿದ್ದು ಇದು ನಿಜವೇ ; ಇದ್ದಲ್ಲಿ, ಪರಿಶೀಲನೆಗೊಳಪಟ್ಟ ಜಿಲ್ಲೆಗಳಲ್ಲಿ ಮಾತ್ರ ಕಡಿಮೆಯಾಗಿದೆಯೇ ?

## ಸಣ್ಣ ವಾಸಸ್ಥಳ/ಹಳ್ಳಿಯಿಂದ ಬರುವ ಮಕ್ಕಳಿಗೆ ಉಚಿತ ಸಾರಿಗೆ ಸೌಲಭ್ಯ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೯ (೭೩೮) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಣ್ಣ ವಾಸಸ್ಥಳ/ಹಳ್ಳಿಗಳಿಂದ (Habitations/ Hamlets) ಅಥವಾ ಡಿಡಿಪಿಐ/ಸ್ಥಳೀಯ ಪ್ರಾಧಿಕಾರವು ಗುರುತಿಸಿದ ಯಾವುದೇ ಇತರೆ ಸ್ಥಳದಿಂದ ಬರುವ ಮಕ್ಕಳಿಗೆ ಸಮಗ್ರ ಶಿಕ್ಷಣ ಯೋಜನೆಯಡಿ ಉಚಿತ ಸಾರಿಗೆ ಸೌಲಭ್ಯ ನೀಡಲು ಸರ್ಕಾರದ ವತಿಯಿಂದ ೨೦೨೦–೨೧ ಮತ್ತು ೨೦೨೧–೨೨ ರಲ್ಲಿ ಆಯಾ ಜಿಲ್ಲೆಗಳಿಗೆ ಅನುದಾನ ನೀಡಿರುವುದು ನಿಜವೇ ;

(ಆ) ನೀಡಿದ್ದಲ್ಲಿ, ಈ ಯೋಜನೆಗಾಗಿ ರೂ.೧೬ ಕೋಟಿ ಮೊತ್ತವನ್ನು ಬಿಡುಗಡೆ ಮಾಡಿರುವುದು ನಿಜವೇ ; ಇದ್ದಲ್ಲಿ, ಸದರಿ ಮೊತ್ತದಲ್ಲಿ ಇಲಾಖೆ ವತಿಯಿಂದ ಅಂದಾಜು ೪೦ ಲಕ್ಷ ಮೊತ್ತ ಖರ್ಚು ಮಾಡಿರುವುದು ನಿಜವೇ ;

(ಇ) ಇಲಾಖಾವತಿಯಿಂದ ಅಂದಾಜು ಶೇ.೨೦ ರಷ್ಟು ಅನುದಾನವನ್ನು ಖರ್ಚು ಮಾಡಲು ಕಾರಣಗಳೇನು ; (ಸುಮಾರು ೧೮.೦೦೦ ಮಕ್ಕಳು ಈ ಸೌಲಭ್ಯವನ್ನು ಪಡೆಯಲು ಪ್ರಸ್ತಾಪಿಸಿರುತ್ತಾರೆ)

(ಈ) ಸದರಿ ಸೌಲಭ್ಯವು ಈಗಲೂ ಚಾಲ್ತಿಯಲ್ಲಿದೆಯೇ ; ಇದ್ದರೆ, ಎಷ್ಟು ಮಕ್ಕಳು ಈ ಸೌಲಭ್ಯವನ್ನು ಪಡೆದಿರುತ್ತಾರೆ ; ಇಲ್ಲಾವಾದಲ್ಲಿ, ಯಾವ ಕಾರಣಗಳಿಂದ ಈ ಸೌಲಭ್ಯವನ್ನು ತಡೆಹಿಡಿಯಲಾಗಿದೆ ?

# ಉನ್ನತ ಶಿಕ್ಷಣ ಇಲಾಖೆಯಡಿ ಬರುವ ನೃಪತುಂಗ ವಿಶ್ವವಿದ್ಯಾಲಯದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೦ (೭೩೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಸ್ಥಾಪಿತವಾಗಿರುವ ನೃಪತುಂಗ ವಿಶ್ವವಿದ್ಯಾಲಯದಲ್ಲಿ ನಿಗದಿತ ಸಮಯದಲ್ಲಿ ಶೈಕ್ಷಣಿಕ ಮಂಡಳಿ ಸಭೆ (Academic Council Meeting) ಹಮ್ಮಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಆ) ಸದರಿ ವಿಶ್ವವಿದ್ಯಾಲಯವು ಆಯ್ಕೆಯಾದ ಸದಸ್ಯರುಗಳಿಗೆ ಸಭೆಗಳಲ್ಲಿ ವಿಶ್ವವಿದ್ಯಾಲಯದ ಕುರಿತು ಸರಿಯಾದ ಮಾಹಿತಿ ನೀಡದೇ ಚುನಾಯಿತ ಜನಪ್ರತಿನಿಧಿಗಳಿಗೆ ಅಗೌರವ ತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಒಂದು ಸರ್ಕಾರಿ ವಿಜ್ಞಾನ ಕಾಲೇಜನ್ನು ಮೇಲ್ದರ್ಜೆಗೇರಿಸಿ ನೃಪತುಂಗ ವಿಶ್ವವಿದ್ಯಾಲಯುವನ್ನಾಗಿ ಮಾಡಿರುವುದಕ್ಕೆ ಕಾರಣಗಳೇನು ;

(ಈ) ಸದರಿ ವಿಶ್ವವಿದ್ಯಾಲಯವನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ವಿಲೀನಗೊಳಿಸಲು ಸರ್ಕಾರ ಯೋಚಿಸಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ? (ಮಾಹಿತಿ ನೀಡುವುದು)

# ಶಾಲಾ ಶಿಕ್ಷಕರುಗಳ ಮುಂಬಡ್ತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೨೧ (೬೨೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಪ್ರಕಟವಾದ ಎಸ್.ಎಸ್.ಎಲ್.ಸಿ. ಫಲಿತಾಂಶದಲ್ಲಿ ಶೇ.೬೦ಕ್ಕೂ ಕಡಿಮೆಯಾದರೆ ಅಂತಹ ಶಾಲಾ ಶಿಕ್ಷಕರುಗಳಿಗೆ ಮುಂಬಡ್ತಿ ನೀಡುವುದಿಲ್ಲ ಎಂದು ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ; (ಸ್ಪಷ್ಟವಾಗಿ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಕಡಿಮೆ ಫಲಿತಾಂಶ ಪ್ರಕಟವಾಗಲು ಸರ್ಕಾರದ ಹಲವಾರು ನಿಯಮಗಳು ಕಾರಣವಲ್ಲವೇ ;

(ಇ) ಈಗಾಗಲೇ ಎಷ್ಟು ಪ್ರೌಢ ಶಾಲಾ ಶಿಕ್ಷಕರುಗಳ ಮುಂಬಡ್ತಿಯನ್ನು ತಡೆಹಿಡಿಯಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮುಂಬಡ್ತಿ ಹಾಗೂ ಅನುದಾನದ ಸಂಬಂಧ ಹೊರಡಿಸಿದ ಸುತ್ತೋಲೆಯನ್ನು ಸರ್ಕಾರವು ಹಿಂತೆಗೆದುಕೊಳ್ಳುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹಿಂತೆಗೆದುಕೊಳ್ಳಲಾಗುವುದು ? (ವಿವರ ನೀಡುವುದು)

## ಬೆಳಗಾವಿಯ ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬಾಗಲಕೋಟೆ ವಿ.ವಿ., ಮತ್ತು ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿ.ವಿ., ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೨೨ (೬೨೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಮತ್ತು ಬಾಗಲಕೋಟೆ ಜಿಲ್ಲೆಯ ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಒಟ್ಟು ಮಂಜೂರಾದ ಭೋದಕ ಮತ್ತು ಭೋದಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಖಾಯಂ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಭೋದಕೇತರ ನೌಕರರನ್ನು ಮಾನವೀಯತೆ ಆಧಾರದ ಮೇಲೆ ಖಾಯಂ ಮಾಡಿಕೊಳ್ಳಲು ಇರುವ ಅಡಚಣೆಗಳೇನು ;

(ಈ) ಹೊರಗುತ್ತಿಗೆ ಆಧಾರದ ನೌಕರರನ್ನು ಅವರ ಸೇವೆ ಸಲ್ಲಿಸಿದ ಆಧಾರದ ಮೇಲೆ ಹಂತ ಹಂತವಾಗಿ ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳುವುದು ; (ಮಾಹಿತಿ ನೀಡುವುದು)

(ಉ) ಸದರಿ ವಿಶ್ವವಿದ್ಯಾಲಯಗಳಿಗೆ ಕಳೆದ ೦೨ ವರ್ಷಗಳಿಂದ ಮೂಲಭೂತ ಸೌಕರ್ಯಗಳಿಗೆ ಹಾಗೂ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆಯೇ ; (ಮಾಹಿತಿ ನೀಡುವುದು) ಮತ್ತು ಬಿಡುಗಡೆ ಮಾಡದೇ ಇದ್ದಲ್ಲಿ, ಯಾವ ಕಾರಣಕ್ಕಾಗಿ ಬಿಡುಗಡೆ ಮಾಡಿರುವುದಿಲ್ಲ ಮತ್ತು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೨೩ (೭೮೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಒಟ್ಟು ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿವೃತ್ತಿ ಅಥವಾ ವರ್ಗಾವಣೆಗೊಂಡಾಗ ಸದರಿ ಹುದ್ದೆಯ ಪ್ರಭಾರವನ್ನು ಯಾರಿಗೆ ನೀಡಲಾಗುವುದು ಹಾಗೂ ಇದಕ್ಕೆ ಇರುವ ನಿಯಮಾವಳಿಗಳೇನು ; (ವಿವರ ನೀಡುವುದು)

(ಇ) ನಿಯಮಗಳಿಗೆ ವ್ಯತಿರಿಕ್ತವಾಗಿ ಬೆಳಗಾವಿ ಜಿಲ್ಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಹುದ್ದೆಗೆ ಅಂತಹ ಜಿಲ್ಲಾ ನಿಯೋಜನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ನೇಮಕ ಮಾಡಲಾಗಿದೆ ? (ವಿವರ ನೀಡುವುದು)

## ಸುಮಾರು ೫೮ ವರ್ಷಗಳು ಕಳೆದರೂ ಸಹ ವೃಂದ ಮತ್ತು ನೇಮಕಾತಿ ಪರಿಷ್ಕರಿಸದಿರುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೨೪ (೭೩೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ೧೯೬೭ ರಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಪ್ರಕ್ರಿಯೆ ೨೦೧೮ ರಿಂದ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಪ್ರಕ್ರಿಯೆ ಪ್ರಾರಂಭವಾಗಿ ಸುಮಾರು ೬ ವರ್ಷಗಳು ಕಳೆದರೂ ಸಹ ಪೂರ್ಣಗೊಳಿಸದೆ ಇರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುವುದರೊಂದಿಗೆ ಅಂತಿಮಗೊಳಿಸಲು ಎಷ್ಟು ವರ್ಷಗಳು ಬೇಕಾಗಬಹುದು ; (೨೦೧೮ ರಿಂದ ಇಲ್ಲಿವರೆಗೆ ಈ ವಿಷಯದ ಕುರಿತು ಜಂಟಿ ನಿರ್ದೇಶಕರು ಆಯುಕ್ತರು, ಸರ್ಕಾರದ ಪ್ರಧಾನ ಕಾಯದರ್ಶಿಗಳು

ಹಾಗೂ ಮಾನ್ಯ ಸಚಿವರ ಅಧ್ಯಕ್ಷತೆಯಲ್ಲಿ ನಡೆದಿರುವ ಎಲ್ಲಾ ಸಭೆಗಳ ಮಾಹಿತಿ ನೀಡುವುದು)

(ಆ) ಸಿ.ಆ.ಸು.ಇಲಾಖೆಯ ನಡವಳಿ, ಸುತ್ತೋಲೆ ಮತ್ತು ನೆನಪೋಲೆಗಳ ಅನ್ವಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಹಾಗೂ ಮೂರು ವರ್ಷಗಳಿಗೊಮ್ಮೆ ಪರಿಶೀಲಿಸುವಂತೆ ತಿಳಿಸಿದ್ದಾಗ್ಯೂ ಸಹ ಶಾಲಾ ಶಿಕ್ಷಣ ಇಲಾಖೆಯಲ್ಲಿ ಸುಮಾರು ೫೮ ವರ್ಷಗಳಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯ ಬಗ್ಗೆ ವಿಳಂಬ ಮಾಡುತ್ತಿರಲು ಕಾರಣಗಳೇನು ;

(ಇ) ನಿಯಮಗಳ ಪರಿಷ್ಕರಣೆಯಲ್ಲಿ ಪ್ರಥಮ ದರ್ಜೆ ಲೆಕ್ಕ ಸಹಾಯಕರು ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಆದೇಶಗಳನ್ನು ಉದ್ದೇಶ ಪೂರ್ವಕವಾಗಿ ಮರೆಮಾಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಮರೆಮಾಚುತ್ತಿರುವ ಹಾಗೂ ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ರೀತಿ ಕ್ರಮಕೈಗೊಳ್ಳಲಾಗುವುದು ;

(ಈ) ಸುಮಾರು ೬ ವರ್ಷಗಳು ಕಳೆದಾಗ್ಯೂ ಸಹ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಿ ಪರಿಷ್ಕರಣೆ ಮಾಡಿ ಅಂತಿಮಗೊಳಿಸಲು ಶಾಲಾ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿಗಿರುವ ಸಮಸ್ಯೆಗಳೇನು ; ಹಾಗಿದ್ದಲ್ಲಿ, ಸರ್ಕಾರ ಎಷ್ಟು ದಿನಗಳಲ್ಲಿ ಪರಿಷ್ಕರಿಸಲಾಗುವುದು ; ಪರಿಷ್ಕರಣೆಯ ಕುರಿತು ಸರ್ಕಾರ ಭರವಸೆ ನೀಡುವುದೇ ; ಪರಿಷ್ಕರಣೆ ಸಾಧ್ಯವಾಗದೇ ಇದ್ದಲ್ಲಿ, ಸರ್ಕಾರ ಕೈಗೊಂಡಿರುವ ಪೂರಕ ಕ್ರಮಗಳೇನು ; ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಅಂತಿಮವಾಗಿ

ಆದೇಶಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ? (ಮಾಹಿತಿ ನೀಡುವುದು)

## ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕ ಹುದ್ದೆಗಳನ್ನು ಬಡ್ತಿ ಮೂಲಕ ತುಂಬುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೨೫ (೭೩೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ರಲ್ಲಿ ಶಾಲಾ ಶಿಕ್ಷಣ ಇಲಾಖೆಗೆ ಆಕೌಂಟ್ಸ್ ಅಧೀಕ್ಷಕರು ಮತ್ತು ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರು ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಗೆ ಮಂಜೂರಾಗಿರುವ ಒಟ್ಟು ಅಕೌಂಟ್ಸ್ ಅಧೀಕ್ಷಕರು ಮತ್ತು ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಎಷ್ಟು ; (ಮಂಜೂರಾತಿ ಆದೇಶದ ಪ್ರತಿಗಳನ್ನು ನೀಡುವುದು)

(ಆ) ೨೦೧೫ರ ಆದೇಶದಲ್ಲಿ ಹುದ್ದೆಗಳಿಗೆ ಹುದ್ದೆ ತುಂಬವ ವಿಧಾನವನ್ನು ಏನೆಂದು ನಿಗದಿಪಡಿಸಲಾಗಿದೆ ; ಸದರಿ ಆದೇಶದಲ್ಲಿ ಎರಡು ಹುದ್ದೆಗಳಿಗೂ ರಾಜ್ಯದ ಲೆಕ್ಕಪತ್ರ ಇಲಾಖೆಯಿಂದ ನಿಯೋಜನೆ ಮೇರೆಗೆ ಹುದ್ದೆ ತುಂಬುವ ವಿಧಾನವನ್ನು ನಿಗದಿಪಡಿಸಿದ್ದರೂ ಸಹ ಅಕೌಂಟ್ಸ್ ಅಧೀಕ್ಷಕರುಗಳ ಹುದ್ದೆಗಳಿಗೆ ಶಾಲಾ ಶಿಕ್ಷಣ ಇಲಾಖೆಯಿಂದ ಬಡ್ತಿ ನೀಡುವ ಮೂಲಕ ತುಂಬುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಈ ಹುದ್ದೆಗಳಿಗೆ ಈ ಎರಡು ಹುದ್ದೆಗಳಿಗೆ ಒಂದೇ ರೀತಿಯ ಆದೇಶವಿದ್ದರೂ ಸಹ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕ ಹುದ್ದೆಗಳಿಗೆ ಬಡ್ತಿ ನೀಡಲು ತಾರತಮ್ಯ ಮಾಡುತ್ತಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ದಿನಾಂಕ : ೩೧.೦೭.೨೦೨೫ರ ಅಂತ್ಯಕ್ಕಿಂತ ಶಾಲಾ ಶಿಕ್ಷಣ ಇಲಾಖೆಯಲ್ಲಿ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಎಷ್ಟು ; ಆ ಹುದ್ದೆಗಳು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ ; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳನ್ನು ಯಾವ ರೀತಿ ತುಂಬಲಾಗಿದೆ ; ಖಾಲಿ ಇರಲು ಕಾರಣಗಳೇನು ; ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಆರ್ಥಿಕ ಇಲಾಖೆಯ ಆದೇಶಗಳಲ್ಲಿರುವಂತೆ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆಗಳು ಮೂರು ತಿಂಗಳೊಳಗಾಗಿ ಪೂರ್ಣಗೊಳಿಸಿ ಅನುಸರಣಾ ವರದಿಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲು ತಿಳಿಸಲಾಗಿದೆಯೇ ; ಹಾಗಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಯು ಅನುಸರಣಾ ವರದಿಯನ್ನು ನೀಡುವುದು ; ಸಲ್ಲಿಸದೇ ಇದ್ದಲ್ಲಿ, ಕಾರಣಗಳೇನು ; ಅನುಸರಣಾ ವರದಿ ಸಲ್ಲಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ರೀತಿ ಕ್ರಮಕೈಗೊಳ್ಳುವುದು ;

(ಉ) ಇಲಾಖೆಯಲ್ಲಿ ಖಾಲಿ ಇರುವಂತಹ ಶೇ. ೫೦ ರಷ್ಟು ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ತುಂಬುವ ಬಗ್ಗೆ ಆರ್ಥಿಕ ಹಾಗೂ ಇನ್ನಿತರೆ ಇಲಾಖೆಗಳ ಆದೇಶಗಳು ಸ್ಪಷ್ಟವಾಗಿದ್ದರೂ ಸಹ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಸಿಬ್ಬಂದಿಗಳಿಗೆ ಬಡ್ತಿ ನೀಡುವ ಮೂಲಕ ಭರ್ತಿ ಮಾಡದಿರಲು ಕಾರಣಗಳೇನು ; ಈ ಕುರಿತು ಸರ್ಕಾರದ ಸ್ಪಷ್ಟ ಮತ್ತು ನಿಖರವಾದ ನಿಲುವೇನು ? (ವಿವರ ನೀಡುವುದು)

# ೦೧.೦೪.೨೦೦೬ರ ಹಿಂದೆ ಅಧಿಸೂಚನೆ ಹೊರಡಿಸಿ ನಂತರ ನೇಮಕಗೊಂಡ ನೌಕರರಿಗೆ ಹಳೆಯ ಪಿಂಚಣಿ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೬೨೬ (೭೦೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೦೧.೦೪.೨೦೦೬ರ ಹಿಂದೆ ಸರ್ಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ನಂತರದ ದಿನಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡು ವಿವಿಧ ಹುದ್ದೆಗಳಿಗೆ ಸೇರ್ಪಡೆಯಾಗಿ ವಿಶ್ವವಿದ್ಯಾನಿಲಯಗಳಲ್ಲಿ ಯುಜಿಸಿ ವೇತನ ಪಡೆದು ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರರಿಗೆ ಹಳೆಯ ಪಿಂಚಣಿ ಯೋಜನೆಯನ್ನು ನೀಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಆರ್ಥಿಕ ಇಲಾಖೆಯು ದಿನಾಂಕ:೨೪.೦೧.೨೦೨೪ರಂದು ಹೊರಡಿಸಿರುವ ಆದೇಶದಲ್ಲಿ ೦೧.೦೪.೨೦೦೬ರ ಪೂರ್ವದಲ್ಲಿ ಅರ್ಜಿ ಸಲ್ಲಿಸಿ ನಂತರ ಹಲವಾರು ಇಲಾಖೆಗಳಲ್ಲಿ ವಿವಿಧ ಹುದ್ದೆಗಳಿಗೆ ಸೇರ್ಪಡೆಯಾಗಿರುವವರಿಗೆ ಹಳೆಯ ಪಿಂಚಣಿ ಯೋಜನೆಯನ್ನು ನೀಡಲಾಗಿದೆಯೇ ;

(ಇ) ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯುಜಿಸಿ ವೇತನ ಪಡೆಯುತ್ತಿರುವ ಪ್ರಾಧ್ಯಾಪಕರಿಗೆ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಿ ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಅನ್ವಯಿಸುವುದಿಲ್ಲವೆಂದು ಆರ್ಥಿಕ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆಯೇ ; (ವಿವರ ನೀಡುವುದು)

(ಈ) ರಾಜ್ಯದ ವಿವಿಧ ಸರ್ಕಾರಿ ವಿಶ್ವವಿದ್ಯಾನಿಲಯಗಳಿಂದ ಅರ್ಹ ಬೋಧಕ ಬೋಧಕೇತರರಿಗೆ ಆರ್ಥಿಕ ಇಲಾಖೆಯು ಅಧಿಸೂಚನೆಯನ್ವಯ ಪದವಿ ಕಾಲೇಜಿನ ಅಧ್ಯಾಪಕರಿಗೆ ಹಳೆ ಪಿಂಚಣಿ ಸೌಲಭ್ಯ ನೀಡಿ ವಿಶ್ವವಿದ್ಯಾಲಯದ ನೌಕರರಿಗೆ ನೀಡದೆ ಇರಲು ಕಾರಣಗಳೇನು ?

## ರಾಜ್ಯದಲ್ಲಿ ರೈತರು ಬೆಳೆಯುವ ಶ್ರೀಗಂಧ ಬೆಳೆಗಳ ಕುರಿತು ಮಾಹಿತಿ ನೀಡುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೭ (೭೬೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪ್ರದೇಶದಲ್ಲಿ ರೈತರು ಶ್ರೀಗಂಧ ಬೆಳೆಯುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಟಾವಿಗೆ ಬಂದ ಶ್ರೀಗಂಧ ಮರಗಳನ್ನು ಕಳ್ಳರು ರಾತ್ರಿ ಕಳ್ಳತನ ಮಾಡಿಕೊಂಡು ಹೋಗುತ್ತಿರುವ ವಿಷಯ ಸರ್ಕಾರಕ್ಕೆ ಮಾಹಿತಿ ಇದೆಯೇ ; ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಎಷ್ಟು ಆರೋಪಿಗಳನ್ನು ಆ ಪ್ರಕರಣಗಳಲ್ಲಿ ಬಂಧಿಸಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ಕಳ್ಳತನದ ಶ್ರೀಗಂಧ ಕಟ್ಟಿಗೆ ವಶಪಡಿಸಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳ್ಳರು ಅವಸರದಲ್ಲಿ ಕಟಾವ್ ಮಾಡಿಕೊಂಡು ಹೋದ ಮೇಲೆ ಅವರ ಜಮೀನಿನಲ್ಲೆ ಉಳಿದ ಶ್ರೀಗಂಧ ಕಡ್ಡಿ ಮತ್ತು ಬೇರುಗಳ ಮಾರಾಟಕ್ಕೆ ಸರ್ಕಾರದ ಕ್ರಮವೇನು ;

(ಈ) ಶ್ರೀಗಂಧ ಬೆಳೆಯುವ ರೈತರಿಗೆ ಕಳ್ಳತನವಾಗದ ಹಾಗೆ ಅವರ ಬೆಳೆಯ ಸುರಕ್ಷತೆ ಕುರಿತಂತೆ ನಷ್ಟಕ್ಕೆ ಸರ್ಕಾರ ಯಾವ ಪರಿಹಾರೋಪಾಯಗಳನ್ನು ಕೈಗೊಂಡಿದೆ ?

## ರಾಜ್ಯದ ಗ್ರಾಮೀಣ ಭಾಗದ ರೈತರ ಜಮೀನುಗಳಲ್ಲಿ ಹರಿದು ಬೀಳುತ್ತಿರುವ ವಿದ್ಯುತ್ ತಂತಿಗಳನ್ನು ಬದಲಾಯಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೮ (೭೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಭಾಗದ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಸಲು ಸುಮಾರು ೪೦ ರಿಂದ ೫೦ ವರ್ಷ ಹಳೆಯದಾದ ವಿದ್ಯುತ್ ತಂತಿಗಳು ಮೇಲಿಂದ ಮೇಲೆ ಅವು ಹರಿದು ಬೀಳುವುದರಿಂದ ರೈತರ ಬೆಳೆ ನಾಶ, ಮಾನವ ಹಾಗೂ ಪ್ರಾಣಿಗಳ ಜೀವಹಾನಿ ಪ್ರಕರಣಗಳು ಬಹಳಷ್ಟು ಕಂಡು ಬರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹಳೆಯ ಈ ವಿದ್ಯುತ್‌ಗಳನ್ನು ಬದಲಾಯಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ರೈತರು ತಮ್ಮ ಜಮೀನಿನಲ್ಲಿ ತೋಟದ ಮನೆಗಳನ್ನು ನಿರ್ಮಿಸಿಗೊಂಡಿದ್ದು, ಅಂತಹ ತೋಟದ ಮನೆಗಳಿಗೆ ನಿರಂತರ ವಿದ್ಯುತ್ ಜ್ಯೋತಿ ಯೋಜನೆ ಜಾರಿಯಾಗದ ಕಾರಣ, ವಿದ್ಯುತ್ ಸಂಪರ್ಕ ಇಲ್ಲದೇ ಅವರು ಕತ್ತಲೆಯಲ್ಲಿ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರಿಗೆ ವಿದ್ಯುತ್ ಸಂಪರ್ಕ ನೀಡುವ ದಿಶೆಯಲ್ಲಿ ಸರ್ಕಾರ ಹಾಕಿಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಹೊಸ ವಿದ್ಯುತ್ ಉಪ ಕೇಂದ್ರಗಳು ಮಂಜೂರಾದ ಹಿನ್ನಲೆಯಲ್ಲಿ ಉಪ ಕೇಂದ್ರ ಸ್ಥಾಪಿಸುವ ರೈತರ ಜಮೀನುಗಳಿಗೆ ಹೆಚ್ಚಿನ ಪರಿಹಾರ ನೀಡುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೯ (೭೬೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ವಿದ್ಯುತ್ ಉಪ ಕೇಂದ್ರಗಳು ಮಂಜೂರಾತಿಯಾಗಿದ್ದು, ಅವುಗಳ ಸ್ಥಾಪನೆಗಾಗಿ ಬಹಳಷ್ಟು ಕಡೆ ಸರ್ಕಾರಿ ಜಮೀನುಗಳ ಲಭ್ಯತೆ ಇಲ್ಲದೇ ಪ್ರಸಕ್ತ ಮಾರುಕಟ್ಟೆ ಬೆಲೆಗಿಂತ ಸರ್ಕಾರ ಅತ್ಯಂತ ಕಡಿಮೆ ದರ ನೀಡಲಾಗುತ್ತಿರುವ ಕಾರಣ ರೈತರು ಜಮೀನು ನೀಡಲು ನಿರಾಕರಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲು ರೈತರ ಜಮೀನುಗಳಿಗೆ ಹೆಚ್ಚಿನ ಪರಿಹಾರ ಒದಗಿಸಿ, ಈ ಉಪ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗುವುದೇ ?

## ವಿದ್ಯುತ್ ಸಂಪರ್ಕ ಸಿಗದೆ ಸಾರ್ವಜನಿಕರಿಗೆ ತೊಂದರೆ ಆಗಿರುವ ಬಗ್ಗೆ

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೦ (೬೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ೨೦೨೫ನೇ ಸಾಲಿನಲ್ಲಿ ವಿದ್ಯುತ್ ಸಂಪರ್ಕ ಕೋರಿ ಇಲ್ಲಿಯವರೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಸದರಿ ಅರ್ಜಿಗಳಲ್ಲಿ ಇಲ್ಲಿಯವರೆಗೆ ವಿದ್ಯುತ್ ಸಂಪರ್ಕ ಕಲ್ಪಿಸಿ ತಿರಸ್ಕರಿಸಿರುವ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಎಸ್ಕಾಂವಾರು ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿನ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ಠೇವಣಿ ಪಾವತಿಸಿ, ವಿದ್ಯುತ್ ಸಂಪರ್ಕ ಕೋರಿರುವ ಸಾವಿರಾರು ಅರ್ಜಿದಾರರಿಗೆ ಇದುವರೆಗೂ ವಿದ್ಯುತ್ ಸಂಪರ್ಕ ಸಿಗದೇ ಅತ್ಯಂತ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು ಮತ್ತು ವಿದ್ಯುತ್ ಸಂಪರ್ಕ ಸಿಗದೆ ಸಾರ್ವಜನಿಕರಿಗೆ ಮತ್ತು ಸಣ್ಣ ಉದ್ದಿಮೆದಾರರಿಗೆ ಆಗಿರುವ ತೊಂದರೆಯನ್ನು ನಿವಾರಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಈ) ಗೃಹ ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಂಪರ್ಕ ಅತ್ಯಂತ ಅವಶ್ಯಕ ಮತ್ತು ಅನಿವಾರ್ಯತೆಯಿರುವ ಹಿನ್ನೆಲೆಯಲ್ಲಿ ಕೋರಿರುವ ಸಾವಿರಾರು ಅರ್ಜಿದಾರರಿಗೆ ಸರ್ಕಾರ ಯಾವ ಕಾಲಮಿತಿಯೊಳಗೆ ವಿದ್ಯುತ್ ಸಂಪರ್ಕ ಒದಗಿಸುವುದು ?

## ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚುವರಿ ಶುಲ್ಕ ವಸೂಲು ಮಾಡುತ್ತಿರುವ ಬಗ್ಗೆ

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೧ (೬೩೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೃತ್ತಿಪರ ಕೋರ್ಸುಗಳ ಪ್ರವೇಶಾತಿಯಲ್ಲಿ ಸರ್ಕಾರಿ ಕೋಟಾದ ಶೇ.೪೦ ರಷ್ಟು ಸೀಟುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಂದ ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ನಿಯಮಬಾಹಿರವಾಗಿ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿದ್ದು, ಬಡವರ್ಗದ ವಿದ್ಯಾರ್ಥಿಗಳು ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಿಯಮಬಾಹಿರವಾಗಿ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಅಂತಹ ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ವಿರುದ್ಧ ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಇ) ಸದರಿ ವಿಶ್ವವಿದ್ಯಾಲಯಗಳ ವಿರುದ್ಧ ತುರ್ತಾಗಿ ಬಡವರ್ಗದ ವಿದ್ಯಾರ್ಥಿಗಳ ಹಿತಾಸಕ್ತಿ ಕಾಯಲು ಸರ್ಕಾರ ಅತ್ಯಂತ ಕಠಿಣ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ ?

## ಆಯುಷ್ ಇಲಾಖೆಯಲ್ಲಿ ಮಂಜೂರಾದ ಶುಶ್ರೂಷಕರ ಹುದ್ದೆಗಳಿಗೆ ಎನ್.ಎಚ್.ಎಮ್. ಆಯುಷ್ ಗುತ್ತಿಗೆ ಶುಶ್ರೂಷಕರನ್ನು ವಿಲೀನಗೊಳಿಸುವ ಬಗ್ಗೆ

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೨ (೬೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಯುಷ್ ಇಲಾಖೆಯಲ್ಲಿ ಮಂಜೂರಾದ ಶುಶ್ರೂಷಕರ ಸಂಖ್ಯೆ ಎಷ್ಟು ;

(ಆ) ಎನ್.ಎಚ್.ಎಮ್. ಆಯುಷ್ ವಿಭಾಗದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ ಶುಶ್ರೂಷಕರ ಸಂಖ್ಯೆ ಎಷ್ಟು ;

(ಇ) ಮಂಜೂರಾದ ಶುಶ್ರೂಷಕರ ಹುದ್ದೆಗಳ ಎದುರು ಎನ್.ಎಚ್.ಎಮ್ ಆಯುಷ್ ಗುತ್ತಿಗೆ ಶುಶ್ರೂಷಕರನ್ನು ವಿಲೀನ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಂಚಕರ್ಮ ಚಿಕಿತ್ಸಾ ಕೇಂದ್ರಗಳನ್ನು ನೇರವಾಗಿ ಆಯುಷ್ ಇಲಾಖೆಯಿಂದ ಕಾರ್ಯನಿರ್ವಹಿಸುವಂತೆ ಕ್ರಮವಹಿಸುವ ಬಗ್ಗೆ

**ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೩ (೬೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎನ್.ಎಚ್.ಎಮ್. ಆಯುಷ್ ವಿಭಾಗದ ಪಂಚಕರ್ಮ ಚಿಕಿತ್ಸಾ ಘಟಕಗಳಲ್ಲಿ ಖಾಯಂ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರಿಗೆ ಪ್ರಸ್ತುತ ನೀಡುತ್ತಿರುವ ವೇತನ ಮತ್ತು ಭತ್ಯೆಗಳೇನು ; (ವಿವರ ನೀಡುವುದು)

(ಆ) ಪಂಚಕರ್ಮ ಚಿಕಿತ್ಸಾ ಘಟಕಗಳು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ ;

(ಇ) ಪಂಚಕರ್ಮ ಚಿಕಿತ್ಸಾ ಘಟಕಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಹಾಗೂ ಶುಶ್ರೂಷಕರುಗಳನ್ನು ಆಯುಷ್ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳಿಗೆ ವಿಲೀನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಎನ್.ಎಚ್.ಎಮ್. ಆಯುಷ್ ವಿಭಾಗದ ಕಾರ್ಯಕ್ರಮದಲ್ಲಿನ ೧೩ ಪಂಚಕರ್ಮ ಚಿಕಿತ್ಸಾ ಕೇಂದ್ರಗಳನ್ನು ಆಯಷ್ ಇಲಾಖೆಗೆ ವಹಿಸಿ ನೇರವಾಗಿ ಆಯುಷ್ ಇಲಾಖೆಯಿಂದ ಕಾರ್ಯನಿರ್ವಹಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ ?

## ನಕ್ಷೆ ಉಲ್ಲಂಘಿಸಿ ನಿರ್ಮಿಸಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೪ (೬೫೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಕ್ಷೆ ಉಲ್ಲಂಘಿಸಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ವಿಚಾರಕ್ಕೆ ಸುಪ್ರೀಂ ಕೋರ್ಟ್ ನೀಡಿದ ಆದೇಶ ಏನು ; ಈ ಆದೇಶವನ್ನು ಯಾವ ಯಾವ ರಾಜ್ಯಗಳು ಜಾರಿಗೆ ತಂದಿವೆ ; ರಾಜ್ಯದಲ್ಲಿ ಈ ಆದೇಶ ಎಂದಿನಿಂದ ಜಾರಿಗೆ ಬಂದಿದೆ ;

(ಆ) ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಆದೇಶದ ಸಾಧಕ–ಬಾಧಕ ಅಧ್ಯಯನ ನಡೆಸಿದೆಯೇ ; (ಅಧ್ಯಯನ ವರದಿಯ ಪ್ರತಿ ನೀಡುವುದು) ಸಾಧಕ–ಬಾಧಕಗಳ ಅಧ್ಯಯನ ನಡೆಸದೆ ಆದೇಶವನ್ನು ಜಾರಿಗೆ ತರಲು ಕಾರಣಗಳೇನು ;

(ಇ) ರಾಜ್ಯದಲ್ಲಿ ಏಕಾಏಕಿ ವಿದ್ಯುತ್ ಸಂಪರ್ಕ ನೀಡುವುದನ್ನು ನಿಲ್ಲಿಸಿರುವುದರಿಂದ ಉದ್ದಿಮೆಗಳಿಗೆ ಮತ್ತು ಜನಸಾಮಾನ್ಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯಾದ್ಯಂತ ವಿದ್ಯುತ್ ಸಂಪರ್ಕ ಕೋರಿ ಪ್ರಸ್ತುತ ಎಷ್ಟು ಅರ್ಜಿಗಳು ಬಾಕಿ ಇವೆ ; (ಉದ್ದಿಮೆಗಳು ಹಾಗೂ ವಸತಿ ಕಟ್ಟಡಗಳ ಪ್ರತ್ಯೇಕ ವಿವರವನ್ನು ಜಿಲ್ಲಾವಾರು ನೀಡುವುದು)

(ಈ) ಸ್ವಂತ ಮನೆ ಹೊಂದುವ ಆಸೆಯಿಂದ ನಗರ ಪ್ರದೇಶಗಳಲ್ಲಿ ಸಣ್ಣ ಸಣ್ಣ ನಿವೇಶನಗಳಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವ ಬಡವರಿಗೆ ಮತ್ತು ಸಣ್ಣ ಕೈಗಾರಿಕೆ ವಲಯಕ್ಕೆ ವಿದ್ಯುತ್ ಸಂಪರ್ಕ ಪಡೆಯಲು ಆಗುತ್ತಿರುವ ಈ ಸಮಸ್ಯೆ ಸರಿಪಡಿಸಲು ಸರ್ಕಾರ ಈವರೆವಿಗೂ ಏಕೆ ಪರ್ಯಾಯ ಕ್ರಮ ಕೈಗೊಂಡಿಲ್ಲ ; ಈ ವಿಚಾರದಲ್ಲಿ ಸರ್ಕಾರದ ನಿಲುವೇನು ?

## ಸರ್ಕಾರಿ ಶಾಲೆಗಳ ಕಟ್ಟಡ ಹಾಗೂ ಕೊಠಡಿಗಳು ಶಿಥಿಲಗೊಂಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೫ (೬೫೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ ; ಸರ್ಕಾರಿ ಶಾಲೆ ಕಟ್ಟಡಗಳು ಹಾಗೂ ಕೊಠಡಿಗಳು ಅಪಾಯದ ಸ್ಥಿತಿಯಲ್ಲಿರುವುದು ಮತ್ತು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಪಾಯದ ಸ್ಥಿತಿಯಲ್ಲಿರುವ ಮತ್ತು ಶಿಥಿಲಗೊಂಡಿರುವ ಕಟ್ಟಡ ಹಾಗೂ ಕೊಠಡಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ೨ ವರ್ಷದಿಂದ ಕಟ್ಟಡಗಳ ಮತ್ತು ಶಾಲಾ ಕೊಠಡಿಗಳ ದುರಸ್ತಿಗೆ ಸರ್ಕಾರ ಬಿಡುಗಡೆ ಮಾಡಿರುವ ಹಣ ಮತ್ತು ವೆಚ್ಚ

ಮಾಡಿರುವ ಹಣ ಎಷ್ಟು ; ಇದೇ ಅವಧಿಯಲ್ಲಿ ಎಷ್ಟು ಶಾಲೆಗಳ ಕಟ್ಟಡ ಹಾಗೂ ಕೊಠಡಿಗಳ ದುರಸ್ಥಿ ಕಾರ್ಯ ಕೈಗೊಳ್ಳಲಾಗಿದೆ ; ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡಿರುವ ಕಟ್ಟಡಗಳೆಷ್ಟು ; (ಕಟ್ಟಡ ಹಾಗೂ ಕೊಠಡಿಗಳ ವಿವರವನ್ನು ವಿಧಾನಸಭಾ ಕ್ಷೇತ್ರವಾರು ನೀಡುವುದು)

(ಇ) ಕಳೆದ ೨ ವರ್ಷದಿಂದ ಹೊಸದಾಗಿ ಎಷ್ಟು ಶಾಲಾ ಕಟ್ಟಡಗಳನ್ನು ಮತ್ತು ಕೊಠಡಿಗಳನ್ನು ನಿರ್ಮಿಸಲಾಗಿದೆ ; ಇದಕ್ಕಾಗಿ ಮಂಜೂರು, ಬಿಡುಗಡೆ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಶಾಲೆಗಳಲ್ಲಿರುವ ಶಿಥಿಲ ಕೊಠಡಿಗಳ ದುರಸ್ತಿಗೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಹೊಸ ಕೊಠಡಿಗಳ ನಿರ್ಮಾಣಕ್ಕೆ ಅಗತ್ಯವಿರುವ ಹಣ ಎಷ್ಟು ; ಅಗತ್ಯ ಹಣ ಲಭ್ಯ ಇದೆಯೇ ; ಹಾಗಿದ್ದಲ್ಲಿ, ಕೊಠಡಿಗಳ ದುರಸ್ತಿಗೆ ಹಾಗೂ ಹೊಸ ಕೊಠಡಿಗಳ ನಿರ್ಮಾಣಕ್ಕೆ ಕೈಗೊಂಡಿರುವ ಕ್ರಮವೇನು ; ಹಾಕಿಕೊಂಡಿರುವ ಯೋಜನೆಗಳೇನು ?

## ಅಕ್ರಮವಾಗಿ ಒತ್ತುವರಿ ಮಾಡಿರುವ ಅರಣ್ಯ ಭೂಮಿಯನ್ನು ಒತ್ತುವರಿ ತೆರವು ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೬ (೬೬೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಎಕರೆ ಅರಣ್ಯ ಭೂಮಿ ಇದೆ; ಈ ಪೈಕಿ ಎಷ್ಟು ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದೆ ; (ಜಿಲ್ಲಾವಾರು ಸರ್ವೆ ನಂಬರ್ ಸಹಿತ ವಿವರ ನೀಡುವುದು)

(ಆ) ಒತ್ತುವರಿಯಾಗಿರುವ ಅರಣ್ಯ ಭೂಮಿಯನ್ನು ವಶಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಕಳೆದ ೨ ವರ್ಷದಿಂದ ಎಷ್ಟು ಎಕರೆ ಅರಣ್ಯ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ ;

(ಇ) ಒಟ್ಟು ಎಷ್ಟು ಒತ್ತುವರಿದಾರರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ; (ಒತ್ತುವರಿದಾರರ ವಿವರ ನೀಡುವುದು)

(ಈ) ಒತ್ತುವರಿಯಿಂದ ರಕ್ಷಿಸಲ್ಪಟ್ಟ ಅರಣ್ಯ ಭೂಮಿಯನ್ನು ಯಾವ ಉದ್ದೇಶಕ್ಕೆ ಮೀಸಲಿಡಲಾಗಿದೆ ? (ಸರ್ವೆ ನಂ. ಸಹಿತ ವಿವರ ನೀಡುವುದು)

## ಕುಸುಮ್ ಸಿ ಯೋಜನೆ ಅನುಷ್ಠಾನ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೭ (೬೬೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಎಸ್ಕಾಂ ವ್ಯಾಪ್ತಿಯಲ್ಲಿ ರೈತರು ಅಕ್ರಮವಾಗಿ ಅಳವಡಿಸಿರುವ ಕೃಷಿ ಪಂಪ್‌ಸೆಟ್ ಸಂಪರ್ಕಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕುಸುಮ್ ಸಿ ಯೋಜನೆಯ ಉದ್ದೇಶವೇನು ; ಈ ಯೋಜನೆಯಡಿ ಅಕ್ರಮ ಸಂಪರ್ಕಗಳನ್ನು ಸಕ್ರಮಗೊಳಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಯೋಜನೆಗೆ ಮೀಸಲಿಟ್ಟಿರುವ ಹಣ ಎಷ್ಟು ;

(ಇ) ಈವರೆಗೆ ಎಷ್ಟು ಅಕ್ರಮ ಸಂಪರ್ಕಗಳನ್ನು ಸಕ್ರಮಗೊಳಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ; (ಆಗಿರುವ ಪ್ರಗತಿ ಕುರಿತು ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯಾದ್ಯಂತ ಸೊಸೈಟಿಗಳನ್ನು ರೂಪಿಸಿಕೊಂಡು ಏತ ನೀರಾವರಿ ವ್ಯವಸ್ಥೆಯ ಮೂಲಕ ಕೃಷಿ ಚಟುವಟಿಕೆ ನಡೆಸುತ್ತಿರುವ ರೈತರಿಗೂ

ಸಬ್ಸಿಡಿ ವಿಸ್ತರಿಸುವ ಕುರಿತು ರಾಜ್ಯ ಉಚ್ಚ ನ್ಯಾಯಾಲಯ ನೀಡಿರುವ ಸೂಚನೆ ಏನು ; ಈ ವಿಚಾರದಲ್ಲಿ ಕಾನೂನಿಗೆ ತಿದ್ದುಪಡಿ ತರಲಾಗಿದೆಯೇ ? (ವಿವರ ನೀಡುವುದು)

## ಸಿ.ಆರ್.ಎಸ್. ನಿಧಿ ಉಪಯೋಗಕ್ಕೆ ಇರುವ ಮಾನದಂಡಗಳು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೮ (೬೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷದಿಂದ ಎಸ್ಕಾಂಗಳು, ಕೆ.ಪಿ.ಸಿ.ಎಲ್., ಕೆ.ಪಿ.ಟಿ.ಸಿ.ಎಲ್ ನಿಂದ ಸಿ.ಆರ್.ಎಸ್. ನಿಧಿಗೆ ಎಷ್ಟು ಅನುದಾನವನ್ನು ಮೀಸಲಿಟ್ಟಿದೆ ;

(ಆ) ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗಿದೆ ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಇ) ಈ ಅನುದಾನದ ಮಂಜೂರಾತಿಗೆ ಇರುವ ಮಾನದಂಡಗಳೇನು ? (ವಿವರ ಒದಗಿಸುವುದು)

## ಪ್ರೊಬೇಷನರಿ ಅವಧಿ ಘೋಷಣೆಯಾಗದ ತಜ್ಞವೈದ್ಯರುಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೯ (೮೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮಂಜೂರಾಗಿರುವ ಅಲೋಪತಿ ತಜ್ಞ ವೈದ್ಯರ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ; ಕಳೆದ ೦೪ ವರ್ಷಗಳಲ್ಲಿ ಎಷ್ಟು ಖಾಲಿ ಹುದ್ದೆಗಳನ್ನು ತುಂಬಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಖಾಯಂ ಪೂರ್ವ ಸೇವಾ ಅವಧಿ (ಪ್ರೊಬೇಷನರಿ ಅವಧಿ) ಘೋಷಣೆಯಾಗದೆ ಕಾರ್ಯನಿರ್ವಹಿಸುತ್ತಿರುವ ಅಲೋಪತಿ ತಜ್ಞ ವೈದ್ಯರ ಸಂಖ್ಯೆ ಎಷ್ಟು ; ಆ ತಜ್ಞ ವೈದ್ಯರ ಹೆಸರು ಮತ್ತು ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ವಿವರಗಳೇನು ; ಅವರ ಖಾಯಂ ಪೂರ್ವ ಸೇವಾ ಅವಧಿ (ಪ್ರೊಬೇಷನರಿ ಅವಧಿ) ಘೋಷಣೆಗೆ ಸರ್ಕಾರಕ್ಕೆ ಪ್ರಸ್ತಾವನೆಗಳು ಸ್ವೀಕೃತವಾಗಿವೆಯೇ ; ಪ್ರಸ್ತಾವನೆಗಳು ಸ್ವೀಕೃತವಾಗಿದ್ದಲ್ಲಿ, ಕೇಂದ್ರ ಕಛೇರಿಗೆ ಯಾವ ದಿನಾಂಕದಲ್ಲಿ ಸ್ವೀಕೃತವಾಗಿವೆ ; ಪ್ರಕರಣವಾರು ಮಾಹಿತಿ ನೀಡುವುದು ;

(ಇ) ತಜ್ಞ ವೈದ್ಯರ ಪ್ರೊಬೇಷನರಿ ಅವಧಿ ಘೋಷಣೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿದ್ದರೂ ಕಳೆದ ಒಂದು ವರ್ಷದಿಂದ ಆ ಕಡತಗಳನ್ನು ವಿಲೇವಾರಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಷ್ಟು ವಿಳಂಬಕ್ಕೆ ಕಾರಣಗಳೇನು ಮತ್ತು ಈ ವಿಳಂಬಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಈ ಕಡತಗಳನ್ನು ವಿಲೇವಾರಿ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಅನುಕಂಪದ ಆಧಾರದ ಉದ್ಯೋಗ ನೀಡದಿರುವ ಕುರಿತು

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೦ (೮೧೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆಯಲ್ಲಿರುವಾಗ ಮೃತರಾಗುವ ಅನುದಾನಿತ ನೌಕರರ ಅವಲಂಬಿತರಿಗೆ ಸುಮಾರು ೧೫–೨೦ ವರ್ಷಗಳಿಂದ ಅನುಕಂಪದ ಆಧಾರದ ಉದ್ಯೋಗ ನೀಡದಿರುವುದರಿಂದ ನೂರಾರು ನೌಕರರ

ಕುಟುಂಬಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಾಥಮಿಕ ಶಿಕ್ಷಣ ಇಲಾಖೆ ಅಡಿಯಲ್ಲಿರುವ ಅನುದಾನಿತ ಶಾಲೆಗಳಲ್ಲಿ ಸೇವೆಯಲ್ಲಿರುವಾಗ ಮೃತರಾಗುವ ಅನುದಾನಿತ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಉದ್ಯೋಗ ನೀಡಲಾಗುತ್ತಿದೆಯೇ ; ಈ ರೀತಿ ಒಂದು ಇಲಾಖೆಯ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ನೇಮಕಾತಿ ನೀಡಿ ಮತ್ತೊಂದು ಇಲಾಖೆಯಲ್ಲಿ ನಿರಾಕರಿಸುವುದು ಸಂವಿಧಾನದ ಹಕ್ಕುಗಳ ಉಲ್ಲಂಘನೆಯಲ್ಲವೇ ;

(ಇ) ಯಾವ ಕಾಲಮಿತಿಯೊಳಗೆ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಅನುಕಂಪದ ನೇಮಕಾತಿಗೆ ಅವಕಾಶ ಕಲ್ಪಿಸಲಾಗುವುದು ? (ಮಾಹಿತಿ ನೀಡುವುದು)

## ಶಾಲೆ ಬಿಡುವ/ವಿದ್ಯಾಭ್ಯಾಸ ಮೊಟಕುಗೊಳಿಸುವ ಮಕ್ಕಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪೧ (೮೧೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಶಾಲೆ ಬಿಡುವ/ವಿದ್ಯಾಭ್ಯಾಸ ಮೊಟಕುಗೊಳಿಸುವ ಮಕ್ಕಳ ಸಂಖ್ಯೆಯು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮಕ್ಕಳು ಶಾಲೆ ಬಿಡಲು ಕಾರಣಗಳನ್ನು ಗುರುತಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಶಾಲೆ ಬಿಡುವ ಮಕ್ಕಳನ್ನು ಪುನ: ಶಾಲೆಗೆ ಕರೆತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ವನ್ಯ ಜೀವಿ ಸಂಘರ್ಷದ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೨ (೬೬೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವನ್ಯ ಜೀವಿ ಸಂಘರ್ಷದ ಸಂತ್ರಸ್ತರ ಮನವಿಗಳನ್ನು ಸ್ವೀಕರಿಸಿ ಸರ್ಕಾರಕ್ಕೆ ಸಲ್ಲಿಸಲು ಸರ್ಕಾರದ ವತಿಯಿಂದ ಯಾವ ಯಾವ ಸೇವಾ ಸಂಸ್ಥೆಗಳನ್ನು ಗುರುತಿಸಲಾಗಿದೆ ; ಅವುಗಳ ಕೆಲಸಗಳೇನು ; ಸಂತ್ರಸ್ತರ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಲು ಮಧ್ಯವರ್ತಿಗಳ ಅವಶ್ಯಕತೆ ಇದೆಯೇ ; ರಾಜ್ಯದಲ್ಲಿ ಎಷ್ಟು ಸ್ವಯಂಸೇವಾ ಸಂಸ್ಥೆಗಳು ಅರಣ್ಯ ವಾಸಿಗಳು ಹಾಗೂ ಪ್ರಾಣಿಗಳ ಉಳಿವಿಗಾಗಿ ಕೆಲಸ ಮಾಡುತ್ತಿವೆ ; (ಹೆಸರಿನೊಂದಿಗೆ ವಿವರ ನೀಡುವುದು)

(ಆ) ಸ್ವಯಂ ಸೇವಾ ಸಂಸ್ಥೆಗಳು ಸಂರಕ್ಷಿತ ಅರಣ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆಯೇ ; ಇಲ್ಲವಾದಲ್ಲಿ, ಅಕ್ರಮವಾಗಿ ಅರಣ್ಯದಲ್ಲಿ ತನ್ನ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಾಗರಹೊಳೆ ಮತ್ತು ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳು ಸೇವೆಯ ಹೆಸರಿನಲ್ಲಿ ಅರಣ್ಯ ಸಂಪತ್ತನ್ನು ಲೂಟಿ ಹೊಡೆಯುವುದಿಲ್ಲ ಅಥವಾ ವನ್ಯಜೀವಿಗಳ ಬೇಟೆ ಮಾಡುತ್ತಿಲ್ಲ ಎಂಬುದಾಗಿ ಸರ್ಕಾರ ರಾಜ್ಯದ ಜನತೆಗೆ ಖಾತರಿ ನೀಡುತ್ತಿದೆಯೇ ; ಇಲ್ಲವಾದಲ್ಲಿ, ಅಂತಹ ಸ್ವಯಂ ಸೇವಾ ಸಂಸ್ಥೆಗಳನ್ನು ಮೀಸಲು ಅರಣ್ಯದಲ್ಲಿ ಅನಧಿಕೃತವಾಗಿ ಪ್ರವೇಶ ಮಾಡದಂತೆ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ರಾಜ್ಯದ ಅಭಯಾರಣ್ಯಗಳಲ್ಲಿ ಇತ್ತೀಚಿಗಿನ ದಿನಗಳಲ್ಲಿ ಹುಲಿಗಳ ಸಾವಿಗೆ ಯಾರು ಹೊಣೆ ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹುಲಿಗಳು ಸಾವನ್ನಪ್ಪಿವೆ ; ಯಾವ ಕಾರಣದಿಂದ ಮೃತ ಪಟ್ಟಿವೆ ? (ವಿವರ ನೀಡುವುದು)

## ಆರ್.ಟಿ.ಇ. ಶಿಕ್ಷಣದ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೩ (೬೬೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯಿದೆ (ಆರ್‌ಟಿಇ)ಯಡಿ ಖಾಸಗಿ ಶಾಲೆ ಸೇರಿದ್ದ ಬಡ ವಿದ್ಯಾರ್ಥಿಗಳು ಇದೀಗ ೮ನೇ ತರಗತಿ ಮುಗಿಸಿ ಮುಂದೇನು ಭವಿಷ್ಯ ಎಂಬುದು ತಿಳಿಯದೇ ಅತಂತ್ರರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೮ನೇ ತರಗತಿಯನ್ನು ಖಾಸಗಿ ಶಾಲೆಗಳಲ್ಲಿ ಪೂರೈಸಿ ೯ನೇ ತರಗತಿಗೆ ಶುಲ್ಕ ಪಾವತಿಸಲು ಸಾಧ್ಯವಾಗದೇ ಅತಂತ್ರವಾಗುವ ಅರ್.ಟಿ.ಇ. ಬಡ ಮಕ್ಕಳ ವಿದ್ಯಾಭ್ಯಾಸ ಮುಂದುವರೆಸಲು ಸರ್ಕಾರದ ಕ್ರಮಗಳೇನು ;

(ಇ) ಆರ್.ಟಿ.ಇ. ಬಡ ಮಕ್ಕಳಿಗೆ ಕನಿಷ್ಠ ಎಸ್.ಎಸ್.ಎಲ್.ಸಿ.ವರೆಗೆ ಶಿಕ್ಷಣ ದೊರೆಯಲು ಅನುವಾಗುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ೨೦೨೪–೨೫ನೇ ಸಾಲಿನಲ್ಲಿ ರಾಜ್ಯದಲ್ಲಿ ಅರ್.ಟಿ.ಇ. ಅಡಿ ಎಷ್ಟು ಬಡ ಮಕ್ಕಳ ೮ನೇ ತರಗತಿ ಪೂರೈಸಿ ೯ನೇ ತರಗತಿಗೆ ದಾಖಲಾಗಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೪ (೬೬೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಮತ್ತು ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆಯೊಂದಿಗೆ ವಿವರ ನೀಡುವುದು)

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶವಾಗಾರ ಕೊಠಡಿಗಳ ಸಂಖ್ಯೆ ಎಷ್ಟು ; ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಶವಾಗಾರ ಕೊಠಡಿಗಳು ಇದೆ ಮತ್ತು ಮರಣೋತ್ತರ ಪರೀಕ್ಷೆ ಮಾಡಲು ಇರುವ ನಿಬಂಧನೆಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಾಗಲಕೋಟೆ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಳೆದ ೧೨ ತಿಂಗಳಲ್ಲಿ ಆರೂ ಜನರಿಗೂ ಹೆಚ್ಚು ಮರಣೋತ್ತರ ಪರೀಕ್ಷೆಯನ್ನು ಮೈದಾನದಲ್ಲಿಯೇ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅಕ್ರಮ ಪಡಿತರ ಅಕ್ಕಿಯ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೫ (೬೬೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩ರಿಂದ ೨೦೨೫ರವರೆಗೆ ರಾಜ್ಯದಲ್ಲಿ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹ ಮತ್ತು ಮಾರಾಟ ಮಾಡಿರುವ ಎಷ್ಟು

ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಳ್ಳಾರಿ ಜಿಲ್ಲೆಯಲ್ಲಿ ಈವರೆಗೆ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹ ಮತ್ತು ಮಾರಾಟ ಮಾಡಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಪತ್ತೆ ಮಾಡಿದ್ದರೆ ಅಂತಹ ವ್ಯಕ್ತಿಯ ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ೨೦೨೩ರಿಂದ ೨೦೨೫ರವರೆಗೆ ಇಂತಹ ಎಷ್ಟು ಪ್ರಕರಣಗಳಲ್ಲಿ ಎಷ್ಟು ಪ್ರಮಾಣದ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ ?

## ಬೇಳೆಯ ಬೆಲೆಯ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೬ (೬೭೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಳೆಯ ಬೆಲೆ ಮಾರುಕಟ್ಟೆಯಲ್ಲಿ ರೂ. ೧೨೦ ಇದ್ದರೂ ಬಿಸಿಯೂಟಕ್ಕೆ ರೂ. ೭೨.೪೦ಕ್ಕೆ ಯಾವ ಬೇಳೆಯನ್ನು ಖರೀದಿಸಲಾಗುತ್ತಿದೆ ; ಸದರಿ ಬೇಳೆಯ ಗುಣಮಟ್ಟದ ಕುರಿತು ಸರ್ಕಾರದ ನಿಲುವೇನು ;

(ಆ) ಸರ್ಕಾರದ ವತಿಯಿಂದ ಟೆಂಡರ್ ಪಡೆದವರು ಸರಬರಾಜು ಮಾಡುತ್ತಿರುವ ಬೇಳೆಯ ೫೦ ಕೆ.ಜಿ.ಬ್ಯಾಗ್‌ನಲ್ಲಿ ೨೦ ಕೆ.ಜಿ.ಯಷ್ಟು ಕಲ್ಲು ಮಣ್ಣುಗಳೇ ತುಂಬಿರುವ ಬಗ್ಗೆ ಸರ್ಕಾರದ ನಿಲುವೇನು ; ರಾಜ್ಯದ ಬಡ ಶೋಷಿತ, ದಲಿತ ಹೆಣ್ಣು ಮಕ್ಕಳು ಸೇರಿದಂತೆ ಎಲ್ಲಾ ಮಕ್ಕಳಿಗೆ ಕಳಪೆ ಗುಣಮಟ್ಟದ ಬಿಸಿಯೂಟ ನೀಡುತ್ತಿರುವುದರಿಂದ ಆಗುತ್ತಿರುವ ಪರಿಣಾಮಗಳ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಪತ್ರಿಕಾ ಮಾಧ್ಯಮದಲ್ಲಿ ವರದಿಯಾದಂತೆ ಅತೀ ಕಳಪೆ ಗುಣಮಟ್ಟ ಹಾಗೂ ಊಟಕ್ಕೆ ಬಳಸಲು ಸಾಧ್ಯವಾಗದ ಬೇಳೆಯನ್ನು ಬಡ ಮಕ್ಕಳಿಗೆ ಸರ್ಕಾರ ಉಪಹಾರಕ್ಕೆ ನೀಡುತ್ತಿರುವುದು ಎಷ್ಟು ಸರಿ, ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯದ ಪ್ರಾಥಮಿಕ ಶಾಲೆಯಲ್ಲಿ ಸೇವಾನಿರತ ಪದವೀಧರ ಶಿಕ್ಷಕರ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೬೪೭ (೭೧೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಸೇವಾನಿರತ ಪದವೀಧರರ ಶಿಕ್ಷಕರಿಗೆ ಆಗಿರುವ ಅನ್ಯಾಯದ ಕುರಿತು ಪರಿಹಾರ ಒದಗಿಸಲು ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ೦೪–೦೯–೨೦೨೫ರಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಇದುವರೆವಿಗೂ ಪದವೀಧರ ಶಿಕ್ಷಕರ ಸಮಸ್ಯೆ ಬಗೆಹರಿಸದಿರಲು ಕಾರಣಗಳೇನು ;

(ಆ) ೧ರಿಂದ ೭ನೇ ತರಗತಿವರೆಗೆ ನೇಮಕಗೊಂಡಿರುವ ಶಿಕ್ಷಕರಿಗೆ ೧ರಿಂದ ೫ಕ್ಕೆ ಹಿಂಬಡ್ತಿ ನೀಡಿದ್ದು, ಕಾನೂನು ಇಲಾಖೆ ಯಾವುದೇ ನಿಯಮಗಳನ್ನು ಪೂರ್ವಾನ್ವಯಗೊಳಿಸಬಾರದೆಂಬ ಹಾಗೂ ೧ರಿಂದ ೭ಕ್ಕೆ ನೇಮಕಾತಿ ಹೊಂದಿದವರಿಗೆ ೧ರಿಂದ ೫ಕ್ಕೆ ಹಿಂಬಡ್ತಿ ನೀಡಿರುವುದು ಸರಿಯಾದ ಕ್ರಮವಲ್ಲ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪದವೀಧರ ಶಿಕ್ಷಕರಿಗೆ ಆಗಿರುವ ಅನ್ಯಾಯಗಳನ್ನು ಯಾವಾಗ ಸರಿಪಡಿಸಲಾಗುವುದು ?

## ಬೆಂಗಳೂರು ನಗರ ಜಿಲ್ಲೆಯಲ್ಲಿ ಇರುವ ಅರಣ್ಯ ಭೂಮಿಯ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೬೪೮ (೭೧೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಇರುವ ಒಟ್ಟು ಅರಣ್ಯ ಭೂಮಿಯ ವಿಸ್ತೀರ್ಣವೆಷ್ಟು ; ಇದರಲ್ಲಿ ಒತ್ತುವರಿಯಾಗಿರುವ ಭೂಮಿಯ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ನಗರ ಜಿಲ್ಲೆಯಲ್ಲಿ ದಾಖಲಾದ ಅರಣ್ಯ ಒತ್ತುವರಿ ಮತ್ತು ತೆರವುಗೊಳಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಒತ್ತುವರಿದಾರರು ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದಿದ್ದಾರೆ ; ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಅರಣ್ಯ ಭೂಮಿಯ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೬೪೯ (೭೧೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವರ್ಗಾವಣೆ ಪ್ರಕ್ರಿಯೆ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ವರ್ಗಾವಣೆ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗುವುದು ; (ವಿವರವಾದ ಮಾಹಿತಿ ಒದಗಿಸುವುದು)

(ಇ) ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಮಾರಕವಾಗದಂತೆ ಬೇಸಿಗೆ ರಜೆಯ ಅವಧಿಯಲ್ಲಿ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಳಿಸುವ ಯೋಜನೆ ಕುರಿತು ಸರ್ಕಾರ/ಇಲಾಖೆ ಚಿಂತಿಸಲಾಗಿದೆಯೇ ?

## ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ಯೋಜನೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೬೫೦ (೭೧೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಕೈಗೊಳ್ಳಲಾದ ಯೋಜನೆಗಳು ಯಾವುವು ;

(ಆ) ಎಷ್ಟು ಫಲಾನುಭವಿಗಳು ಈ ಯೋಜನೆಗಳ ಲಾಭ ಪಡೆದು ಕೊಂಡಿದ್ದಾರೆ ; (ಜಿಲ್ಲಾವಾರು/ವರ್ಷಾವಾರು ಮಾಹಿತಿ ನೀಡುವುದು)

(ಇ) ನಿರುದ್ಯೋಗಿ ಯುವಕರಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಉದ್ಯೋಗಾವಕಾಶ ಒದಗಿಸಲಾಗಿದೆಯೇ ;

(ಈ) ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ಒದಗಿಸುವುದು)

(ಉ) ಇದುವರೆಗೂ ಎಷ್ಟು ಅನುದಾನ ಬಿಡುಗಡೆಯಾಗಿದೆ ಮತ್ತು ಎಷ್ಟು ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ಖಾಸಗಿ ಸಂಸ್ಥೆಗಳಿಗೆ ಸಮನಾಗಿ ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶಗಳಲ್ಲಿ ಮತ್ತು ಬೋಧನಾ ಗುಣಮಟ್ಟದಲ್ಲಿ ಸುಧಾರಿಸುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೬೫೧ (೭೧೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಸಂಸ್ಥೆಗಳಿಗೆ ಸಮನಾಗಿ ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶಗಳು ಮತ್ತು ಬೋಧನಾ ಗುಣಮಟ್ಟವನ್ನು ಸುಧಾರಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸರ್ಕಾರಿ ಶಾಲಾ ಮೂಲಸೌಕರ್ಯ ಮತ್ತು ಶೈಕ್ಷಣಿಕ ಪ್ರಗತಿಯನ್ನು ಖಾಸಗಿ ಶಾಲೆಗಳಿಗೆ ಸಮಾನವಾಗಿ ತರಲು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾರ್ಗಸೂಚಿಯನ್ನು ರೂಪಿಸಲಾಗಿದೆಯೇ ;

(ಈ) ಅಲ್ಪಸಂಖ್ಯಾತ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳ ದಾಖಲಾತಿ ಸುಧಾರಿಸಲು ಇಲಾಖೆ ವಿಶೇಷ ಕ್ರಮಗಳನ್ನು ಪ್ರಾರಂಭಿಸಿದೆಯೇ ?

## ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ೨೦೦೬ರ ಪೂರ್ವದಲ್ಲಿ ನೇಮಕಗೊಂಡ ನಂತರ ಅನುದಾನಕ್ಕೊಳಪಟ್ಟಿರುವ ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿಗಳಿಗೆ ಓ.ಪಿ.ಎಸ್.ಜಾರಿ ಮಾಡುವ ಬಗ್ಗೆ

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೬೫೨ (೭೫೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ೦೧–೦೪–೨೦೦೬ರ ಪೂರ್ವದಲ್ಲಿ ನಿವೃತ್ತಿಯಿಂದ ತೆರವಾದ ಹುದ್ದೆಗಳಿಗೆ ಸರ್ಕಾರದ ಅನುಮತಿ ಪಡೆದು ೨೦೦೬ರ ನಂತರ ನೇಮಕವಾಗಿರುವ ಶಿಕ್ಷಕರು ಹಾಗೂ ಶಿಕ್ಷಕೇತರರ ಸಂಖ್ಯೆ ಎಷ್ಟು ;

(ಆ) ಈ ರೀತಿ ನೇಮಕಗೊಂಡ ಶಿಕ್ಷಕ ಹಾಗೂ ಶಿಕ್ಷಕೇತರರಿಗೆ ಈಗಾಗಲೇ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಗೊಂಡಿರುವ ಸಿಬ್ಬಂದಿಗೆ ನೀಡಿದಂತೆ ಓ.ಪಿ.ಎಸ್. ಸೌಲಭ್ಯವನ್ನು ಒದಗಿಸುವುದೇ ; ಈ ಕುರಿತು ಸರ್ಕಾರದ ನಿಲುವೇನು ; (ಸ್ಪಷ್ಟಪಡಿಸುವುದು)

(ಇ) ಅತಿಥಿ ಉಪನ್ಯಾಸಕರಿಗೆ ಗೌರವಧನ ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; (ಮಾಹಿತಿ ನೀಡುವುದು)

(ಈ) ಅತಿಥಿ ಉಪನ್ಯಾಸಕರ ಸೇವಾ ಅವಧಿಗೆ ನೇಮಕಾತಿ ಸಂದರ್ಭದಲ್ಲಿ ಅನುಕೂಲವಾಗುವ ದೃಷ್ಟಿಯಿಂದ ಕೃಪಾಂಕ ನೀಡುವ ಪದ್ಧತಿಯು ಜಾರಿಯಲ್ಲಿದೆಯೇ ? (ಮಾಹಿತಿ ಒದಗಿಸುವುದು)

## ಅನುದಾನಿತ ಐಟಿಐ ಕಾಲೇಜುಗಳ ಸಮಸ್ಯೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೬೫೩ (೭೫೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ/ಮರಣ/ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಡಿಸೆಂಬರ್ ೨೦೨೪ರವರೆಗೆ ಖಾಲಿ ಆಗಿರುವ ಅನುದಾನಿತ ಹುದ್ದೆಗಳೆಷ್ಟು ; (ಕಾಲೇಜುವಾರು ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬದೆ ಇರುವುದರಿಂದ ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೧೦ನೇ ಸಾಲಿನಿಂದ ೨೦೨೪ನೇ ಸಾಲಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ; (ವಿವರ ನೀಡುವುದು)

(ಈ) ಅನುದಾನಿತ ಐಟಿಐ ತರಬೇತಿ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಡಿಮೆಯಾಗಿ ಕಾರ್ಯಭಾರದ ಕೊರತೆಯಾದಾಗ

ಅನುದಾನಿತ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸ್ಥಳನಿಯುಕ್ತಿ ನಿಯೋಜನೆಗೊಳಿಸಲಾಗುತ್ತಿದೆಯೇ ;

(ಉ) ಕಾರ್ಯಭಾರದ ಕೊರತೆಯಾಗಿರುವ ನೌಕರರಿಗೆ ವೇತನಕ್ಕೆ ಸಮಸ್ಯೆಯಾಗದಂತೆ ಇತರೆ ಅನುದಾನ ಸಂಸ್ಥೆಗಳಿಗೆ ನಿಯೋಜನೆ ಮಾಡಿ ಕಾರ್ಯಭಾರವನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಅನುದಾನಿತ ತರಬೇತಿ ಕೇಂದ್ರಗಳ ನೌಕರರಿಗೆ ಥಾಮಸ್ ವರದಿ ಯಥವತ್ತಾಗಿ ಜಾರಿಗೆ ತರುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೬೫೪ (೭೫೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ಐಟಿಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಆದೇಶ ಮಾಡಲಾಗಿದೆ ; (ವಿವರ ಮತ್ತು ಆದೇಶ ನೀಡುವುದು)

(ಆ) ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಂತೆ ಇದುವರವಿಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸ್ಸಿನ ಸೇವಾ ನಿಯಮಗಳನ್ನು ರೂಪಿಸದೇ ಇರುವುದರಿಂದ ಸಾವಿರಾರು ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿದ್ದು ; ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತದೆ ; (ವಿವರ ನೀಡುವುದು)

(ಈ) ೨೦೦೬ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯವನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಸದರಿಯವರಿಗೆ ನಿವೃತ್ತಿ ನಂತರ ರಜೆ ನಗದೀಕರಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುತ್ತದೆ ?

## ಶಾಲೆಗಳಲ್ಲಿನ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೫ (೬೪೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಯ ನಿಯಮಗಳು ಮತ್ತು ಪ್ರಕಾರ್ಯಗಳು ಯಾವುವು ;

(ಆ) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳ ರಚನೆಯಲ್ಲಿ ಯಾರಿರಬೇಕು ;

(ಇ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿನ ಎಲ್ಲಾ ಶಾಲೆಗಳು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಯು ಸದಸ್ಯರನ್ನು ಹೊಂದಿವೆಯೇ ;

(ಈ) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಯಲ್ಲಿ ಪೋಷಕರೂ ಸಹ ಸದಸ್ಯರಾಗಿರುವ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿನ ಶಾಲೆಗಳ ವಿವರಗಳೇನು ; (ಪಟ್ಟಿಯನ್ನು ಒದಗಿಸುವುದು)

(ಉ) ಎಷ್ಟು ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಯಲ್ಲಿ ಪೋಷಕರು ಸದಸ್ಯರಾಗಬೇಕಿರುತ್ತದೆ ?

# K.P.T.C.L ಸಂಸ್ಥೆಯಲ್ಲಿ ಅಧಿಕಾರಿಗಳಿಗೆ ನೀಡಲಾದ ಲ್ಯಾಪ್‌ಟಾಪ್‌ಗಳ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೬ (೬೩೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪ನೇ ಸಾಲಿನಲ್ಲಿ ಕೆ.ಪಿ.ಟಿ.ಸಿ.ಎಲ್ ಸಂಸ್ಥೆಯ ಯಾವ ಯಾವ ಅಧಿಕಾರಿಗಳಿಗೆ ಲ್ಯಾಪ್‌ಟಾಪ್‌ನ್ನು ಸಂಸ್ಥೆಯಿಂದ ಒದಗಿಸಲಾಗಿದೆ ; ಮತ್ತು ಅವುಗಳಿಗೆ ನಿಗದಿಪಡಿಸಿದ ಸ್ಪೆಸಿಫಿಕೇಶನ್ ಏನು ; ಇದನ್ನು ನಿಗಧಿಪಡಿಸಿರುವ ತಾಂತ್ರಿಕ ಪರಿಣಿತರು ಯಾರು ; ಈ ಲ್ಯಾಪ್‌ಟಾಪ್‌ಗಳಲ್ಲಿ ನಿಗದಿಪಡಿಸಿದ ಸ್ಪೆಸಿಫಿಕೇಶನ್ ದೃಢೀಕರಿಸಿದ ತಾಂತ್ರಿಕ ಪರಿಣಿತರು ಯಾರು ; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಲ್ಯಾಪ್‌ಟ್ಯಾಪ್‌ಗಳನ್ನು ಯಾರ ಮೂಲಕ, ಯಾವ ಆಧಾರದ ಮೇಲೆ ಎಷ್ಟು ಖರೀದಿ ಮಾಡಲಾಗಿದೆ ; ಈ ಟೆಂಡರ್‌ಗೆ ಸಂಬಂಧಿಸಿದ ಆದೇಶ ಮತ್ತು ಇತರೆ ಪ್ರತಿಗಳನ್ನು ವಿಭಾಗವಾರು ಒದಗಿಸುವುದು ;

(ಇ) ಲ್ಯಾಪ್‌ಟಾಪ್‌ನ ಖರೀದಿ ಬೆಲೆ ಎಷ್ಟು ; ಈ ಖರೀದಿಯಲ್ಲಿ ಲ್ಯಾಪ್‌ಟಾಪ್‌ನೊಂದಿಗೆ ಮೌಸ್ ಮತ್ತು ಲ್ಯಾಪ್‌ಟಾಪ್ ಬ್ಯಾಗ್‌ಗಳನ್ನು ನೀಡಲಾಯಿತೆ ; ಇಲ್ಲವಾದಲ್ಲಿ, ಅವುಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು ; ಇವುಗಳನ್ನು ಲ್ಯಾಪ್‌ಟಾಪ್ ವಿತರಕ ಕಂಪನಿಯವರೆ ನೀಡಿದರೆ ಅಥವಾ ಪ್ರತ್ಯೇಕವಾಗಿ ಖರೀದಿ ಮಾಡಲಾಯಿತೆ ? (ಆದೇಶದ ಪ್ರತಿಯೊಂದಿಗೆ ಮಾಹಿತಿ ಒದಗಿಸುವುದು)

## ಬಳ್ಳಾರಿ, ವಿಜಯನಗರ ಜಿಲ್ಲೆಗಳಲ್ಲಿ ಸಿ.ಎಸ್.ಆರ್. ನಿಧಿಯಲ್ಲಿ ಶಾಲಾ ಕೊಠಡಿ ದುರಸ್ತಿಗೊಳಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೭ (೭೦೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಶಾಲೆಗಳಲ್ಲಿನ ಕೊಠಡಿಗಳ ಕೊರತೆ, ಕಟ್ಟಡದ ಶಿಥಿಲಾವಸ್ಥೆ ಮತ್ತು ದುರಸ್ತಿ ಕಾಮಗಾರಿಗಳನ್ನು ಮಾಡಬೇಕಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ; (ಪ್ರೌಢ ಶಾಲೆ ಮತ್ತು ಪ್ರಾಥಮಿಕ ಶಾಲೆಗಳ ಮಾಹಿತಿಯನ್ನು ತಾಲ್ಲೂಕುವಾರು ಒದಗಿಸುವುದು)

(ಆ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಿ.ಎಸ್.ಆರ್. ನಿಧಿಯಲ್ಲಿ ಅಭಿವೃದ್ಧಿ ಪಡಿಸಿದ ಶಾಲೆಗಳ ಸಂಖ್ಯೆ ಎಷ್ಟು ; (ಶಾಲೆಗಳ ಹೆಸರು, ನಡೆಸಿದ ಕಾಮಗಾರಿ ಮತ್ತು ಅಭಿವೃದ್ಧಿಪಡಿಸಿದ ಕಂಪನಿಗಳ ಮಾಹಿತಿಯನ್ನು ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸದರಿ ಜಿಲ್ಲೆಗಳಲ್ಲಿ ಡಿ.ಎಂ.ಎಫ್ ನಿಧಿ, ಸಿ.ಎಸ್.ಆರ್. ಯೋಜನೆ ಮತ್ತು ಸರ್ಕಾರದ ಅನುದಾನದಲ್ಲಿ ಶಾಲೆಗಳ ಕಟ್ಟಡ ದುರಸ್ತಿ, ನೂತನ ಕಟ್ಟಡ, ಹೊಸ ಕೊಠಡಿಗಳ ಕಾಮಗಾರಿಗಳಿಗಾಗಿ ಮಂಜೂರಾದ ಅನುದಾನ ಎಷ್ಟು ? (ಕೆಲಸವಾರು/ಶಾಲಾವಾರು ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## SCSP / TSP ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನಗಳ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೬೫೮ (೬೨೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಮಹತ್ವಾಕಾಂಕ್ಷೆ ಕಾಯ್ದೆ SCSP/TSP ಅಡಿಯಲ್ಲಿ ಅರಣ್ಯ ಇಲಾಖೆಗೆ ೨೦೨೧-೨೨, ೨೦೨೨-೨೩, ೨೦೨೩-೨೪ ಹಾಗೂ ೨೦೨೪-೨೫ರ ಹಣಕಾಸು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಸದರಿ ಹಣಕಾಸು ವರ್ಷಗಳ ಅವಧಿಗಳಲ್ಲಿ ಅರಣ್ಯ ಇಲಾಖೆಗೆ ಬಿಡುಗಡೆಯಾಗಿರುವ SCSP /TSP ಅನುದಾನಗಳನ್ನು ಯಾವ ಯಾವ ಯೋಜನೆಗಳ ಜಾರಿಗೆ ವ್ಯಯಿಸಲಾಗಿದೆ ;

(ಇ) SCSP/TSP ಕಾಯ್ದೆಯ ಸೆಕ್ಷನ್ ೧೭ರ ಅನ್ವಯ ಅರಣ್ಯ ಇಲಾಖೆಯ ಮೇಲೆ ಉಲ್ಲೇಖಿಸಿರುವ ಹಣಕಾಸು ವರ್ಷಗಳ ಅವಧಿಗಳಲ್ಲಿ ಪರಿಶಿಷ್ಟ ಸಮುದಾಯ ಹಾಗೂ ಸಾಮಾನ್ಯ ಸಮುದಾಯದ ಅಭಿವೃದ್ಧಿ ಅಂತರವನ್ನು ಗುರುತಿಸಿ, ಸಂಬಂಧಿಸಿದ ಸಮುದಾಯ ಅಭಿವೃದ್ಧಿಗೆ ; ಅಭ್ಯಾಸಿಸಿ/ಸಮಾಲೋಚಿಸಿ ತಯಾರಿಸಿರುವ ಅನುದಾನ ವಿನಿಯೋಗಗಳಿಗೆ ಸಂಬಂಧಿಸಿದ ಉಪಯೋಜನೆ ಕಾರ್ಯಯೋಜನೆಗಳ ವಿವರಗಳೇನು ; (ಪ್ರತಿಗಳನ್ನು ಒದಗಿಸುವುದು)

(ಈ) SCSP/TSP ಕಾಯ್ದೆಯ ಸೆಕ್ಷನ್ ೧೫ ಹಾಗೂ ೧೬ರಡಿ ಕಡ್ಡಾಯ ಪಡಿಸಿರುವಂತೆ ಸದರಿ ಅನುದಾನದಡಿ ಬಿಡುಗಡೆಯಾಗಿರುವ ಹಣವನ್ನು ಕೇವಲ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ವ್ಯಕ್ತಿ., ಸದರಿ ಸಮುದಾಯ ವಾಸಿಸುತ್ತಿರುವ ಕಾಲೋನಿ/ಪ್ರದೇಶಗಳ ಅಭಿವೃದ್ಧಿಗೆ ಮಾತ್ರ ಬಳಸಲು ಖಾತ್ರಿಪಡಿಸಲು ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ಸಂಬಂಧಿಸಿದ ದಾಖಲೆ ಒದಗಿಸುವುದು)

## ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸಂಬಂಧಿಸಿದ ಸಿಬ್ಬಂದಿ ನೇಮಕಾತಿಗಳ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೬೫೯ (೭೫೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಆ ಕಾಲೇಜುಗಳಿಗೆ ಸಿಬ್ಬಂದಿ ನೇಮಕಾತಿಗೆ ಸರ್ಕಾರದಿಂದ ಅನುಮೋದನೆಗೊಂಡ (Sanctioned Post) ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ೧೦ ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭಿಸಿದ ಸರ್ಕಾರಿ ಪ್ರಥಮ ದರ್ಜೆ/ಸಂಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಿಗೆ ಯಾವ ಪ್ರಮಾಣದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕ ಮಾಡಲಾಗಿದೆ ;

(ಇ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿನ ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ ಸಕಾಲಕ್ಕೆ ಪ್ರಾಧ್ಯಾಪಕರ ನೇಮಕಾತಿ ಆಗುತ್ತಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು ?

## ಕಾಲೇಜು ಶಿಕ್ಷಣ ಇಲಾಖೆಯ ಬೋಧಕರನ್ನು ಕೇಂದ್ರ ಕಛೇರಿಗೆ, ಉನ್ನತ ಶಿಕ್ಷಣ ಪರಿಷತ್ತು ಮತ್ತು ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ನಿಯೋಜನೆ ಮೇರೆಗೆ ಬೋಧಕೇತರ ಹುದ್ದೆಗಳಲ್ಲಿ ಮುಂದುವರೆಸುತ್ತಿರುವ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೬೬೦ (೭೫೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಅಥವಾ ಆಡಳಿತಾತ್ಮಕ ಕಛೇರಿಗಳಲ್ಲಿ ನಿಯೋಜನೆ ಮೇಲೆ ಕೆಲಸ ಮಾಡುತ್ತಿರುವ ಕಾಲೇಜು ಪ್ರಾಧ್ಯಾಪಕರುಗಳ ಒಟ್ಟು ಸಂಖ್ಯೆ ಎಷ್ಟು ; ಈ ಪ್ರಾಧ್ಯಾಪಕರುಗಳನ್ನು ಯಾವ ಮಾನದಂಡದ ಆಧಾರದ ಮೇಲೆ ಕಛೇರಿ ಕೆಲಸಕ್ಕೆ ನಿಯೋಜಿಸಲಾಗಿದೆ ; ಇವರಿಗೆ ಯು.ಜಿ.ಸಿ. ವೇತನವೋ ಅಥವಾ ರಾಜ್ಯ ಸರ್ಕಾರದ ವೇತನವೋ ಎಂಬುದರ ಬಗ್ಗೆ ವಿವರ ನೀಡುವುದು ;

(ಆ) ಕಾಲೇಜು ಕಲಿಕಾ ನಿರ್ವಹಣೆ (ಎಲ್‌ಎಮ್‌ಎಸ್) ವ್ಯವಸ್ಥೆಗೆ ಕಾಲೇಜು ಶಿಕ್ಷಣ ಇಲಾಖೆಯಿಂದ ಬಿಡುಗಡೆಯಾದ ಹಣ ಎಷ್ಟು ಹಾಗೂ ಕಾಲೇಜು ಕಲಿಕಾ ನಿರ್ವಹಣೆ (ಎಲ್‌ಎಮ್‌ಎಸ್) ವ್ಯವಸ್ಥೆಗೆ ಬೇಕಾದ ಪರಿಕರ ಮತ್ತು ಅನುಕೂಲಗಳನ್ನು ಈ ಕಾಲೇಜುಗಳಿಗೆ ಕಲ್ಪಿಸಲಾಗಿದೆಯೇ ?

## ವಿದ್ಯುತ್ ದರ ಪರಿಷ್ಕರಣೆ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೧ (೬೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಎಷ್ಟು ಬಾರಿ ವಿದ್ಯುತ್ ದರ ಪರಿಷ್ಕರಣೆ ಮಾಡಲಾಗಿದೆ ;

(ಆ) ಪ್ರಸ್ತುತ ದರ ಪ್ರತಿ ಯೂನಿಟ್‌ಗೆ ಎಷ್ಟು ; (ವಾಣಿಜ್ಯ ಮತ್ತು ಗೃಹ ಬಳಕೆ ದರಗಳು ಪ್ರತ್ಯೇಕವಾಗಿ ನೀಡುವುದು)

(ಇ) ಗೃಹಜ್ಯೋತಿ ಯೋಜನೆಯಲ್ಲಿ ೨೦೦ ಯೂನಿಟ್ ಉಚಿತ ವಿದ್ಯುತ್ ಎಂದು ಘೋಷಣೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಉಚಿತ ವಿದ್ಯುತ್ ಯಾವ ಮಾನದಂಡದಲ್ಲಿ ಎಷ್ಟು ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ೨೦೦ ಯುನಿಟ್‌ಗಿಂತಲೂ ಹೆಚ್ಚು ವಿದ್ಯುತ್ ಬಳಸಿದ ಗ್ರಾಹಕರಿಗೆ ಈ ಹಿಂದೆ ಬಳಸಲಾದ ಎಲ್ಲಾ ಯೂನಿಟ್‌ಗೂ ಬಿಲ್ಲು ಬರುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಇದ್ದಲ್ಲಿ, ಇದನ್ನು ಪರಿಷ್ಕರಿಸಿ ೨೦೦ ಯೂನಿಟ್‌ವರೆಗೆ ಉಚಿತ ವಿದ್ಯುತ್ ಕೊಟ್ಟು ನಂತರ ಬಳಸಿದ ಯೂನಿಟ್‌ಗಳಿಗೆ ದರ ವಿಧಿಸಿದರೆ ಯೋಜನೆಯ ಉದ್ದೇಶ ಈಡೇರಿದಂತಾಗುವುದರಿಂದ ಈ ಬಗ್ಗೆ ಸರ್ಕಾರದ ನಿಲುವೇನು ?

## ೪ ಹುಲಿಗಳಿಗೆ ವಿಷ ಹಾಕಿ ಸಾಯಿಸಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೨ (೬೯೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಬಿ.ಆರ್.ಹಿಲ್ಸ್ ಹುಲಿ ಅಭಯಾರಣ್ಯದಲ್ಲಿ ೪ ಹುಲಿಗಳಿಗೆ ವಿಷ ಹಾಕಿ ಸಾಯಿಸಿರುವ ಪ್ರಕರಣದ ತನಿಖೆ ಯಾವ ಹಂತದಲ್ಲಿದೆ ; ಮತ್ತು ಅಪರಾಧಿಗಳ ಗುರುತು ಪತ್ತೆಹಚ್ಚಲಾಗಿದೆಯೇ ; ಹಾಗಿದ್ದಲ್ಲಿ, ಅವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಅಭಯಾರಣ್ಯದಲ್ಲಿ ಪ್ರಾಣಿಗಳ ಸುರಕ್ಷತೆಗೆ ಈಗಿರುವ ಕಾನೂನನ್ನು ಇನ್ನಷ್ಟು ಬಿಗಿಗೊಳಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಇ) ಇಲ್ಲವಾದಲ್ಲಿ, ಮಾಫಿಯಾಗಳು ಹಣದಾಸೆಗೆ ಅಕ್ರಮ ಕಳ್ಳಸಾಗಾಣಿಕೆ ಮಾಡಿ ಅಮೂಲ್ಯ ಪ್ರಾಣಿ ಸಂಕುಲ ಹಾಗೂ ಅರಣ್ಯ ಸಂಪತ್ತು ನಾಶ ಮಾಡುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಈ ಕುರಿತು ಸರ್ಕಾರದ ಮಟ್ಟದಲ್ಲಿ ನಡೆದಿರುವ ಪ್ರಯತ್ನಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕಾಡು ಹಂದಿಯ ಕಾಟದಿಂದ ರೈತರು ಬೆಳೆ ಹಾನಿಗೊಳಗಾಗಿ ತುಂಬಾ ಕಷ್ಟದಲ್ಲಿ

ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಅಂತಹ ಎಷ್ಟು ದೂರುಗಳು ಬಂದಿವೆ ಮತ್ತು ಎಷ್ಟು ದೂರುಗಳನ್ನು ವಿಲೇವಾರಿ ಮಾಡಲಾಗಿದೆ ;

(ಉ) ಅಂತಹ ರೈತರ ಕುಟುಂಬಗಳಿಗೆ ಸರ್ಕಾರದಿಂದ ನೀಡಲಾದ ಪರಿಹಾರವೇನು ? (ಕಳೆದ ೧೦ ವರ್ಷಗಳ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

## ಫಲಿತಾಂಶ ಕುಸಿತವಾಗಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೩ (೯೯೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆ ಶೈಕ್ಷಣಿಕವಾಗಿ ಹಿಂದೆ ಉಳಿದಿದ್ದು, ಸತತವಾಗಿ ಫಲಿತಾಂಶ ಕುಸಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಫಲಿತಾಂಶ ಹೆಚ್ಚಿಸಲು ಸರ್ಕಾರ ಕೈಗೊಂಡ ಯೋಜನೆಗಳು ಮತ್ತು ಕಾರ್ಯಕ್ರಮಗಳು ಯಾವುವು ; (ವಿವರ ನೀಡುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಪ್ರಾರಂಭಿಸದಿರಲು ಕಾರಣವೇನು ;

(ಈ) ಸದರಿ ಹೊಸ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಪ್ರಾರಂಭಿಸುವುದರಿಂದ ಕಾರ್ಯ ವ್ಯಾಪ್ತಿ ಕಡಿಮೆಯಾಗಿ ಅದರಿಂದ ವೀಕ್ಷಣೆ ಮತ್ತು ಪರಿಶೀಲನೆ ಕಾರ್ಯ ಸುಗಮವಾಗಿ ಆ ಮುಖಾಂತವಾಗಿ ಫಲಿತಾಂಶ ಹೆಚ್ಚಳಕ್ಕೆ ಕೈಗೊಂಡ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವುದು ಸುಲಭವಾಗುವುದಿಲ್ಲವೇ ;

(ಉ) ಕಲಬುರಗಿ ಜಿಲ್ಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳನ್ನು ಸ್ಥಾಪಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಊ) ಕಲ್ಯಾಣ ಕರ್ನಾಟಕದಲ್ಲಿ ನೂತವಾಗಿ ತಾಲ್ಲೂಕುಗಳು ರಚನೆಯಾಗಿದ್ದು, ಆ ತಾಲ್ಲೂಕಿನಲ್ಲಿ ಎಷ್ಟು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆ ?

## ವೃಂದ ಮತ್ತು ನೇಮಕಾತಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೪ (೭೦೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ೧೯೬೭ ರಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಪ್ರಕ್ರಿಯೆ ೨೦೧೮ ರಿಂದ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಪ್ರಕ್ರಿಯೆ ಪ್ರಾರಂಭವಾಗಿ ಸುಮಾರು ೬ ವರ್ಷಗಳು ಕಳೆದಾಗ್ಯೂ ಸಹ ಪೂರ್ಣಗೊಳಿಸದೇ ಇರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಇದನ್ನು ಅಂತಿಮಗೊಳಿಸಲು ಇನ್ನೆಷ್ಟು ವರ್ಷಗಳು ಬೇಕಾಗಬಹುದು ; (೨೦೧೮ ರಿಂದ ಇಲ್ಲಿಯವರೆಗೆ ಈ ವಿಷಯದ ಕುರಿತು ಆಯುಕ್ತರು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಮಾನ್ಯ ಸಚಿವರ ಅಧ್ಯಕ್ಷತೆಯಲ್ಲಿ ನಡೆದಿರುವ ಎಲ್ಲಾ ಸಭೆಗಳ ನಡವಳಿಗಳ ಪ್ರತಿಗಳನ್ನು ನೀಡುವುದು)

(ಆ) ಶಾಲಾ ಶಿಕ್ಷಣ ಇಲಾಖೆಯಲ್ಲಿ ೨೦೧೫ರಲ್ಲಿ ಮಂಜೂರಾಗಿರುವ ಅಕೌಂಟ್ಸ್ ಅಧೀಕ್ಷಕರು ಮತ್ತು ಅಕೌಂಟ್ಸ್ ಪ್ರಥಮದರ್ಜೆ ಸಹಾಯಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಗೆ ಮಂಜೂರಾಗಿರುವ ಅಕೌಂಟ್ಸ್ ಅಧೀಕ್ಷಕರು ಮತ್ತು ಅಕೌಂಟ್ಸ್ ಪ್ರಥಮದರ್ಜೆ

ಸಹಾಯಕರ ಹುದ್ದೆಗಳು ಎಷ್ಟು ; (ಅವುಗಳ ಮಂಜೂರಾತಿ ಆದೇಶದ ಪ್ರತಿಗಳನ್ನು ನೀಡುವುದು)

(ಇ) ಸದರಿ ಆದೇಶದಲ್ಲಿ ಮೇಲಿನ ಹುದ್ದೆಗಳಿಗೆ ಹುದ್ದೆ ತುಂಬುವ ವಿಧಾನವನ್ನು ನಿಗದಿಪಡಿಸಲಾಗಿದೆಯೇ ; ನಿಗದಿಪಡಿಸಿದ್ದಲ್ಲಿ, ಏನೆಂದು ನಿಗದಿಪಡಿಸಲಾಗಿದೆ ; ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಯಾವ ರೀತಿ ತುಂಬಲಾಗುತ್ತಿದೆ ; (ಮಾಹಿತಿ ನೀಡುವುದು)

(ಈ) ಈ ಹುದ್ದೆಗಳಿಗೆ ಬಡ್ತಿಯನ್ನು ಯಾವ ಇಲಾಖೆಯ ಅಥವಾ ಯಾವ ಸರ್ಕಾರಿ ಆದೇಶಗಳನ್ವಯ ಯಾವ ಆಧಾರದ ಮೇಲೆ ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗುತ್ತಿದೆ ;

(ಉ) ದಿನಾಂಕ : ೩೧.೦೭.೨೦೨೫ರ ಅಂತ್ಯಕ್ಕಿದ್ದಂತೆ ಶಾಲಾ ಶಿಕ್ಷಣ ಇಲಾಖೆಯಲ್ಲಿ ಮಂಜೂರಾಗಿರುವ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯ ಹುದ್ದೆಗಳು ಎಷ್ಟು ; ಆ ಹುದ್ದೆಗಳು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಊ) ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳನ್ನು ಯಾವ ರೀತಿ ತುಂಬಲಾಗಿದೆ ; ಖಾಲಿಯಿರಲು ಕಾರಣಗಳೇನು; ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಎತ್ತಿನ ಹೊಳೆ ಮತ್ತು ಮೇಕೆದಾಟು ಯೋಜನೆಗೆ ಕೇಂದ್ರ ಪರಿಸರ ಇಲಾಖೆಯ ಅನುಮೋದನೆ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೫ (೭೧೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆ ಮತ್ತು ಮೇಕೆದಾಟು ಯೋಜನೆಗೆ ಅರಣ್ಯ ಮತ್ತು ಪರಿಸರ ಮಂಜೂರಾತಿಗೆ ಅನುಮತಿ ಪಡೆಯುವ ವಿಚಾರ ಯಾವ ಹಂತದಲ್ಲಿ ಅನುಮತಿ ಇಲ್ಲದೆ ಎಷ್ಟು ಅರಣ್ಯ ಭೂಮಿ ಈ ಯೋಜನೆಗಳಿಗೆ ಬಳಕೆಯಾಗಿದೆ ; (ಮಾಹಿತಿ ನೀಡುವುದು)

(ಆ) ಎತ್ತಿನಹೊಳೆ ಯೋಜನೆ ಮತ್ತು ಮೇಕೆದಾಟು ಯೋಜನೆ ಜಾರಿಯಾಗಲು ಇರುವ ಅಡ್ಡಿಗಳು ಮತ್ತು ಪಕ್ಕದ ರಾಜ್ಯಗಳ ಆಕ್ಷೇಪಣೆಗಳೇನು ;

(ಇ) ಸದರಿ ಯೋಜನೆಗೆ ಕೇಂದ್ರದ ಪರಿಸರ ಇಲಾಖೆಯ ಅನುಮತಿ ನೀಡುವಂತೆ ಕೋರಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಕೆ.ಎಸ್.ಪಿ.ಸಿ.ಬಿ ಗಳಿಲ್ಲದಿರುವುದರ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೬ (೭೧೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿ ಕೇಂದ್ರಗಳನ್ನು ತೆರೆಯಲು ಬಾಕಿ ಇದೆ ; ಪಿಸಿಬಿ ಕೇಂದ್ರ ತೆರೆಯದಿರಲು ಕಾರಣಗಳೇನು ;

(ಆ) ರಾಜ್ಯದ ಎಷ್ಟು ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿ.ಗಳಿವೆ ; ಹಾಗೂ ಅನೇಕ ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿ.ಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಿ.ಇ.ಟಿ.ಪಿ.ಗಳಿಲ್ಲದಿರುವುದಕ್ಕೆ ಕಾರಣಗಳೇನು ;

(ಇ) ಪ್ರತಿಯೊಂದು ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಇ.ಟಿ.ಪಿಗಳನ್ನು ಸ್ಥಾಪಿಸಲು ಕೆ.ಎಸ್.ಪಿ.ಸಿ.ಬಿ. ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಕೆಲವು ಕೈಗಾರಿಕೆಗಳು ಮಾಲಿನ್ಯಕಾರಕ ತ್ಯಾಜ್ಯಗಳನ್ನು ರಸ್ತೆ ಬದಿ ಮತ್ತು ಹಳ್ಳಗಳಲ್ಲಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಕೆ.ಎಸ್.ಪಿ.ಸಿ.ಬಿ. ಕೈಗೊಂಡಿರುವ ಕ್ರಮಗಳೇನು ?

## ಪ್ರೌಢ ಶಾಲಾ ಶಿಕ್ಷಕರನ್ನು ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡಲು ಆಗುತ್ತಿರುವ ವಿಳಂಬ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೬೭ (೭೭೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೩ ವರ್ಷಗಳಲ್ಲಿ ಎಷ್ಟು ಬಾರಿ ಮತ್ತು ಎಷ್ಟು ಜನ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡಲಾಗಿದೆ ;

(ಆ) ಕಳೆದ ೧೩ ವರ್ಷಗಳಿಂದ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡದೆ ಇರಲು ಕಾರಣವೇನು ; ಈ ವಿಳಂಬದಿಂದಾಗಿ ಸಾಕಷ್ಟು ಶಿಕ್ಷಕರು ಸುದೀರ್ಘ ಸೇವೆ ಮಾಡಿ ಬಡ್ತಿ ಇಲ್ಲದೆ ನಿವೃತ್ತಿ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಕಳೆದ ಅಧಿವೇಶನದಲ್ಲಿನ ಭರವಸೆಯಂತೆ ಸರ್ಕಾರವು ಭರವಸೆ ನೀಡಿ ಶೀಘ್ರವಾಗಿ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಬಡ್ತಿ ಕಾರ್ಯವನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದ್ದು ಆದರೆ ಇಲ್ಲಿಯವರೆಗೂ ಈ ಪ್ರಕ್ರಿಯೆ ಮುಗಿಸದೇ ಇರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ಈ ಸಮಸ್ಯೆಯನ್ನು ಬಗೆಹರಿಸಿ ಬಡ್ತಿಯನ್ನು ನೀಡಲಾಗುವುದು ? (ವಿವರ ನೀಡುವುದು)

## ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸುಗಳನ್ನು ಜಾರಿ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೬೮ (೭೭೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅನುದಾನಿತ ಐಟಿಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸುಗಳ ಜಾರಿಗೆ ಯಾವಾಗ ಆದೇಶ ಮಾಡಲಾಗಿದೆ ; (ವಿವರ ಮತ್ತು ಆದೇಶ ಪ್ರತಿ ನೀಡುವುದು)

(ಆ) ಸದರಿಯವರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸಿನಂತೆ ಇದುವರೆಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದೆ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯ ಶಿಫಾರಸ್ಸಿನಂತೆ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿದ್ದು, ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುವುದು ; (ವಿವರ ನೀಡುವುದು)

(ಈ) ೨೦೦೬ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ-ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯಗಳನ್ನು ನೀಡುವ ಕುರಿತು ಸರ್ಕಾರದ ನಿಲುವೇನು ; ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಸರ್ಕಾರಿ ನೌಕರರ ಆರೋಗ್ಯ ಹಿತದೃಷ್ಟಿಯಿಂದ ರೂಪಿಸಿರುವ "ಸಂಧ್ಯಾ ಕಿರಣ" ಯೋಜನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೬೯ (೭೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ನೌಕರರ ಆರೋಗ್ಯ ಹಿತದೃಷ್ಟಿಯಿಂದ ಸರ್ಕಾರವು ಜಾರಿಗೊಳಿಸಿರುವ "ಸಂಧ್ಯಾ ಕಿರಣ" ಯೋಜನೆಯ ರೂಪುರೇಷೆಗಳು ಯಾವುವು ಮತ್ತು ಫಲಾನುಭವಿಗಳಿಗೆ ಇರುವ ನಿಬಂಧನೆಗಳು ಯಾವುವು ;

(ಆ) ಈ ಯೋಜನೆಗೆ ಒಳಪಡುವ ನೌಕರರ ಸಂಖ್ಯೆ ಎಷ್ಟು; ಈ ಯೋಜನೆಯಡಿಗೆ ನಿವೃತ್ತ ಸರ್ಕಾರಿ ನೌಕರರನ್ನೂ ಕೂಡ ಒಳಪಡಿಸಲಾಗುತ್ತದೆಯೇ ; ಇಲ್ಲದಿದ್ದಲ್ಲಿ, ಕಾರಣ ಸಹಿತ ವಿವರಣೆ ನೀಡುವುದು ;

(ಇ) ಸದರಿ ಯೋಜನೆಯಡಿಗೆ ಒಳಪಡುವ ಮತ್ತು ಒಳಪಡದೆ ಇರುವ ವಿವಿಧ ರೀತಿಯ ಚಿಕಿತ್ಸೆಗಳು ಯಾವುವು ;

(ಈ) ಈ ಯೋಜನೆಯಡಿಯಲ್ಲಿ ಪ್ರತಿ ರೋಗಿಗೆ ನಿಗಧಿಪಡಿಸಿದ ಗರಿಷ್ಠ ವೆಚ್ಚವೆಷ್ಟು; ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ?

## ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಅನುದಾನಿತ /ಅನುದಾನ ರಹಿತ ಶಾಲಾ ಕಾಲೇಜುಗಳ ಮುಖ್ಯ ಶಿಕ್ಷಕರು, /ಶಿಕ್ಷಕರು/ ಉಪನ್ಯಾಸಕರುಗಳ ಮಾಹಿತಿ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೭೦ (೭೭೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಅನುದಾನಿತ, ಅನುದಾನ ರಹಿತ ಶಾಲಾ ಕಾಲೇಜುಗಳ ಮುಖ್ಯ ಶಿಕ್ಷಕರು/ಶಿಕ್ಷಕರು/ ಉಪನ್ಯಾಸಕರುಗಳ ದೂರವಾಣಿ ವಿಳಾಸ ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳಗಳ, ಶಾಲೆಗಳ ಮಾಹಿತಿ ನೀಡುವುದು ? (ಜಿಲ್ಲಾವಾರು ಸಂಪೂರ್ಣ ಮಾಹಿತಿಯ ಸಾಫ್ಟ್ ಹಾಗೂ ಹಾರ್ಡ್ ಕಾಪಿ ನೀಡುವುದು)

## ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು ನಡೆಸದಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೭೧ (೭೭೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯನ್ನು (ಕೆ–ಸೆಟ್) ನಡೆಸದೇ ಇರಲು ಕಾರಣವೇನು ;

(ಆ) ತಾತ್ಕಾಲಿಕ ವೇಳಾಪಟ್ಟಿ ಪ್ರಕಟಗೊಂಡರೂ ನಿಗಧಿಯಂತೆ ಪರೀಕ್ಷೆ ನಡೆಯದೇ ಸಾವಿರಾರು ಅಭ್ಯರ್ಥಿಗಳು ಅತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರವು ವರ್ಷದಲ್ಲಿ ಎರಡು ಬಾರಿ ಅರ್ಹತಾ ಪರೀಕ್ಷೆಯನ್ನು ನಡೆಸುತ್ತಿದ್ದು ಆದರೆ, ರಾಜ್ಯ ಸರ್ಕಾರವು ಸಾವಿರಾರು ಅಭ್ಯರ್ಥಿಗಳ ಹಿತ ದೃಷ್ಟಿಯಿಂದ ವರ್ಷದಲ್ಲಿ ಎರಡು ಬಾರಿ ಕೆ–ಸೆಟ್ ಪರೀಕ್ಷೆಯನ್ನು ನಡೆಸುತ್ತಿರುವ ಬಗ್ಗೆ ಸ್ಪಷ್ಟನೆ ಏನು ;

(ಈ) ೨೦೨೫ನೇ ಸಾಲಿನ ಕೆ–ಸೆಟ್ ಪರೀಕ್ಷೆಯನ್ನು ಯಾವ ಕಾಲಮಿತಿಯಲ್ಲಿ ನಡೆಸಲಾಗುವುದು ? (ಮಾಹಿತಿ ನೀಡುವುದು)

## ಉತ್ತರ ಕನ್ನಡ ಜಿಲ್ಲೆಗೆ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆ ಕುರಿತು

**ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು)** :–

೬೭೨ (೭೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಗೆ ಸುಸಜ್ಜಿತವಾದ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸುವುದರ ಕುರಿತು ನಿರಂತರ ಬೇಡಿಕೆಗಳು ಬರುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಈ ಜಿಲ್ಲೆಯಲ್ಲಿ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸುವ ಕುರಿತು ಸರ್ಕಾರದ ನಿಲುವು ಮತ್ತು ಅನೇಕ ವರ್ಷಗಳಿಂದ ಇದಕ್ಕಾಗಿ ನಿರಂತರ ಹೋರಾಟಗಳು ನಡೆಯುತ್ತಿದ್ದರೂ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿರಲು ಕಾರಣ ಮತ್ತು ತೆಗೆದುಕೊಳ್ಳಲಿರುವ ಮುಂದಿನ ಕ್ರಮಗಳೇನು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೬೭೩ (೭೬೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿನ ಬಹಳಷ್ಟು ಶಾಲೆಗಳಿಗೆ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶಾಲಾ ಕೊಠಡಿಗಳು, ಶೌಚಾಲಯದ ಕೊರತೆ ಮುಂತಾದ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಲೆನಾಡು ಜಿಲ್ಲೆಗಳಲ್ಲಿ ನಿರಂತರ ಮಳೆಯಿಂದ ಜಿಲ್ಲೆಯ ಅನೇಕ ಶಾಲೆಗಳ ಮೇಲ್ಛಾವಣಿ ಸೋರುವಿಕೆ ದುರಸ್ತಿ ಆಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ೦೨ ವರ್ಷದಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಎಷ್ಟು ಶಾಲೆಗಳ ಮೇಲ್ಛಾವಣಿ ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ ಮತ್ತು ಎಷ್ಟು ಶಾಲೆಗಳ ಮೇಲ್ಛಾವಣಿ– ದುರಸ್ತಿ ಕಾರ್ಯ ಆಗಬೇಕಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹುಂಬ್ರಾಪಾನಿ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆಗೆ, ಶೌಚಾಲಯ, ಕುಡಿಯುವ ನೀರು, ಪೀಠೋಪಕರಣ, ಮೈದಾನ, ಮೇಲ್ಛಾವಣಿ, ಅಡಿಗೆ ಕೋಣೆ. ಮುಂತಾದ ಯಾವ ವ್ಯವಸ್ಥೆಯು ಇಲ್ಲದೆ ೨೫ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆದ್ಯತೆಯ ಮೇರೆಗೆ ಈ ಶಾಲೆಯ ಮತ್ತು ನೌಕರರುಗಳ ವ್ಯವಸ್ಥೆಗೆ ಸರ್ಕಾರ ತೆಗೆದುಕೊಳ್ಳುವ ತೀರ್ಮಾನವೇನು ?

## ಮುಂಡಗೋಡು ತಾಲ್ಲೂಕಿನ ಮೈನಳ್ಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವ ಕುರಿತು

**ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೬೭೪ (೭೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ತಾಲ್ಲೂಕಿನ ಮೈನಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಮೈನಳ್ಳಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಬೇಕೆಂದು ಸ್ಥಳೀಯರಿಂದ ನಿರಂತರ ಬೇಡಿಕೆಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅರ್ಜಿಗಳ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳ ಕುರಿತು ವಿವರ ನೀಡುವುದು ;

(ಆ) ಸುತ್ತಮುತ್ತಲಿನ ೧೫ಕ್ಕೂ ಹೆಚ್ಚು ಹಳ್ಳಿಗಳ ಜನರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಇರುವುದರಿಂದ ಮೈನಳ್ಳಿಯಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಇರುವ ಮಾನದಂಡಗಳು ಯಾವುವು ಮತ್ತು ಈ ಕುರಿತು ಸರ್ಕಾರ

ತೆಗೆದುಕೊಳ್ಳುವ ಕ್ರಮಗಳ ಕುರಿತು ವಿವರ ನೀಡುವುದು ?

## ಭೀಮಗಡ ಅಭಯಾರಣ್ಯದ ಗ್ರಾಮಗಳ ಸ್ಥಳಾಂತರ ಬಗ್ಗೆ

**ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೬೭೫ (೭೬೪) ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೀಮಗಡ ಅಭಯಾರಣ್ಯದ ಗ್ರಾಮಗಳನ್ನು ಸ್ಥಳಾಂತರಿಸಿದ ನಂತರ ಗ್ರಾಮ/ಹಾಡಿ/ಮಜಿರೆವಾರು ಗ್ರಾಮಗಳ ಕುಟುಂಬಗಳು ಸಲ್ಲಿಸಿದ ಒಟ್ಟು ಅರ್ಜಿಗಳ, ಅರ್ಹ ಹಾಗೂ ಅನರ್ಹ ಅರ್ಜಿಗಳೆಷ್ಟು; (ಪಟ್ಟಿಯನ್ನು ಒದಗಿಸುವುದು)

(ಆ) ಗ್ರಾಮ/ಹಾಡಿ/ಮಜಿರೆವಾರು ಇಲ್ಲಿಯವರೆಗೆ ಮೊದಲನೇ ಮತ್ತು ಅಂತಿಮ ಹಂತದ ಪರಿಹಾರ ಪಡೆದ ಹಾಗೂ ಪರಿಹಾರ ಪಡೆಯಲು ಬಾಕಿಯಿರುವ ಕುಟುಂಬಗಳ/ಫಲಾನುಭವಿ ಹಾಗೂ ಪ್ರತಿ ಫಲಾನುಭವಿ ಪಡೆದ ಪರಿಹಾರದ ಮೊತ್ತ ಎಷ್ಟು;

(ಇ) ಪರಿಹಾರ ಪಡೆದಿರುವ ಪ್ರತಿ ಫಲಾನುಭವಿಗಳು ಅರಣ್ಯ ಹಾಗೂ ಕಂದಾಯ ಇಲಾಖೆಗಳಿಗೆ ಬರೆದುಕೊಟ್ಟಿರುವ ಮುಚ್ಚಳಿಕೆ ಪತ್ರಗಳು ಹಾಗೂ ಒಡಂಬಡಿಕೆ ಪತ್ರಗಳ ಪ್ರತಿಗಳನ್ನು ಒದಗಿಸುವುದು ;

(ಈ) ವಿವಿಧ ಗ್ರಾಮಗಳ ಸ್ಥಳಾಂತರ ಕುರಿತು ಇಲ್ಲಿಯವರೆಗೆ ಜರುಗಿರುವ ಜಿಲ್ಲಾ ಮಟ್ಟದ ಸಮಿತಿ ಸಭೆಗಳ ಹಾಗೂ ಗ್ರಾಮ ಸಭೆಗಳ ನಡಾವಳಿಗಳ ಪ್ರತಿಗಳನ್ನು ಒದಗಿಸುವುದು ;

(ಉ) ಅರ್ಹ ಫಲಾನುಭವಿಗಳಿಗೆ ಪರಿಹಾರ ನೀಡುವ ಪೂರ್ವದಲ್ಲಿ ಅರಣ್ಯ ಹಕ್ಕು ಕಾಯ್ದೆ, ೨೦೦೬ರ ಸೆಕ್ಷನ್ ೪(೧) ಹಾಗೂ ೪(೨) (ಎ–ಎಫ್) ಅಡಿಯಲ್ಲಿ ನಡೆಸಿರುವ ಕಾನೂನು ಪ್ರಕ್ರಿಯೆಗಳ ದಾಖಲೆಗಳನ್ನು ಒದಗಿಸುವುದು ;

(ಊ) ಖಾನಾಪುರ ತಾಲ್ಲೂಕಿನ ನಾಗರಗಾಳಿ ವಲಯ ಅರಣ್ಯ ವ್ಯಾಪ್ತಿಯಲ್ಲಿ ಬರುವ ಗೌಳಿ ಜನಾಂಗದ ನಾನಾಕೆಸರೊಡಗಾ, ಕೊಶೇಕೊಪ್ಪ ಮತ್ತು ಹುಂಬ್ರಾಪಾನಿ ಗ್ರಾಮದ ಜನರು ಸ್ಥಳಾಂತರಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆಯೇ ; ಸಲ್ಲಿಸಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಋ) ಹೈನುಗಾರಿಕೆಯನ್ನೇ ಮೂಲ ಕಸುಬನ್ನಾಗಿ ಜೀವನ ನಡೆಸುತ್ತಿರುವ ಈ ಹಳ್ಳಿ ಜನರಿಗೆ ಕಾಡಿನಲ್ಲಿ ವನ್ಯ ಜೀವಿಗಳಿಂದ ಜಾನುವಾರುಗಳ ಮತ್ತು ಮಾನವನ ಮೇಲೆ ದಾಳಿಯಾಗುತ್ತಿರುವ ಹಿನ್ನಲೆಯಲ್ಲಿ ಸ್ಥಳಾಂತರಕ್ಕಾಗಿ ಅರ್ಜಿ ಸಲ್ಲಿಸುತ್ತಿದ್ದು, ಕಾಯ್ದಿಟ್ಟ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಈ ಗ್ರಾಮದ ಜನರಿಗೆ ಸ್ಥಳಾಂತರಕ್ಕಾಗಿ ಬಂದಿರುವ ಅರ್ಜಿಗಳ ಕುರಿತು ಸರ್ಕಾರದ ನಿಲುವೇನು ?

## ಮೈಸೂರು ವಿ.ವಿಯಲ್ಲಿ. ಪಿ.ಹೆಚ್.ಡಿ., ಪಡೆದಿರುವವರಿಗೆ ಅರ್ಹತೆ ಸೌಲಭ್ಯ ಒದಗಿಸುವುದರ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೭೬ (೭೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ವಿಶ್ವವಿದ್ಯಾಲಯದಲ್ಲಿ ಪಿ.ಹೆಚ್.ಡಿ. ಸಾಮಾನ್ಯ ಪ್ರವೇಶ ಪರೀಕ್ಷೆ ತೇರ್ಗಡೆಯಾಗಿ ಅರ್ಹತೆ ಪಡೆದ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಡಾಕ್ಟರೇಟ್ ಪದವಿ ಪಡೆಯುವ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವೇನು ;

(ಆ) ಮೈಸೂರು ವಿಶ್ವವಿದ್ಯಾಲಯದಲ್ಲಿ ಖಾಯಂ ಬೋಧಕರ ಕೊರತೆ ಉಂಟಾಗಿ ಸಂಶೋಧನ ಚಟುವಟಿಕೆಗಳಿಗೆ ಹಿನ್ನಡೆಯಾಗುವುದಿಲ್ಲವೆ ; ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಯು.ಜಿ.ಸಿ. ನಿಯಮದಂತೆ ಪಿ.ಹೆಚ್.ಡಿ. ಸಾಮಾನ್ಯ ಪರೀಕ್ಷೆ ಪಾಸಾದವರು ಎಷ್ಟು ವರ್ಷದೊಳಗೆ ಗೈಡ್‌ಗಳನ್ನು ಹುಡುಕಿಕೊಳ್ಳಬೇಕೆಂಬ ನಿಯಮ ಇದೆಯೇ ?

## ರಾಜ್ಯದಲ್ಲಿ ಕಳೆದ ೦೫ ವರ್ಷಗಳಿಂದ ಶಾಲೆಗಳ ಬಗ್ಗೆ ಮಾಹಿತಿ ನೀಡುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೭೭ (೭೯೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೫ ವರ್ಷದಿಂದ ಇಲ್ಲಿಯವರೆಗೂ ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ ; ಹಾಗಿದ್ದಲ್ಲಿ, ಶಾಲೆಗಳನ್ನು ಮುಚ್ಚಲು ಇರುವ ಕಾರಣಗಳೇನು ;

(ಆ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಸರ್ಕಾರಿ ಶಾಲೆಗಳಿವೆ ; ಇವುಗಳಲ್ಲಿ ಎಷ್ಟು ಶಾಲೆಗಳು ತೆರೆದಿವೆ ; ಎಷ್ಟು ಶಾಲೆಗಳು ಮುಚ್ಚಲ್ಪಟ್ಟಿದೆ ಮಾಹಿತಿ ನೀಡುವುದು ;

(ಇ) ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನಿರ್ಧಾರದಿಂದ ವಿದ್ಯಾರ್ಥಿಗಳು, ಹಿಂದುಳಿದ ಕುಟುಂಬಗಳ ಮಕ್ಕಳು ಮತ್ತು ವಿಶೇಷವಾಗಿ ಬಾಲಕಿಯರ ಮೇಲೆ ಪರಿಣಾಮ ಬೀರುವುದಿಲ್ಲವೇ ;

(ಈ) ಈ ಶಾಲೆಗಳನ್ನು ಮುಚ್ಚುವ ಬದಲು ಸರ್ಕಾರವು ಮಕ್ಕಳನ್ನು ಶಾಲೆಯ ಕಡೆ ಕರೆತರಲು, ಶಾಲೆಗಳಿಗೆ ಹೆಚ್ಚು ಅನುದಾನ ನೀಡಿ, ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ಶಾಲೆಗಳನ್ನು ಮುಚ್ಚಿದ್ದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ನಿಯೋಜನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಖಾಸಗಿ ಐ.ಟಿ.ಐ., ತರಬೇತಿ ಕೇಂದ್ರಗಳಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯ ಮಾಹಿತಿ ನೀಡುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೭೮ (೭೯೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಹೆಚ್ಚಳದ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ ವಿವರಗಳೇನು ;

(ಆ) ಸರ್ಕಾರಿ ಮತ್ತು ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ. ಮತ್ತು ಎಸ್.ಟಿ. ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪರಿಕರಗಳನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆಯೇ ; ಇದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿರುವ ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಅಖಿಲ ಭಾರತ ವೃತ್ತಿ ಪರೀಕ್ಷೆಯ (AITT) ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು ಪಾವತಿಸಲು ಸರ್ಕಾರ Online ನಲ್ಲಿ ಅವಕಾಶ ಕಲ್ಪಿಸಿದೆಯೇ ?

## ಕಳೆದ ೦೩ ವರ್ಷಗಳಲ್ಲಿ ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೭೯ (೭೯೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಿಂದ ಇಲ್ಲಿಯುವರೆಗೂ ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥವಾಗಿದೆ; ಎಷ್ಟು ಬಾಕಿ ಉಳಿದಿದೆ;

(ಆ) ಗ್ರಾಹಕರ ನ್ಯಾಯಾಲಯಗಳಿಂದ ಗ್ರಾಹಕರ ಪರವಾಗಿ ಆದೇಶ ಮಾಡಿರುವ ಎಲ್ಲಾ ಪ್ರಕರಣಗಳು ಜಾರಿಯಾಗಿದೆಯೇ;

(ಇ) ಗ್ರಾಹಕರ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ವಿವರವನ್ನು ಒದಗಿಸುವುದು ?

## ರಾಜ್ಯದಲ್ಲಿನ ಆಹಾರ ಸುರಕ್ಷತಾ ಪ್ರಾಧಿಕಾರದ ಸಂಸ್ಥೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೮೦ (೭೯೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಹಾರ ಸುರಕ್ಷತಾ ಪ್ರಾಧಿಕಾರವು ಅಸ್ತಿತ್ವಕ್ಕೆ ಬಂದು ಎಷ್ಟು ವರ್ಷಗಳಾಗಿರುತ್ತದೆ; ಈ ಪ್ರಾಧಿಕಾರ ರಚನೆಯಾಗಲು ಹಾಗೂ ಯಾವ ಉದ್ದೇಶದಿಂದ ಪ್ರಾರಂಭಗೊಂಡಿರುತ್ತದೆ;

(ಆ) ಪ್ರಸ್ತುತ ಈ ಪ್ರಾಧಿಕಾರದಲ್ಲಿ ಎಷ್ಟು ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ; ಇದರಲ್ಲಿ ಖಾಯಂ ನೌಕರರ ಸಂಖ್ಯೆ ಎಷ್ಟು ಹಾಗೂ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವವರ ವಿವರಗಳನ್ನು ಒದಗಿಸುವುದು;

(ಇ) ರಾಜ್ಯದಲ್ಲಿ ಆಹಾರ ಸುರಕ್ಷತಾ ಪ್ರಾಧಿಕಾರ ಎಷ್ಟು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಹಾಗೂ ಕೇಂದ್ರ ಕಛೇರಿ ಎಲ್ಲಿದೆ;

(ಈ) ಪ್ರಾಧಿಕಾರ ಪ್ರಾರಂಭಗೊಂಡ ದಿನದಿಂದಲೂ ಇಲ್ಲಿಯವರೆಗೂ ಒಬ್ಬ ಸಿಬ್ಬಂದಿಯನ್ನು ನೇಮಕ ಮಾಡಿಲ್ಲ ಎಂಬುದು ನಿಜವೇ;

ಹಾಗಿದ್ದಲ್ಲಿ, ಎಷ್ಟು ವರ್ಷಗಳಿಂದ ಎರವಲು ಸೇವೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಮಾಹಿತಿ ನೀಡುವುದು)

## ಯಾದಗಿರಿ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೬೮೧ (೬೨೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಶೈಕ್ಷಣಿಕವಾಗಿ ಕೊನೆಯ ಸ್ಥಾನದಲ್ಲಿದ್ದು, ಇಲ್ಲಿಗೆ ಮಂಜೂರಾದ ಶಿಕ್ಷಕರ ಹುದ್ದೆಗಳಲ್ಲಿ ೨೮೯೨ ಶಿಕ್ಷಕರ (೫೧%) ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈಗಾಗಲೇ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳ ಫಲಿತಾಂಶದಲ್ಲಿ ಪ್ರತಿವರ್ಷ ಕೊನೆಯ ಸ್ಥಾನ ಪಡೆಯುತ್ತಿರುವ ಯಾದಗಿರಿ ಜಿಲ್ಲೆಗೆ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶಿಕ್ಷಕರ ನೇಮಕಾತಿ ಮಾಡದಿರಲು ಕಾರಣಗಳೇನು ;

(ಇ) ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ೫೫೦೦ ಶಿಕ್ಷಕರ ನೇಮಕಾತಿ ಮಾಡಲಾಗುವುದೆಂದು ಸರ್ಕಾರ ಹೇಳಿಕೆ ನೀಡಿ ಒಂದು ವರ್ಷವಾದರೂ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸದಿರಲು ಕಾರಣಗಳೇನು ;

(ಈ) ಶಿಕ್ಷಕರೆ ಶಿಕ್ಷಣಕ್ಕೆ ಆಧಾರವಾಗಿರುವಾಗ ಶಿಕ್ಷಕರ ಕೊರತೆಯಿಂದ ಹಿಂದುಳಿದ ಜಿಲ್ಲೆಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

# ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡ ಗ್ರಾಮದ ೨೩-೩೦ ಎಕರೆ ಜಮೀನಿನಲ್ಲಿ ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಅಡ್ಡಿಪಡಿಸುತ್ತಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೮೨ (೬೨೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಕಲಬುರಗಿ ಜಿಲ್ಲೆ ಸೇಡಂ ತಾಲ್ಲೂಕಿನ ಮಳಖೇಡ ಗ್ರಾಮದಲ್ಲಿ ಸರ್ವೆ ನಂ.೨/೧ ಬಿ ರಲ್ಲಿ ೨೩-೩೦ ಎಕರೆ ಜಮೀನಿನಲ್ಲಿ ಅತಿಕ್ರಮಣ ತಡೆಯಲು ತಡೆಗೋಡೆ ನಿರ್ಮಾಣ ಕಾಮಗಾರಿಗೆ ಅಡ್ಡಿಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಜಮೀನು ಗುಲ್ಬರ್ಗಾ ವಿಶ್ವವಿದ್ಯಾಲಯಕ್ಕೆ ನೀಡಿದ್ದು, ಅಲ್ಲಿ ಅಂತರ್‌ರಾಷ್ಟ್ರೀಯ ಆಹಾರ, ಶಕ್ತಿ ಮತ್ತು ಜಲ ಸಂರಕ್ಷಣೆ ಸಂಸ್ಥೆ ಸ್ಥಾಪಿಸಲು ಟೆಂಡರ್ ಕರೆದಿದ್ದರೂ ಸ್ಥಳೀಯ ವ್ಯಕ್ತಿಯೊಬ್ಬರು ಆ ಕಾಮಗಾರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಸ್ಥಳೀಯ ವ್ಯಕ್ತಿ ಪಹಣಿ ದಾಖಲೆಯಲ್ಲಿ ಹೆಸರಿಲ್ಲದಿದ್ದರೂ ೩ ಎಕರೆ ಜಾಗ ನನ್ನದು ಎಂದು ತಡೆಗೋಡೆ ನಿರ್ಮಾಣಕ್ಕೆ ಅಡ್ಡಿಪಡಿಸುತ್ತಿರುವುದನ್ನು ತಡೆದು ಸಂಸ್ಥೆ ಸ್ಥಾಪಿಸಲು ಸರ್ಕಾರ ಅನುವು ಮಾಡಿಕೊಡುವುದೇ ;

(ಈ) ಗುಲ್ಬರ್ಗಾ ವಿಶ್ವವಿದ್ಯಾಲಯ ಸಂಶೋಧನೆ ಮತ್ತು ಸಾರ್ವಜನಿಕ ಉಪಯೋಗಕ್ಕೆ ಸಂಸ್ಥೆಯನ್ನು ಸ್ಥಾಪಿಸಲು ಸರ್ಕಾರ ನೀಡಿದ ಜಮೀನನ್ನು ತನ್ನದೆಂದು ಎಲ್ಲಾ ಕಾಮಗಾರಿಗಳನ್ನು ತಡೆದವರ ವಿರುದ್ಧ ಕ್ರಮ ಕೈಗೊಂಡು ಸಮಸ್ಯೆ ಪರಿಹರಿಸಲು ಸರ್ಕಾರ ಪ್ರಯತ್ನಿಸುವುದೆ ?

# ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಪ್ರಾಚಾರ್ಯರಾಗಿ ಮುಂಬಡ್ತಿ ನೀಡುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೮೩ (೬೨೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಇಲಾಖೆಯ ನಿರ್ದೇಶಕರು ದಿನಾಂಕ: ೮ ಡಿಸೆಂಬರ್, ೨೦೨೩ ರಂದು ಹೊರಡಿಸಿದ ಅಧಿಸೂಚನೆಗನುಸಾರವಾಗಿ ४೦೦ ಉಪನ್ಯಾಸಕರ ರಹಸ್ಯ ವರದಿಗಳನ್ನು ತರಿಸಿಕೊಂಡು ೮೦ ಉಪನ್ಯಾಸಕರನ್ನು ಹೊರಗಿಟ್ಟು ೨೮೭ ಉಪನ್ಯಾಸಕರಿಗೆ ಪ್ರಾಚಾರ್ಯರಾಗಿ ಮುಂಬಡ್ತಿ ಆದೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ೮೦ ಉಪನ್ಯಾಸಕರು ಅರ್ಹತೆ ಹೊಂದಿದ್ದರೂ ಪ್ರಾಚಾರ್ಯರಾಗಿ ಮುಂಬಡ್ತಿ ನೀಡದಿರಲು ಕಾರಣಗಳೇನು ;

(ಇ) ನಿರಂತರವಾಗಿ ಸುಮಾರು ೨೮ ವರ್ಷಗಳಿಂದ ಯಾವುದೇ ಮುಂಬಡ್ತಿ ಇಲ್ಲದೆ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಮುಂಬಡ್ತಿ ನೀಡದಿರಲು ಕಾರಣವೇನು ;

(ಈ) ३೦೨ ಪ್ರಾಚಾರ್ಯ ಹುದ್ದೆಗಳಿಗೆ ಆರ್ಥಿಕ ಇಲಾಖೆಯಿಂದ ಅನುಮತಿ ಪಡೆದು ೨೨೧ ಹುದ್ದೆಗಳಿಗೆ (೬೬ ಉಪನ್ಯಾಸಕರು ಬಡ್ತಿ ಮುಂದೂಡಿಕೆ/ಪೋಗರ್ೂ ಮಾಡಿದ್ದಾರೆ) ಬಡ್ತಿ ನೀಡಲಾಗಿದ್ದು, ಇನ್ನುಳಿದವರಿಗೆ ಮುಂಬಡ್ತಿ ನೀಡಲು ಅವಕಾಶ ಮಾಡಿಕೊಡಲಾಗುವುದೇ ;

(ಉ) ಈಗಾಗಲೇ ೮೦ ಉಪನ್ಯಾಸಕರ ರಹಸ್ಯ ವರದಿಗಳು ಇಲಾಖೆ ತರಿಸಿಕೊಂಡಿದ್ದು, ತಕ್ಷಣವೇ ಅವರಿಗೆ ಇಲಾಖಾ ಬಡ್ತಿ ಸಮಿತಿಯನ್ವಯ ಮುಂಬಡ್ತಿ ನೀಡಲು ಕ್ರಮ ಕೈಗೊಳ್ಳುವುದೇ ?

# ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲ್ಲೂಕಿನ ಗೋಟಗೋಡಿ ಗ್ರಾಮದಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರ ವೇತನ ತಾರತಮ್ಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೬೮೪ (೬೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಗೋಟಗೋಡಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ತಾತ್ಕಾಲಿಕ ಸಹಾಯಕ ಪ್ರಾಧ್ಯಾಪಕರು/ಅತಿಥಿ ಉಪನ್ಯಾಸಕರು ವೇತನ ತಾರತಮ್ಯ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಧಾರವಾಡ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ವರ್ಷದಲ್ಲಿ ೧೦–೧೧ ತಿಂಗಳ ಕಾರ್ಯಭಾರ ನೀಡಿದರೆ ಜಾನಪದ ವಿಶ್ವವಿದ್ಯಾಲಯದಲ್ಲಿ ಕೇವಲ ವರ್ಷದಲ್ಲಿ ೦೭ ತಿಂಗಳ ಕಾರ್ಯಭಾರ ನೀಡುತ್ತಿರುವುದು ನಿಜವೆ ;

(ಇ) ಬೇರೆ ವಿಶ್ವವಿದ್ಯಾಲಯಗಳಲ್ಲಿ ರೂ.೩೫–೫೦ ಸಾವಿರದವರೆಗೆ ಪ್ರತಿ ತಿಂಗಳು ವೇತನ ನೀಡುತ್ತಿದ್ದರೆ ಜಾನಪದ ವಿಶ್ವವಿದ್ಯಾಲಯದಲ್ಲಿ ೧೦ ವರ್ಷದಿಂದ ಕೇವಲ ರೂ.೨೫ ಸಾವಿರ ಪ್ರತಿ ತಿಂಗಳು ವೇತನ ನೀಡುತ್ತಿರುವುದು ತಾರತಮ್ಯ ಮಾಡಿದಂತಾಗುವುದಿಲ್ಲವೆ ;

(ಈ) ಜಾನಪದ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ನೇಮಕಾತಿ ಮಾಡಿಕೊಳ್ಳುವುದಿಲ್ಲ ಮತ್ತು ಆದೇಶ ಪತ್ರ ನೀಡದಿರುವುದು ಯಾವ ಕಾರಣಕ್ಕೆ ;

(ಉ) ಸರ್ಕಾರದ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳು ಸಮಾನವಾದ ವಿದ್ಯಾರ್ಹತೆ ಹೊಂದಿದ್ದರೂ. ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಜಾನಪದ ಕಾರ್ಯಭಾರ/ವೇತನ ತಾರತಮ್ಯ

ಅನುಸರಿಸುತ್ತಿರುವುದು ವಿದ್ಯಾವಂತ ಶಿಕ್ಷಕರಿಗೆ ಆಗುತ್ತಿರುವ ಅನ್ಯಾಯುವನ್ನು ತಡೆಯುಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ?

## ವಿಶ್ವವಿದ್ಯಾಲಯಗಳು ಸ್ಥಳೀಯ ಪರೀಕ್ಷಣಾ ಸಮಿತಿಗೆ (ಎಲ್‌ಐಸಿ) ಸಿಂಡಿಕೇಟ್ ಸದಸ್ಯರ ನೇಮಕ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೮೫ (೬೨೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯಿದೆ ೨೦೦೦ ರ ಪ್ರಕಾರ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರೀಕ್ಷಣಾ ಸಮಿತಿಗೆ (ಎಲ್‌ಐಸಿ) ನೇಮಕ ಮಾಡಲು ಅವಕಾಶವಿದೆಯೇ ;

(ಆ) ಸಂಪೂರ್ಣವಾಗಿ ಶೈಕ್ಷಣಿಕ ಹಿನ್ನಲೆ ಇಲ್ಲದಿದ್ದರೂ ವಿಶ್ವವಿದ್ಯಾಲಯಗಳು ಒತ್ತಡಕ್ಕೆ ಮಣಿದು ಸಿಂಡಿಕೇಟ್ ಸದಸ್ಯರನ್ನು ಎಲ್‌ಐಸಿಯ ಅಧ್ಯಕ್ಷರನ್ನಾಗಿ ಮತ್ತು ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಮಾಡುವುದು ಸರಿಯಾದ ಕ್ರಮವೆ ;

(ಇ) ಸಿಂಡಿಕೇಟ್ ಸದಸ್ಯರ ಅಧ್ಯಕ್ಷತೆಯಲ್ಲಿ ಎಲ್‌ಐಸಿ ಯ ಸಮಿತಿಗಳು ಸಂಯೋಜಿತ ಕಾಲೇಜುಗಳಿಗೆ ಭೇಟಿ ನೀಡಿದಾಗ ಕೇಳಿ ಬರುತ್ತಿರುವ ಅವ್ಯವಹಾರಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಿಂಡಿಕೇಟ್ ಸದಸ್ಯರು ಸಮಿತಿಯಲ್ಲಿರುವುದರಿಂದ ಸರ್ಕಾರದ ಮತ್ತು ವಿಶ್ವವಿದ್ಯಾಲಯಗಳ ಮಾನದಂಡಗಳನ್ನು ಬಳಸಿ ಕಾಲೇಜುಗಳ ಮೌಲ್ಯಮಾಪನ ಸರಿಯಾಗಿ ನಡೆಯುತ್ತಿಲ್ಲಾ ಎಂಬ ಆರೋಪವಾಗಿದ್ದು, ಇದನ್ನು ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಹೊಸ ವಿದ್ಯುತ್ ಸಂಪರ್ಕ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೮೬ (೬೩೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೆವಿನ್ಯೂ ಭೂಮಿಯಲ್ಲಿ ಎ ಖಾತಾ ಬಿ ಖಾತಾ ಹೊಂದಿರದ ಸೈಟು ಮಾಲೀಕರಿಗೆ ಹೊಸದಾಗಿ ಮನೆ ಕಟ್ಟಿಕೊಳ್ಳಲು ಸರ್ಕಾರ ವಿದ್ಯುತ್ ಸಂಪರ್ಕ ನೀಡಲು ನಿರಾಕರಿಸುತ್ತಿರುವುದು ನಿಜವೆ ; ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ವಿದ್ಯುತ್ ಸಂಪರ್ಕಕ್ಕೆ ಹೆಚ್ಚಿನ ಮೊತ್ತ ಕಟ್ಟಬೇಕೆಂಬ ನಿಯಮ ಯಾವಾಗಿನಿಂದ ಜಾರಿಗೆ ಬಂದಿದೆ ; ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ ಇದನ್ನು ಮರುಪರಿಶೀಲನೆ ಮಾಡುವುದೆ ?

## ರಾಜ್ಯದ ನಿರುದ್ಯೋಗಿ ಪದವೀಧರರ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)** :–

೬೮೭ (೬೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ವಿವಿಧ ಕಾಲೇಜುಗಳಲ್ಲಿ ಪದವಿ ಮುಗಿಸಿ ಹೊರ ಬರುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅವರುಗಳು ಸ್ವಾವಲಂಬಿ ಬದುಕು ನಡೆಸಲು ಆಯಾ ಪದವಿಯ ಅಂತಿಮ ವರ್ಷದಲ್ಲಿ ಅವರಿಗೆ ಮುಂದಿನ ಯೋಜನೆಯ ಕಾರ್ಯಕ್ರಮ ರೂಪಿಸಲು ಸರ್ಕಾರ ಮುಂದಾಗುವುದೆ ;

(ಇ) ರಾಜ್ಯದಲ್ಲಿ ನಿರುದ್ಯೋಗಿ ಪದವೀಧರರನ್ನು ಈ ಮಾನವ ಸಂಪನ್ಮೂಲವನ್ನು ಸದ್ಬಳಕೆ ಮಾಡಿಕೊಳ್ಳಲು ಸರ್ಕಾರದ ಮುಂದಿರುವ ಯೋಜನೆಗಳೇನು ?

## ಕಲಬೆರೆಕೆ ಆಹಾರದ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೮ (೬೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅದರಲ್ಲೂ ಮುಖ್ಯವಾಗಿ ನಗರ ಪ್ರದೇಶದಲ್ಲಿ ಮನುಷ್ಯರು ಸೇವಿಸುವ ತಿಂಡಿ–ತಿನಿಸುಗಳಲ್ಲಿ ಟೇಸ್ಟಿಂಗ್ ಪೌಡರ್, ರಾಸಾಯನಿಕಯುಕ್ತ ಬಣ್ಣ, ಕುಕ್ಕಿಂಗ್ ಸೋಡ ಈ ರೀತಿಯ ಮನುಷ್ಯರ ಆರೋಗ್ಯದ ಮೇಲೆ ಭಯಾನಕ ಪರಿಣಾಮ ಬೀರುತ್ತಿರುವ ಎಷ್ಟು ಆಹಾರ ಮಳಿಗೆ, ಹೋಟೆಲ್‌ಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಫುಡ್ ಇನ್ಸ್‌ಪೆಕ್ಟರ್‌ಗಳು ಎಷ್ಟು ಸ್ಯಾಂಪಲ್ ಸಂಗ್ರಹಿಸಿ ಅವುಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಬಂದಿರುವ ವರದಿಗಳ ವಿವರಗಳೇನು ;

(ಆ) ಪ್ರತಿನಿತ್ಯ ಆಹಾರ ನಿರೀಕ್ಷಕರು ನಿಯಮಿತವಾಗಿ ಆಹಾರ ಕಲಬೆರಕೆ ಅಗುವುದನ್ನು ತಡೆಯುಲು ಹಾಕಿಕೊಂಡಿರುವ ಕಾರ್ಯಕ್ರಮಗಳೇನು ; ಇದನ್ನು ತಡೆಗಟ್ಟಲು ಆಹಾರ ಇಲಾಖೆ ಸಂಪೂರ್ಣವಾಗಿ ವಿಫಲವಾಗಿರುವುದನ್ನು ಸರ್ಕಾರ ಪರಿಗಣಿಸಿ ಈ ಬಗ್ಗೆ ಬದಲಿ ಯೋಜನೆಗೆ ಚಿಂತಿಸುತ್ತಿದೆಯೇ ;

(ಇ) ರಾಜ್ಯದಲ್ಲಿ ಈ ಆಹಾರ ಕಲಬೆರಕೆ ಸೇವನೆಯಿಂದ ಅನೇಕ ಯುವಕರು, ಯುವತಿಯರು ಆಕಸ್ಮಿಕ ನಿಧನಕ್ಕೆ ಒಳಗಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲು ಹಾಕಿಕೊಂಡಿರುವ ಕಾರ್ಯಕ್ರಮಗಳೇನು ;

(ಈ) ಬ್ರಾಯ್ಲರ್ ಕೋಳಿಗಳು ಬೇಗ ಬೆಳೆಯಲು ಅವುಗಳಿಗೆ ಔಷಧಿ ಇಂಜೆಕ್ಟ್ ಮಾಡುತ್ತಿರುವುದರಿಂದ ಅವು ತಿನ್ನಲು ಯೋಗ್ಯವೇ ; ಈ ಮಾಂಸ ತಿನ್ನುವವರು ಹೆಚ್ಚು ಜನ ಯುವಕರು ಹೃದಯಾಘಾತಕ್ಕೆ ಒಳಗಾಗುತ್ತಿರುವುದರ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಿ ಈ ಅಂಶವನ್ನು ಗಂಭೀರವಾಗಿ ಪರಿಗಣಿಸಲು ಮತ್ತು ವೈಜ್ಞಾನಿಕ ವಿಶ್ಲೇಷಣೆಗೆ ಒಳಪಡಿಸಲು ಮುಂದಾಗುವುದೇ ?

## ಅರಣ್ಯ ಜಮೀನುಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೯ (೬೫೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಳ್ಳಿಗಳಲ್ಲಿ ಅರಣ್ಯ ಜಮೀನು ಆಕ್ರಮಿಸಿ ಮನೆ ಕಟ್ಟಿಕೊಳ್ಳುತ್ತಿರುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿರುವುದನ್ನು ಸರ್ಕಾರ ಪತ್ತೆ ಹಚ್ಚಿದೆಯೇ ; ಇದನ್ನು ತಡೆಗಟ್ಟಲು ಕಟ್ಟುತ್ತಿರುವ ಕಟ್ಟಡಗಳ ಕಾರ್ಯ ನಿಲ್ಲಿಸಲು ಅರಣ್ಯ ಇಲಾಖೆ ಮುಂದಾಗದಿರಲು ಕಾರಣಗಳೇನು ;

(ಆ) ಅನೇಕ ಕಡೆ ಪ್ರಕರಣಗಳನ್ನು ಆಯಾ ತಾಲ್ಲೂಕಿನ ಅರಣ್ಯ ಅಧಿಕಾರಿಗಳ ಗಮನಕ್ಕೆ ತಂದಾಗ ಅವರ ಮೇಲೆ ಎಫ್.ಐ.ಆರ್ ಹಾಕಲಾಗಿದೆ ಎಂದು ಹೇಳಿ ಅವರು ಕಟ್ಟಡ ನಿರ್ಮಾಣ ಮುಂದುವರಿಸಲು ಅವಕಾಶ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಅರಣ್ಯ ಭೂಮಿ ಉಳಿಸಲು ಏನು ಕ್ರಮ ಜರುಗಿಸಲಾಗಿದೆ ;

(ಇ) ಪ್ರತಿ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ಈಗಾಗಲೇ ಅರಣ್ಯ ಭೂಮಿಯಲ್ಲಿ ಅಕ್ರಮವಾಗಿ ಕಟ್ಟಡ, ಮನೆ ಕಟ್ಟುತ್ತಿರುವ ಹಾಗೂ ಮನೆ ನಿರ್ಮಿಸಿಕೊಂಡಿರುವವರ ಮನೆ

ಸಕ್ರಮ ಮಾಡಲಾಗುವುದೇ ಅಥವಾ ಅವರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ಅರಣ್ಯ ಭೂಮಿ ಉಳಿಸಿಕೊಳ್ಳಲಾಗುವುದೇ ?

## ಸಿ.ಆರ್.ಜೆಡ್ ವಲಯದ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೦ (೬೩೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ.ಆರ್.ಜೆಡ್ ವ್ಯಾಪ್ತಿಯಲ್ಲಿ ೧. ೨. ೩ ವಲಯದಲ್ಲಿ ವಾಸವಾಗಿರುವ ಮೀನುಗಾರರ ಸಂಖ್ಯೆ ಎಷ್ಟು; ಈಗಾಗಲೇ ಈ ವಲಯದಲ್ಲಿ ಅನೇಕ ಮೀನುಗಾರರು ನಿಯಮದ ಅರಿವಿಲ್ಲದೆ ಮನೆ ಕಟ್ಟಿಕೊಳ್ಳಲು ಉಪ ಜೀವನಕ್ಕಾಗಿ ಹೋಂ ಸ್ಟೇ ಮಾಡಲು ಸಿ.ಆರ್.ಜೆಡ್ ಅನುಮತಿ ಇಲ್ಲದೆ ಕಟ್ಟಡ ನಿರ್ಮಾಣ ಕಾರ್ಯ ಅರ್ಧದಷ್ಟು ಮಾಡಿದ್ದು, ಇವರುಗಳಿಗೆ ಅನುಮತಿ ನೀಡದೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಲಯ ೩ ರಲ್ಲಿ ಹೋಂ ಸ್ಟೇ ಕಟ್ಟಡ ಕಟ್ಟಿ ಕೊಂಡಿರುವ ಸ್ಥಳೀಯರಿಗೆ ಪೂರ್ವಾನುಮತಿ ಪಡೆದಿಲ್ಲವೆಂಬ ಕಾರಣಕ್ಕೆ ಅನುಮತಿ ನಿರಾಕರಿಸದೆ ಇವರಿಂದ ದಂಡ ಪಾವತಿಸಿಕೊಂಡು ಅನುಮತಿ ನೀಡಲು ಸರ್ಕಾರ ಮುಂದಾಗುವುದೇ ; ಇಂತಹ ಎಷ್ಟು ಪ್ರಕರಣಗಳು ಸರ್ಕಾರದ ಮುಂದೆ ಇದೆ ; (ಹೆಸರು ಸಮೇತ ವಿವರ ಒದಗಿಸುವುದು)

(ಇ) ಕಳೆದ ಎಷ್ಟು ತಿಂಗಳುಗಳಿಂದ ಈ ಪ್ರಕರಣಗಳು ಅರಣ್ಯ ಇಲಾಖೆಯಲ್ಲಿ ಬಾಕಿ ಇದೆ ; ಬಾಕಿ ಇರಲು ಕಾರಣವೇನು ; ಇದರ ನಿವಾರಣೆಗೆ ಇರುವ ಮಾರ್ಗ/ಉಪಾಯಗಳೇನು ?

## ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಶೂ, ಸಾಕ್ಸ್ ವಿತರಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೯೧ (೬೮೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ಯಾವ ವರ್ಷದಿಂದ ಉಚಿತ ಶೂ ಭಾಗ್ಯ ನೀಡಲಾಗುತ್ತಿದೆ ; ಒಂದು ಮಗುವಿಗೆ ಎಷ್ಟು ಜೊತೆ ಶೂ, ಸಾಕ್ಸ್ ನೀಡಲಾಗುತ್ತಿದೆ ; ಈ ಯೋಜನೆಗೆ ಸರ್ಕಾರ ವರ್ಷಕ್ಕೆ ಎಷ್ಟು ಅನುದಾನ ನೀಡುತ್ತಿದೆ ; ಯಾವ ಯಾವ ತರಗತಿಗೆ ಎಷ್ಟು ದರದಲ್ಲಿ ಶೂ, ಸಾಕ್ಸ್ ನೀಡಲಾಗುವುದು ;

(ಆ) ಶೂ, ಸಾಕ್ಸ್ ಖರೀದಿ ಹೊಣೆ ಯಾರಿಗೆ ವಹಿಸಲಾಗಿದೆ ; ಈ ಯೋಜನೆಯಡಿ ಯಾವ ರೀತಿ ಹಣ ಬಿಡುಗಡೆಯಾಗುತ್ತದೆ ; ಈ ಯೋಜನೆಯಡಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶೂ, ಖರೀದಿಸಬೇಕಾದರೆ ಹೆಚ್ಚುವರಿ ಹಣ ಅಗತ್ಯವಿದ್ದು ಮುಖ್ಯ ಶಿಕ್ಷಕರು ದಾನಿಗಳು, ಸಂಘ ಸಂಸ್ಥೆ ಹಾಗೂ ಪೋಷಕರ ಬಳಿ ಹಣ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿ ಎಷ್ಟು ಪ್ರಕರಣಗಳು ಗಮನಕ್ಕೆ ಬಂದಿದೆ ;

(ಇ) ಈ ಯೋಜನೆಯಡಿ ಮುಖ್ಯ ಶಿಕ್ಷಕರು, ದಾನಿಗಳು, ಸಂಘ ಸಂಸ್ಥೆ ಹಾಗೂ ಪೋಷಕರಿಂದ ಎಷ್ಟು ಹಣ ಇದುವರೆಗೂ ವಸೂಲಿ ಮಾಡಲಾಗಿದೆ ?

## ಸರ್ಕಾರಿ ಶಾಲೆಗಳಿಗೆ C.S.R ನಿಧಿಯಡಿ ಅನುದಾನ ಮಂಜೂರು ಮಾಡಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೯೨ (೬೮೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಾರ್ಪೋರೇಟ್ ಸಂಸ್ಥೆಗಳು ಸಿ.ಎಸ್.ಆರ್ ನಿಧಿಯನ್ನು ಅನ್ಯ ರಾಜ್ಯಗಳ ಖಾಸಗಿ ಸೇವಾ ಸಂಸ್ಥೆಗಳಿಗೆ (ಎನ್.ಜಿ.ಓ) ಗಳಿಗೆ ಚೆಕ್ ನಲ್ಲಿ ನೀಡಿ ಅದರಲ್ಲಿ ಶೇ.೫೦ ರಷ್ಟನ್ನು ನಗದು ಸ್ವರೂಪದಲ್ಲಿ ವಾಪಸ್ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತಹ ಸಂಸ್ಥೆಗಳ ವಿರುದ್ಧ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ;

(ಇ) ರಾಜ್ಯದಲ್ಲಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲು ಸಿ.ಎಸ್.ಆರ್ ನಿಧಿಯಲ್ಲಿ ಪ್ರತಿ ವರ್ಷ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; ಅದರಲ್ಲಿ ಕಳೆದ ವರ್ಷ ಎಷ್ಟು ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲು ಸಿ.ಎಸ್.ಆರ್ ನಿಧಿಯಲ್ಲಿ ಅನುದಾನ ಬಳಕೆಗೆ ಸರ್ಕಾರವು ಂಯಾವ ರೀತಿ ಮಾರ್ಗಸೂಚಿಗಳನ್ನು ತಯಾರಿಸಿದೆ ? (ಮಾರ್ಗಸೂಚಿಯ ಪ್ರತಿ ನೀಡುವುದು)

## ರಾಜ್ಯದಲ್ಲಿ ಆಹಾರ ಪದಾರ್ಥಗಳಲ್ಲಿ ಕಲಬೆರಕೆ ಮಾಡುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೯೩ (೬೮೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಪದಾರ್ಥಗಳಲ್ಲಿ ಕಲಬೆರಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಆಹಾರ ಪದಾರ್ಥಗಳಲ್ಲಿ ಕಲಬೆರಕೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಇದನ್ನು ತಡೆಗಟ್ಟಲು ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ;

(ಆ) ರಾಜ್ಯ ಗಡಿ ಭಾಗಗಳಲ್ಲಿ ನಕಲಿ ಹಾಲಿನ ಪುಡಿ ಹಾಗೂ ರಾಸಾಯನಿಕ ಬಳಸಿ ನಕಲಿ ಹಾಲು ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಯಾವ ಡೈರಿಗಳಲ್ಲಿ ಈ ರೀತಿ ಕಲಬೆರಕೆ

ಮಾಡಲಾಗುತ್ತಿದೆ ; ಈ ನಕಲಿ ಹಾಲು ಹೊರ ರಾಜ್ಯದ ಯಾವ ಸಂಸ್ಥೆಗೆ ಪೂರೈಕೆಯಾಗುತ್ತದೆ ; ಈ ರೀತಿ ನಕಲಿ ಹಾಲನ್ನು ತಯಾರಿಸುವವರ ಮೇಲೆ ಮತ್ತು ಅದನ್ನು ತಪಾಸಣೆ ಮಾಡದೆ ಖರೀದಿ ಮಾಡಿದ ಡೈರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಅನ್ನ ಭಾಗ್ಯ ಯೋಜನೆಯಡಿ ಅಕ್ಕಿ ವಿತರಣೆ ಆಗುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೯೪ (೬೮೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ BPL ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳೆಷ್ಟು ;

(ಆ) ಅನ್ಯಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಎಷ್ಟು ಕೆ.ಜಿ. ಅಕ್ಕಿಯನ್ನು ವಿತರಿಸಲಾಗಿದೆ ;

(ಇ) ಕೆಲವು ಕುಟುಂಬಗಳು ಪಡೆಯುತ್ತಿರುವ ಅಕ್ಕಿ ಪ್ರಮಾಣವು ತಿಂಗಳ ಬಳಕೆಯಾಗಿ ಹೆಚ್ಚುವರಿಯಾಗಿ ಉಳಿಯುತ್ತಿರುವುದು ಹಾಗೂ ಕಾಳಸಂತೆಯಲ್ಲಿ ಈ ಅಕ್ಕಿಯು ಮಾರಾಟ ಆಗುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಆಗುತ್ತಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಅಕ್ಕಿಯು ದುರುಪಯೋಗವಾಗದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ S.S.L.C ಫಲಿತಾಂಶ ಅನುದಾನಿತ ಶಾಲೆಗಳಲ್ಲಿ ಕುಸಿತವಾಗುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೯೫ (೬೮೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಅನುದಾನಿತ ಶಾಲೆಗಳಲ್ಲಿ ಕುಸಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೫ ವರ್ಷಗಳಲ್ಲಿ ಎಷ್ಟು ಶೇಕಡಾ ಫಲಿತಾಂಶ ಕಡಿಮೆಯಾಗಿದೆ ; ಎಸ್.ಎಲ್.ಸಿ ಫಲಿತಾಂಶ ಹೆಚ್ಚಿಸಲು ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ;

(ಆ) ಎಸ್.ಎಸ್.ಎಲ್.ಸಿ ಫಲಿತಾಂಶ ಹೆಚ್ಚಿಸಲು ಸರ್ಕಾರಿ ಶಾಲಾ ಶಿಕ್ಷಕರಿಗೆ ಟಾಸ್ಕ್ ನೀಡಲಾಗಿದೆಯೇ ; ನೀಡಿದ್ದಲ್ಲಿ, ಎಸ್.ಎಸ್.ಎಸ್.ಎಲ್.ಸಿ ಫಲಿತಾಂಶ ಹೆಚ್ಚಾಗಿದೆಯೇ ; ಎಷ್ಟು ಫಲಿತಾಂಶ ಹೆಚ್ಚಾಗಿದೆ ;

(ಇ) ಅನುದಾನಿತ ಶಾಲೆಗಳಲ್ಲಿ ದಾಖಲಾತಿ ಕುಸಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ಐ.ಟಿ.ಐ ಕಾಲೇಜಿನ ಉಪನ್ಯಾಸಕರ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೬೯೬ (೬೫೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಐ.ಟಿ.ಐ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ಹಾಗೂ ಈ ಐ.ಟಿ.ಐ ಕಾಲೇಜಿನಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಐ.ಟಿ.ಐ ಕಾಲೇಜಿನ ಉಪನ್ಯಾಸಕರುಗಳ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ಯಾವ ಸಾಲಿನಲ್ಲಿ ಜಾರಿ ಮಾಡಲಾಗಿದೆ ;

(ಇ) ಈ ನಿಯಮಾವಮಾವಳಿಯನ್ನು ಸರ್ಕಾರ ಪರಿಷ್ಕರಣೆ ಮಾಡಲಾಗಿದೆಯೇ ; ಆಗದಿದ್ದಲ್ಲಿ, ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ಸರ್ಕಾರ ಯಾವಾಗ ಪರಿಷ್ಕರಣೆ ಮಾಡಲಾಗುತ್ತದೆ ?

## ಖಾಸಗಿ ಶಾಲೆಯನ್ನು ತೆರೆಯಲು ಶಾಲಾ ಶಿಕ್ಷಣ ಇಲಾಖೆ ರೂಪಿಸಿರುವ ನಿಯಮಗಳ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೬೯೭ (೬೫೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಲ್ಲಾ ವರ್ಗದ ಖಾಸಗಿ ಶಾಲೆಯನ್ನು ತೆರೆಯಲು ಶಾಲಾ ಶಿಕ್ಷಣ ಇಲಾಖೆ ವತಿಯಿಂದ ರೂಪಿಸಿರುವ ನಿಯಮಾವಳಿಗಳು ಯಾವುವು ;

(ಆ) ಈ ನಿಯಮಾವಳಿಯಲ್ಲಿ ಯಾವುದಾದರೂ ಅಂಶಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ನಡೆಯುತ್ತಿದೆಯೇ ; ನಡೆಯುತ್ತಿದ್ದರೆ ಅವುಗಳ ಸ್ಥಿತಿಗತಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ನ್ಯಾಯಾಲಯವು ನಿಯಾಮಾವಳಿಯಲ್ಲಿನ ಯಾವ ಯಾವ ಅಂಶಗಳಿಗೆ ಯಾವ ರೀತಿಯ ಸ್ಪಷ್ಟ ನಿರ್ದೇಶನವನ್ನು ನೀಡಿದೆ ಮತ್ತು ಯಾವ ಅಂಶಗಳಿಗೆ ಆಕ್ಷೇಪಣೆ ಮಾಡಿದೆ ಹಾಗೂ ಯಾವ ಅಂಶಗಳನ್ನು ಸರಿಯಿದೆ ಎಂದಿದೆ ಮತ್ತು ಯಾವ ಅಂಶಗಳನ್ನು ರದ್ದುಪಡಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಇದಕ್ಕೆ ಸಂಬಂಧಿಸಿದಂತೆ ಈ ಹಿಂದೆ ಯಾವುದಾದರೂ ಸಮಿತಿಯನ್ನು ರಚಿಸಿ ವರದಿ ನೀಡಲು ಸರ್ಕಾರ ಸೂಚಿಸಿತ್ತೆ ; ಆ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಒಪ್ಪಿಸಿದೆಯೇ ; ಸಮಿತಿಯು ವರದಿಯನ್ನು ನೀಡಿಲ್ಲವಾದಲ್ಲಿ ಯಾವಾಗ ವರದಿಯನ್ನು ನೀಡುವುದು ?

## ಮೈಸೂರು ಜಿಲ್ಲಾಸ್ಪತ್ರೆ ವ್ಯಾಪ್ತಿಯಲ್ಲಿ ನರ್ಸಿಂಗ್ ಕಾಲೇಜು ಸ್ಥಾಪಿಸುವ ಕುರಿತು

**ಡಾ॥ ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೮ (೭೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಮೈಸೂರು ಜಿಲ್ಲಾಸ್ಪತ್ರೆಯು ನರ್ಸಿಂಗ್ ಕಾಲೇಜು ಆರಂಭಿಸಲು ಅವಶ್ಯವಿರುವ ಎಲ್ಲಾ ಮೂಲ ಸೌಕರ್ಯಗಳನ್ನು ಹೊಂದಿದೆಯೇ ; ಹೊಂದಿದ್ದರೆ, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಭಾಗದಲ್ಲಿ ಸಾಕಷ್ಟು ಪ್ರತಿಭಾವಂತ ವಿದ್ಯಾರ್ಥಿಗಳಿದ್ದು, ನರ್ಸಿಂಗ್ ಕೋರ್ಸ್‌ಗೆ ವಿವಿಧ ರಾಜ್ಯಗಳಿಗೆ ವಲಸೆ ಹೋಗುತ್ತಿದ್ದಾರೆ, ಈ ಕುರಿತು ಜಿಲ್ಲಾಸ್ಪತ್ರೆಯಡಿ ನರ್ಸಿಂಗ್ ಕಾಲೇಜು ತೆರೆಯುವ ಉದ್ದೇಶ ಸರ್ಕಾರಕ್ಕೆ ಇದೆಯೇ ? (ಇದ್ದಲ್ಲಿ, ವಿವರ ನೀಡುವುದು)

## ಗ್ರಾಮಠಾಣಾ ಅಕ್ಕಪಕ್ಕದ ಜಮೀನುಗಳ ಮನೆಗಳಿಗೆ ವಿದ್ಯುತ್ ಸಂಪರ್ಕ ಕುರಿತು

**ಡಾ॥ ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯೯ (೭೭೮) ಮಾನ್ಯ ಇಂಧನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಾದ್ಯಂತ ಗ್ರಾಮ ಠಾಣಾ ವ್ಯಾಪ್ತಿಯ ಅಕ್ಕಪಕ್ಕದಲ್ಲಿನ ಜಮೀನುಗಳಲ್ಲಿ ನಿರ್ಮಿಸಿರುವ ಮನೆಗಳಿಗೆ ವಿದ್ಯುತ್ ಸಂಪರ್ಕವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಈ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ದಾವಣಗೆರೆ ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೦ (೭೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇಲ್ಲಿರುವ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಸಿಬ್ಬಂದಿಗಳೆಷ್ಟು ; ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಪ್ರಸ್ತುತ ಖಾಲಿ ಇರುವ ವೈದ್ಯರು, ತಜ್ಞ ವೈದ್ಯರು ಹಾಗೂ ವೈದ್ಯೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮ ವಹಿಸಲಾಗಿದೆಯೇ ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ದಾವಣಗೆರೆ ಜಿಲ್ಲೆಯಲ್ಲಿ ಒಟ್ಟಾರೆ ಎಷ್ಟು ಆಂಬ್ಯುಲೆನ್ಸ್‌ಗಳು ಕಾರ್ಯ ನಿರ್ವಹಿಸುತ್ತಿವೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೧ (೭೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇರುವ ಕಾರ್ಡ್‌ಗಳನ್ನು ಪರಿಷ್ಕರಿಸಲಾಗುತ್ತಿದೆಯೇ ; ಇದ್ದಲ್ಲಿ, ಸದರಿ ಕಾರ್ಡ್‌ಗಳ ಪರಿಷ್ಕರಣೆಯು ಈಗ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರಾಜ್ಯದ ಗ್ರಾಹಕರಿಗೆ ಹೊಸದಾಗಿ ಪಡಿತರ ಚೀಟಿಗಳನ್ನು ನೀಡಲಾಗುತ್ತಿದೆಯೇ ; ಇದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಹೊಸದಾಗಿ ಪಡಿತರ ಚೀಟಿಗಳನ್ನು ಪಡೆಯಲು ಇರುವ ಮಾನದಂಡಗಳಾವುವು ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; ಎಷ್ಟು ಪಡಿತರ ಚೀಟಿಗಳು ವಿತರಣೆಯಾಗಿವೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕ್ಯಾಥ ಲ್ಯಾಬ್ (ಹೃದಯ ಘಟಕ) ಕಾರ್ಯರಂಭ ಮಾಡದಿರುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೨ (೬೨೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕೆಲವು ತಿಂಗಳ ಹಿಂದೆ ಹೃದ್ರೋಗಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಉದ್ಘಾಟನೆಯಾದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಕ್ಯಾಥ ಲ್ಯಾಬ್ (ಸೂಪರ್ ಸ್ಪೆಷಾಲಿಟಿ ಹೃದ್ರೋಗ ಘಟಕ) ಇನ್ನೂ ಕಾರ್ಯಾರಂಭ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಸದರಿ ಆಸ್ಪತ್ರೆಯಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡದೇ ಹೃದ್ರೋಗಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಜಿಲ್ಲೆಗೆ ತಜ್ಞ ವೈದ್ಯರನ್ನು ಯಾವಾಗ ನೇಮಕ ಮಾಡಲಾಗುವುದು ? (ಮಾಹಿತಿ ನೀಡುವುದು)

## ದೈಹಿಕ ಶಿಕ್ಷಕರಿಲ್ಲದೆ ಹಾಗೂ ಮೈದಾನವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೩ (೬೨೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಪ್ರೌಢ ಶಾಲೆಯಲ್ಲಿ ದೈಹಿಕ ಶಿಕ್ಷಕರಿಲ್ಲದೆ ಹಾಗೂ ಮೈದಾನ ಇಲ್ಲದೆ ವಿದ್ಯಾರ್ಥಿಗಳು ದೈಹಿಕ, ಮಾನಸಿಕ ಖಿನ್ನತೆಯಂತಹ ಸಮಸ್ಯೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ದೈಹಿಕ ಶಿಕ್ಷಣದ ಪಠ್ಯ ಅಳವಡಿಸಿರುವ ಸರ್ಕಾರ ರಾಜ್ಯದಲ್ಲಿ ದೈಹಿಕ ಶಿಕ್ಷಕರ ನೇಮಕ ಮಾಡಿಕೊಳ್ಳುತ್ತಿಲ್ಲದಿರುವುದು ಮತ್ತು ಮೂಲಭೂತ ಸೌಲಭ್ಯ ಕಲ್ಪಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದೈಹಿಕ ಶಿಕ್ಷಕರನ್ನು ಯಾವಾಗ ನೇಮಕ ಮಾಡಲಾಗುವುದು ? (ಮಾಹಿತಿ ನೀಡುವುದು)

## ಅಕ್ರಮ ಪಡಿತರ ಚೀಟಿ ಪಡೆದುಕೊಂಡಿರುವ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ ) :–**

೭೦೪ (೬೪೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ ಹೆಚ್.ಡಿ. ಕೋಟೆಯ ಆಹಾರ ಇಲಾಖೆಗೆ ಸುಳ್ಳು ದಾಖಲೆಗಳನ್ನು ನೀಡಿ ಬೇರೆ ಹೆಸರಿನ ಆಧಾರ್ ಕಾರ್ಡ್‌ನ್ನು ಅಕ್ರಮವಾಗಿ ಬಳಸಿ ಪಡೆದುಕೊಂಡಿರುವ (ಪಡಿತರ ನಂ.೨೨೦೧೦೦೨೯೭೩೮)ರದ್ದು ಪಡಿಸಬೇಕೆಂದು ಕೋರಿ ತಾಲ್ಲೂಕು ಮಟ್ಟದ ಆಹಾರ ಇಲಾಖೆ ಅಧಿಕಾರಿ, ಇಲಾಖೆ ಅಧಿಕಾರಿಗಳಿಗೆ ಕಳೆದ ೬ ತಿಂಗಳುಗಳಿಂದ ಎಷ್ಟು ಮನವಿ ದೂರುಗಳು ಬಂದಿವೆ ; (ದೂರು ಸಲ್ಲಿಸಿದವರ ವಿವರ ನೀಡುವುದು)

(ಆ) ಸರ್ಕಾರ ಈ ವಿಷಯದಲ್ಲಿ ಯಾವ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಇ) ಪಡಿತರ ಚೀಟಿ ಪಡೆದುಕೊಂಡಿರುವ ಬಗ್ಗೆ ದೂರುದಾರರು ಸಮಗ್ರ ದಾಖಲೆಗಳನ್ನು ಒದಗಿಸಿದರೂ ಪಡಿತರ ಚೀಟಿ ರದ್ದು ಮಾಡದೇ ಇರಲು ಕಾರಣವೇನು ? (ಮಾಹಿತಿ ನೀಡುವುದು)

## ಶಿಕ್ಷಕರ ಕಲ್ಯಾಣ ನಿಧಿ ಕಛೇರಿಗೆ ಕಂಪ್ಯೂಟರ್ ಪ್ರೋಗ್ರಾಮರ್ ಹುದ್ದೆ ಮಂಜೂರಾತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೫ (೬೫೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರ ಕಲ್ಯಾಣ ನಿಧಿ ಕಛೇರಿಗೆ ಕಂಪ್ಯೂಟರ್ ಪ್ರೋಗ್ರಾಮರ್ ಹುದ್ದೆ ಮಂಜೂರಾಗಿದೆಯೇ ; ಮಂಜೂರಾಗಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ;

(ಆ) ಹುದ್ದೆ ಮಂಜೂರಾಗಿದ್ದಲ್ಲಿ, ಈ ಹುದ್ದೆಯನ್ನು ಭರ್ತಿ ಮಾಡಲಾಗಿದೆಯೆ ; ಭರ್ತಿ ಮಾಡಿದ್ದಲ್ಲಿ, ನೇಮಕಾತಿ ಆದೇಶದ ಪ್ರತಿ ಒದಗಿಸುವುದು ;

(ಇ) ನೇಮಕಾತಿ ಅನುಮೋದನೆಯಾಗಿದೆಯೇ ; ಅನುಮೋದನೆಯಾಗಿದ್ದಲ್ಲಿ, ಸರ್ಕಾರಿ ಆದೇಶದ ಪ್ರತಿ/ಕಾರ್ಯಕಾರಿ ಸಮಿತಿ ನಡವಳಿ ಒದಗಿಸುವುದು ;

(ಈ) ಈ ಹುದ್ದೆಗೆ ಯಾವ ವೇತನ ಶ್ರೇಣಿ ನಿಗಧಿಪಡಿಸಲಾಗಿದೆ ;

(ಉ) ವೇತನ ನಿಗಧಿಪಡಿಸಲು ಅನುಮತಿ ನೀಡಿದ ಆರ್ಥಿಕ ಇಲಾಖೆ ಆದೇಶ/ಸರ್ಕಾರಿ ಆದೇಶ/ಕಾರ್ಯಕಾರಿ ಸಮಿತಿಯ ನಡವಳಿ ಪ್ರತಿ ಒದಗಿಸುವುದು ?

## ಶಿಕ್ಷಣದ ಗುಣಮಟ್ಟ ಕುಸಿದು ನಿರೀಕ್ಷಿತ ಫಲಿತಾಂಶ ಸಿಗದೆ ಇರುವುದರ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೭೦೬ (೬೪೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪ್ರೌಢ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಕುಸಿದು ನಿರೀಕ್ಷಿತ ಫಲಿತಾಂಶ ಬರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಸರ್ಕಾರ ಏನು ಕ್ರಮ ಜರುಗಿಸುತ್ತದೆ ?

## ರಾಜ್ಯದಲ್ಲಿರುವ ಎಲ್ಲಾ ಎಸ್ಕಾಂಗಳಲ್ಲಿ ಸ್ಮಾರ್ಟ್ ಮೀಟರ್ ಅಳವಡಿಸುತ್ತಿರುವ ಕುರಿತು

**ಶ್ರೀ ಟಿ.ಎನ್.ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೭ (೬೩೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಲ್ಲಾ ಎಸ್ಕಾಂಗಳಲ್ಲೂ ಸ್ಮಾರ್ಟ್ ಮೀಟರ್‌ಗಳನ್ನು ಖರೀದಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ ವಿವರಣೆ ನೀಡುವುದು ;

(ಆ) ಹಾಲಿ ಇರುವ ಹಾಗೂ ಇತ್ತೀಚಿಗೆ ಅಳವಡಿಸಿರುವ ಡಿಜಿಟಲ್ ಮೀಟರ್‌ಗೂ ಈಗ ಅಳವಡಿಸಲು ಮುಂದಾಗಿರುವ ಸ್ಮಾರ್ಟ್ ಮೀಟರ್‌ಗೂ ಇರುವ ವ್ಯತ್ಯಾಸಗಳೇನು ; (ವಿವರ ನೀಡುವುದು)

(ಇ) ಈಗ ರಾಜ್ಯದಲ್ಲಿ ಅಳವಡಿಸಲು ಹೊರಟಿರುವ ಪ್ರತಿ ಸ್ಮಾರ್ಟ್ ಮೀಟರ್‌ಗೆ ಎಷ್ಟು ದರವನ್ನು ವಿಧಿಸಲಾಗುತ್ತಿದೆ ಹಾಗೂ ಯಾವ ಕಂಪನಿಯವರಿಗೆ ಯಾವ ಮಾನದಂಡಗಳನ್ನು ಅನುಸರಿಸಿ ಗುತ್ತಿಗೆ ನೀಡಲಾಗುತ್ತಿದೆ ; (ದಾಖಲೆಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಈ ಸ್ಮಾರ್ಟ್ ಮೀಟರ್‌ಗೆ ಹೊರ ರಾಜ್ಯದಲ್ಲಿ ಎಷ್ಟು ದರವನ್ನು ನಿಗದಿಪಡಿಸಲಾಗಿದೆ ಹಾಗೂ ರಾಜ್ಯಗಳಿಂದ ಮಾಹಿತಿ ತರಿಸಿಕೊಳ್ಳಲಾಗಿದೆಯೇ ; (ಮಾಹಿತಿಯನ್ನು ಒದಗಿಸುವುದು)

(ಉ) ಸಾರ್ವಜನಿಕರಿಗೆ ಹೊರೆಯಾಗಿರುವ ಈ ಸ್ಮಾರ್ಟ್ ಮೀಟರ್ ರಾಜ್ಯಕ್ಕೆ ಅವಶ್ಯಕತೆ ಇದೆಯೇ ; ಹಾಲಿ ಅಳವಡಿಸಿರುವ ಡಿಜಿಟಲ್ ಮೀಟರ್‌ನಿಂದ ತೊಂದರೆ ಏನು ? (ವಿವರ ನೀಡುವುದು)

## ಅರಣ್ಯ ಇಲಾಖೆಯ ಜಮೀನುಗಳ ಬಗ್ಗೆ

**ಶ್ರೀ ಟಿ.ಎನ್.ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೮ (೭೩೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಮಂತ್ರಾಯಲದ ಪೂರ್ವಾನುಮತಿಯೊಂದಿಗೆ ಕರ್ನಾಟಕ ಅರಣ್ಯ ಇಲಾಖೆಯ ಸುಪರ್ಧಿನಿಂದ ಬಿಡುಗಡೆಯಾದ ಜಮೀನುಗಳೆಷ್ಟು; (ಸರ್ವೆ ನಂಬರ್‌ವಾರು, ಗ್ರಾಮವಾರು ಹಾಗೂ ತಾಲ್ಲೂಕುವಾರು ವಿಸ್ತೀರ್ಣ ಸಹಿತ ವಿವರ ಒದಗಿಸುವುದು)

(ಆ) ಕರ್ನಾಟಕ ಅರಣ್ಯ ಕಾಯ್ದೆ ೧೯೬೪ರ ಜಾರಿಗೆ ಮುನ್ನ ಶಿವಮೊಗ್ಗ ಜಿಲ್ಲೆಯಲ್ಲಿ ಕಿರು ಅರಣ್ಯವೆಂದು ಘೋಷಿಸಲಾದ ಜಮೀನುಗಳೆಷ್ಟು; (ಸಂಬಂಧಪಟ್ಟ ಅಧಿಸೂಚನೆ ಸಹಿತ ತಾಲ್ಲೂಕುವಾರು, ಸರ್ವೆ ನಂಬರ್ ಹಾಗೂ ವಿಸ್ತೀರ್ಣದೊಂದಿಗೆ ವಿವರಗಳನ್ನು ಒದಗಿಸುವುದು)

(ಇ) ಗೋದವರ್ಮನ ಎದುರು ಯುನಿಯನ್ ಆಫ್ ಇಂಡಿಯಾ ವ್ಯಾಜ್ಯದಲ್ಲಿ ಸರ್ವೋಚ್ಚ ನ್ಯಾಯಾಲಯುದ ಆದೇಶ ದಿನಾಂಕ: ೧೨.೧೨.೧೯೯೬ರ ಅನ್ವಯ ಕರ್ನಾಟಕ ಸರ್ಕಾರದ ಅರಣ್ಯ ಇಲಾಖೆಯು ತೀರ್ಥಹಳ್ಳಿ ಹಾಗೂ ಹೊಸನಗರ ತಾಲ್ಲೂಕುಗಳಲ್ಲಿ ಅರಣ್ಯವೆಂದು ಪರಿಗಣಿಸಿ ಸರ್ವೋಚ್ಚ ನ್ಯಾಯಾಲಯಕ್ಕೆ ಒದಗಿಸಿದ ಮೈನರ್ ಫಾರೆಸ್ಟ್ ಮತ್ತು ರಿಸರ್ವ್ ಫಾರೆಸ್ಟ್‌ಗಳ ಜಮೀನುಗಳೆಷ್ಟು ? (ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು)

(ಈ) ಅರಣ್ಯ ಸಂರಕ್ಷಣಾ ಕಾಯ್ದೆ ೧೯೮೦ ಜಾರಿಗೆ ಮುನ್ನ ಕರ್ನಾಟಕ ಸರ್ಕಾರ ಕೃಷಿ ಸಹಿತ ಇನ್ನಿತರ ಉದ್ದೇಶಗಳಿಗೆ ಅರಣ್ಯ ಪ್ರದೇಶದಲ್ಲಿ ತೀರ್ಥಹಳ್ಳಿ ಹಾಗೂ ಹೊಸನಗರ ತಾಲ್ಲೂಕುಗಳನ್ನು ಕರ್ನಾಟಕ ಸರ್ಕಾರವು ಮಂಜೂರಾತಿ ನೀಡಿದ ಜಮೀನುಗಳೆಷ್ಟು ಹಾಗೂ ಈ ಮಂಜೂರಾತಿಯನ್ನು ಸರ್ವೋಚ್ಚ ನ್ಯಾಯಾಲಯಕ್ಕೆ ನೀಡಿದ ಪ್ರಮಾಣ ಪತ್ರದಲ್ಲಿ ಕಳೆದ (ಕಡಿಮೆ ಮಾಡಿ) ಒದಗಿಸಲಾಗಿದೆಯೇ; (ವಿವರದೊಂದಿಗೆ ಸಂಪೂರ್ಣವಾಗಿ ಮಾಹಿತಿಯುನ್ನು ಒದಗಿಸುವುದು)

(ಉ) ಕರ್ನಾಟಕ ಅರಣ್ಯ ಕಾಯ್ದೆ ೧೯೬೪ರ ಜಾರಿಗೆ ಮುನ್ನ ತೀರ್ಥಹಳ್ಳಿ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಘೋಷಿಸಲಾದ ಕಿರು ಅರಣ್ಯ ಪ್ರದೇಶಗಳಲ್ಲಿ ಕಂದಾಯ ಇಲಾಖೆ ಮಂಜೂರಾತಿ ಮಾಡಿದ ಜಮೀನುಗಳ ವಿವರಗಳನ್ನು ಸರ್ವೆ ನಂಬರ್ ಮತ್ತು ವಿಸ್ತೀರ್ಣ ಸಹಿತ ಮಾಹಿತಿಯನ್ನು ಒದಗಿಸುವುದು ? (ದಾಖಲೆ ಸಮೇತ ವಿವರಗಳನ್ನು ಒದಗಿಸುವುದು)

## ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೦೯ (೬೮೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಕಲಿಕೆಯಿಂದ ಹಿಂದುಳಿದ ಮಕ್ಕಳ ದತ್ತಾಂಶ ಸಂಗ್ರಹಕ್ಕೆ ಸಮೀಕ್ಷೆ ನಡೆಸಲಾಗಿದೆಯೇ ; ನಡೆಸಿದ್ದರೆ, ಮಕ್ಕಳ ಕಲಿಕೆಯ ಗುಣಮಟ್ಟದಲ್ಲಿ ಎಷ್ಟು ಶೇ ವಿದ್ಯಾರ್ಥಿಗಳಲ್ಲಿ, ನ್ಯೂನ್ಯತೆ ಕಂಡು ಬಂದಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಶಾಲಾ ಮಕ್ಕಳ ಕಲಿಕೆಯ ಗುಣಮಟ್ಟ ಯಾವ ಮಟ್ಟದಲ್ಲಿದೆ ; ಎಷ್ಟು ಶೇ.ವಿದ್ಯಾರ್ಥಿಗಳಲ್ಲಿ ಕಲಿಕೆಯ ಗುಣಮಟ್ಟ ಕಡಿಮೆ ಇದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶಾಲಾ ಮಕ್ಕಳ ಕಲಿಕೆಯ ಗುಣಮಟ್ಟ ಸುಧಾರಣೆಗೆ ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಶಿಕ್ಷಕರ ಕೊರತೆಯಿಂದ ಕಲಿಕೆಯ ಗುಣಮಟ್ಟದಲ್ಲಿ ತೊಂದರೆ ಉಂಟಾಗಿದೆಯೇ ಅಥವಾ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಶಿಕ್ಷಕರು ವಿಫಲರಾಗಿದ್ದಾರೆಯೇ ; ಇಲಾಖೆಯು ಶಿಕ್ಷಕರಿಗೆ ಬೋಧನೆಯ ಬದಲು ಇತರ ಕೆಲಸಗಳನ್ನು ನೀಡುತ್ತಿರುವುದು ಕಲಿಕೆಯ ಗುಣಮಟ್ಟ ಕಡಿಮೆ ಆಗಲು ಕಾರಣವಾಗಿದೆಯೇ ;

(ಉ) ಶಿಕ್ಷಕರ ಬೋಧನೆಯ ನೈಪುಣ್ಯತೆ ಹೆಚ್ಚಿಸಲು ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ ; ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲು ಏನು ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಹಾವು ಕಡಿತದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೦ (೬೮೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವು ಕಡಿತವನ್ನು ಘೋಷಿತ ಖಾಯಿಲೆಯೆಂದು ಘೋಷಣೆ ಮಾಡಿದ್ದು ಯಾವಾಗ ; ಘೋಷಿತ ಕಾಯಿಲೆ ಎಂದು ಘೋಷಣೆ ಮಾಡಿದ ನಂತರ ವರದಿಯಾಗಿರುವ ಪ್ರಕರಣಗಳು ಎಷ್ಟು ;

(ಆ) ಹಾವು ಹಿಡಿಯಲು ಸರ್ಕಾರ ಸಿಬ್ಬಂದಿಗಳನ್ನು ಅಥವಾ ಸಂಸ್ಥೆಗಳನ್ನು ನೇಮಕ ಮಾಡಿಕೊಂಡಿದೆಯೇ ; ಎಷ್ಟು ಸಂಸ್ಥೆಗಳು ಅಥವಾ ವ್ಯಕ್ತಿಗಳು ಹಾವು ಹಿಡಿಯಲು ನೋಂದಣಿ ಮಾಡಿಕೊಂಡಿರುತ್ತಾರೆ ;

(ಇ) ಜೀವ ಪಣಕ್ಕಿಟ್ಟು ಹಾವು ಹಿಡಿಯುವವರಿಗೆ ಸರ್ಕಾರ ಗೌರವ ಧನ ಅಥವಾ ಭತ್ಯೆ ನೀಡುತ್ತಿದೆಯೇ ; ಹಾವು ಹಿಡಿಯುವಾಗ ಮೃತಪಟ್ಟವರ ವಿವರ ನೀಡುವುದು ; ಇವರಿಗೆ ಸರ್ಕಾರ ಪರಿಹಾರ ನೀಡಿದೆಯೇ ?

## ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೧ (೬೮೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಯುವಕರ ಮತ್ತು ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಏನೇನು ಕಾರ್ಯಕ್ರಮಗಳನ್ನು

ಹಮ್ಮಿಕೊಳ್ಳಲಾಗಿದೆ ; ಇದಕ್ಕಾಗಿ ಎಷ್ಟು ಅನುದಾನವನ್ನು ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೌಶಲ್ಯಾಭಿವೃದ್ಧಿ ಇಲಾಖೆಯ ಮುಖಾಂತರ ಕಳೆದ ೨ ವರ್ಷಗಳಲ್ಲಿ ಎಷ್ಟು ಯುವಕರಿಗೆ ಮತ್ತು ಮಹಿಳೆಯರಿಗೆ ತರಬೇತಿಯನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ತರಬೇತಿ ಪಡೆದ ಅಭ್ಯರ್ಥಿಗಳು ಉದ್ಯೋಗವನ್ನು ಪಡೆದುಕೊಂಡಿದ್ದಾರೆಯೇ ; ಎಷ್ಟು ಜನ ಅಭ್ಯರ್ಥಿಗಳಿಗೆ ಉದ್ಯೋಗ ದೊರಕಿದೆ ; ಎಷ್ಟು ಜನ ಅಭ್ಯರ್ಥಿಗಳು ಸ್ವ–ಉದ್ಯೋಗವನ್ನು ನಡೆಸುತ್ತಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಲ್ಲಿ ಎಷ್ಟು ಅಭ್ಯರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗಿದೆ ; ಒಬ್ಬ ಅಭ್ಯರ್ಥಿಗೆ ಎಷ್ಟು ದಿನದ ತರಬೇತಿ ನೀಡಲಾಗುತ್ತದೆ ; ಎಷ್ಟು ವೆಚ್ಚವಾಗುವುದು ;

(ಈ) ಸದರಿ ಜಿಲ್ಲೆಗಳಲ್ಲಿ ಯಾವ ಯಾವ ಸಂಸ್ಥೆಗಳು ಪ್ರಸ್ತುತ ಕೌಶಲ್ಯಾಭಿವೃದ್ಧಿ ತರಬೇತಿ ನೀಡುತ್ತಿವೆ ?

## ಬಿ.ಪಿ.ಎಲ್ ಕಾರ್ಡ್‌ಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೨ (೬೮೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷದಲ್ಲಿ ಒಟ್ಟು ಎಷ್ಟು ಬಿ.ಪಿ.ಎಲ್ ಕಾರ್ಡ್ ಗಳನ್ನು ರದ್ದುಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ೨ ವರ್ಷಗಳಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; ಎಷ್ಟು ಹೊಸ ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು) ಯಾವೆಲ್ಲಾ ಕಾರಣಗಳಿಗಾಗಿ ಬಿ.ಪಿ.ಎಲ್ ಕಾರ್ಡ್‌ನ್ನು ರದ್ದುಪಡಿಸಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರಸ್ತುತ ಅರ್ಹರಿಗೆ ಹೊಸದಾಗಿ ಬಿ.ಪಿ.ಎಲ್ ಕಾರ್ಡ್‌ನ್ನು ನೀಡಲಾಗುತ್ತಿದೆಯೇ ; ಕಳೆದ ೨ ವರ್ಷದಲ್ಲಿ ಬಿ.ಪಿ.ಎಲ್ ಕಾರ್ಡ್‌ಗೆ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ ; ಎಷ್ಟು ಅರ್ಜಿಗಳನ್ನು ಇತ್ಯರ್ಥ ಪಡಿಸಲಾಗಿದೆ ; ಎಷ್ಟು ಅರ್ಜಿಗಳನ್ನು ತಿರಸ್ಕರಿಸಲಾಗಿದೆ ;

(ಈ) ಆದಾಯ ತೆರಿಗೆ ಪಾವತಿದಾರರು ಹಾಗೂ ಇನ್ನೂ ಕೆಲ ಅನರ್ಹರು ಕೂಡ ಬಿ.ಪಿ.ಎಲ್ ಕಾರ್ಡ್‌ಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಅನರ್ಹರ ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲು ಏನೇನು ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಅರಣ್ಯ ಇಲಾಖೆಯ ಜಮೀನುಗಳ ಒತ್ತುವರಿ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೩ (೬೩೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ತಾಲ್ಲೂಕಿನ ಅರಣ್ಯ ಇಲಾಖೆಯ ಜಮೀನಿನ ವಿಸ್ತೀರ್ಣವೆಷ್ಟು ; ಇದರಲ್ಲಿ ಒತ್ತುವರಿಯಾಗಿರುವ ಜಮೀನಿನ ವಿಸ್ತೀರ್ಣವೆಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಇದುವರೆಗೂ ತೆರವುಗೊಳಿಸಿರುವ ಜಮೀನಿನ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಇ) ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಯದೇವ ಹೃದ್ರೋಗ ಆಸ್ಪತ್ರೆಯ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೪ (೫೭೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರದಲ್ಲಿ ಜಯದೇವ ಹೃದ್ರೋಗ ವಿಜ್ಞಾನ ಹಾಗೂ ಸಂಶೋಧನಾ ಸಂಸ್ಥೆಯು ಎಂದಿನಿಂದ ಕಾರ್ಯನಿರ್ವಹಿಸುತ್ತಿದೆ ; ಹಾಗೂ ಇದುವರೆವಿಗೂ ಎಷ್ಟು ರೋಗಿಗಳು ಹೃದಯ ತಪಾಸಣೆಗೆ ಒಳಾಗಾಗಿದ್ದಾರೆ ; (ವಿವರ ನೀಡುವುದು)

(ಆ) ಸದರಿ ಆರೋಗ್ಯ ಸಂಸ್ಥೆಯಲ್ಲಿ ನುರಿತ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿದ್ದು, ನಿವಾರಣೆಗೆ ಹಾಗೂ ಸಿಬ್ಬಂದಿಗಳ ನೇಮಕಾತಿಯಲ್ಲಿ ಸ್ಥಳೀಯರಿಗೆ ಆದ್ಯತೆ ನೀಡುವ ಬಗ್ಗೆ ಸರ್ಕಾರ ರೂಪಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಈ ಆರೋಗ್ಯ ಸಂಸ್ಥೆಂಯು ಕಲಬುರಗಿಂಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪ್ರಚಾರದ ಕೊರತೆಯಿದ್ದು, ಕಲ್ಯಾಣ ಕರ್ನಾಟಕ ಭಾಗದ ಹಿಂದುಳಿದ ತಾಲ್ಲೂಕುಗಳಲ್ಲಿ ಹೃದಯ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ಕೊರತೆಯನ್ನು ನಿವಾರಿಸಲು ಸ್ಥಳೀಯ ವಾಹಿನಿ, ಸ್ಥಳೀಯ ದಿನಪತ್ರಿಕೆ ಹಾಗೂ ಸಂಘ ಸಂಸ್ಥೆಗಳ ಮೂಲಕ ಪ್ರಚಾರ ಪಡಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ಈ ಹೃದ್ರೋಗ ಸಂಸ್ಥೆಗೆ "ಜಯದೇವ" ಎಂಬ ಹೆಸರು ಬರಲು ಕಾರಣವೇನು ; ಇವರು ಯಾರು, ಈ ಸಂಸ್ಥೆಗೆ ಸದರಿಯವರ ಕೊಡುಗೆ ಏನು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿಯಲ್ಲಿ ರಾಜ್ಯ ಗ್ರಾಹಕರ ವ್ಯಾಜ್ಯ ಪರಿಹಾರ ಸಂಚಾರಿ ಪೀಠದ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೫ (೫೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ರಾಜ್ಯ ಗ್ರಾಹಕರ ವ್ಯಾಜ್ಯ ಪರಿಹಾರ ಸಂಚಾರಿ ಪೀಠ ಪ್ರಾರಂಭಿಸಲಾಗಿದೆಯೇ ; ಪ್ರಾರಂಭಿಸಲಾಗಿದ್ದಲ್ಲಿ, ಈ ಕಛೇರಿಯು ಎಲ್ಲಿ ಕಾರ್ಯನಿರ್ವಹಿಸುತ್ತಿದೆ ಹಾಗೂ ಈ ಪೀಠಕ್ಕೆ ಇದುವರೆವಿಗೂ ವರ್ಗಾವಣೆಯಾದ/ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಲಬುರಗಿ ಪೀಠಕ್ಕೆ ವರ್ಗಾವಣೆಯಾದ ಪ್ರಕರಣಗಳ ದಾಖಲೆಗಳನ್ನು ಪುನಃ ಬೆಂಗಳೂರಿಗೆ ಹಿಂತಿರುಗಿಸಲು ಕಾರಣಗಳೇನು ;

(ಇ) ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಖಾಯಂ ಸಂಚಾರಿ ಪೀಠಗಳಿಗೆ ಅನುಮೋದನೆಯಾದ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳಿಗೆ ಹಣಕಾಸು ಇಲಾಖೆಯ ಒಪ್ಪಿಗೆ ಇದ್ದರೂ ಹುದ್ದೆಗಳ ಕಡಿತಕ್ಕೆ ಕಾರಣಗಳೇನು ; ೩೭೧(ಜೆ) ರನ್ವಯ ಹುದ್ದೆಗಳ ನೇಮಕಾತಿಗೆ ನಿರ್ಬಂಧವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಗುಲ್ಬರ್ಗಾ ವಿಶ್ವವಿದ್ಯಾಲಯ ಕುಲಪತಿ ಹಾಗೂ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳ ನೇಮಕಾತಿ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೬ (೫೭೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ವಿಶ್ವವಿದ್ಯಾನಿಲಯವು ಕುಲಪತಿ ಹಾಗೂ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳ ಕೊರತೆಯಿಂದ ಗಂಭೀರ ಸಮಸ್ಯೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಗುಲ್ಬರ್ಗಾ ವಿಶ್ವವಿದ್ಯಾನಿಲಯಕ್ಕೆ ಕುಲಪತಿ ನೇಮಕಾತಿ ಮಾಡುವ ಸಲುವಾಗಿ ಶೋಧನಾ ಸಮಿತಿಯನ್ನು ಯಾವಾಗ ರಚಿಸಲಾಯಿತು ; ಹಾಗೂ ಸದರಿ ಸಮಿತಿಯು ಅಂತಿಮ ಶಿಫಾರಸ್ಸು ಮಾಡಿದ್ದು ಯಾವಾಗ ; ಇದುವರೆವಿಗೂ ಕುಲಪತಿ ನೇಮಕವಾಗದಿರಲು ಕಾರಣವೇನು ;

(ಇ) ಈ ಕುಲಪತಿ ಹುದ್ದೆಗೆ ೩೭೧(ಜೆ) ಪ್ರಕಾರ ಸ್ಥಳೀಯ ಪ್ರತಿಭಾವಂತ ಪ್ರಾಧ್ಯಾಪಕರಿಗೆ ಆಧ್ಯತೆ ನೀಡಲು ಸರ್ಕಾರ ಕ್ರಮ ವಹಿಸುವುದೇ ? (ವಿವರ ನೀಡುವುದು)

## MD-BIO-CHEMISTRY ಕೋರ್ಸ್‌ಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೭ (೬೯೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಕಾಲೇಜಿನಲ್ಲಿ MD-BIO-CHEMISTRY ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಲಾಗಿದೆ ಅಥವಾ ನೀಡಲಾಗಿತ್ತು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) MD-BIO-CHEMISTRY ಕೋರ್ಸ್‌ನಲ್ಲಿ ಇಲ್ಲಿಯವರೆಗೆ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) MD-BIO-CHEMISTRY ಕೋರ್ಸ್ ಮುಗಿಸಿದ ಎಷ್ಟು ವಿದ್ಯಾರ್ಥಿಗಳು ನೇಮಕಾತಿ ಹೊಂದಿದ್ದಾರೆ ಮತ್ತು ಯಾವ ಯಾವ ಪ್ರವರ್ಗದ ವಿದ್ಯಾರ್ಥಿಗಳು ನೇಮಕಗೊಂಡಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) MD-BIO-CHEMISTRY ಕೋರ್ಸ್‌ಗಳನ್ನು ನಿಲ್ಲಿಸಲು ಕಾರಣವೇನು ; ಈ ಹಿಂದೆ ವಿದ್ಯಾಭ್ಯಾಸ ಮಾಡಿರುವ ವಿದ್ಯಾರ್ಥಿಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O58/350 ಪ್ರತಿಗಳು/04–08–2025